ಕರ್ನಾಟಕ ಸರ್ಕಾರ
(ಪೊಲೀಸ್ ಇಲಾಖೆ)

**ಪೊಲೀಸ್ ಆಯುಕ್ತರು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ**

**ಭಾಸ್ಕರ್ ರಾವ್, ಐ.ಪಿ.ಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ.**

**ವಿಷಯ** : ದಿನಾಂಕ: 03-02-2019 ರಿಂದ ಮುಂದಿನ 20 ದಿನಗಳ ವರೆಗೆ ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘ ವತಿಯಿಂದ ಗೌರವಾಧ್ಯಕ್ಷರಾದ ಶ್ರೀಮತಿ ಎಸ್.ವರಲಕ್ಷ್ಮಿ ಹಾಗೂ ಸಂಘದ ಇತರೆ ಪದಾಧಿಕಾರಿಗಳ ನೇತೃತ್ವದಲ್ಲಿ ನಡೆಸಲು ಉದ್ದೇಶಿಸಿರುವ ಪ್ರತಿಭಟನೆ ಹಾಗೂ ಇತರೆ ಯಾವುದೇ ಅಕ್ಷರ ದಾಸೋಹ ಕಾರ್ಯಕರ್ತೆರು ಪ್ರತಿಭಟನೆ ನಡೆಸದಂತೆ ಕಲಂ 144(3), ಸಿ.ಆರ್.ಪಿ.ಸಿ. ರೀತ್ಯಾ ಪ್ರತಿಬಂಧಕಾಜ್ಞೆಯನ್ನು ಜಾರಿಗೊಳಸುವ ಬಗ್ಗೆ.

**ಉಲ್ಲೇಖ** : ಉಪ ಪೊಲೀಸ್ ಆಯುಕ್ತರು, ಪಶ್ಚಿಮ ವಿಭಾಗ ರವರ ಕಛೇರಿ ಪತ್ರ ಸಂಖ್ಯೆ: ಎಸ್‌ಬಿ/ಡಿಸಿಪಿ(ಪ)ಇತರೆ-11/2020, ದಿನಾಂಕ: 01.02.2020.

**ಪ್ರಸ್ತಾವನೆ :**

ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ಗೌರವಾಧ್ಯಕ್ಷರಾದ ಶ್ರೀಮತಿ ಎಸ್.ವರಲಕ್ಷ್ಮೀ, ಅಧ್ಯಕ್ಷರಾದ ಲಕ್ಷ್ಮೀದೇವಿ, ಪ್ರಧಾನ ಕಾರ್ಯದರ್ಶಿ ಮಾಲಿನಿ ಮೇಸ್ತ, ಉಪಾಧ್ಯಕ್ಷರಾದ ಸಿದ್ದಮ್ಮ ಹಾಗೂ ಖಜಾಂಚಿ ಮಹಾದೇವಮ್ಮ ಇವರ ನೇತೃತ್ವದಲ್ಲಿ ಸಂಘದ ಸುಮಾರು 15000-20000 ಜನ ಕಾರ್ಯಕರ್ತೆಯರು ಬಿಸಿಯೂಟ ಯೋಜನೆಯ ಖಾಸಗೀಕರಣ ವಿರೋಧಿಸಿ, ಬಿಸಿಯೂಟ ನೌಕರರಿಗೆ ಕನಿಷ್ಟ ವೇತನ ಜಾರಿಗೆ ಒತ್ತಾಯಿಸಿ, ಬಿಸಿಯೂಟ ನೌಕರರನ್ನು "ಡಿ" ಗ್ರೂಪ್ ನೌಕರರೆಂದು ಪರಿಗಣಿಸುವಂತೆ, ಹಾಜರಾತಿ ಆಧಾರದಲ್ಲಿ ಕೆಲಸದಿಂದ ತೆಗೆದು ಹಾಕುವ ಕ್ರಮ ವಿರೋಧಿಸಿ ಹಾಗೂ ಎಲ್.ಐ.ಸಿ ಆಧಾರಿತ ನಿವೃತ್ತಿ ವೇತನ ಸೌಲಭ್ಯ ಜಾರಿಗಾಗಿ ಒತ್ತಾಯಿ ಬಿಸಿಯೂಟ ನೌಕರರಿಗೆ ಕನಿಷ್ಟ ವೇತನ ಜಾರಿಗೆ ಒತ್ತಾಯಿಸಿ ದಿನಾಂಕ:03-02-2020 ರಂದು ಬೆಂಗಳೂರು ನಗರ ಸಿಟಿ ರೈಲ್ವೆ ನಿಲ್ದಾಣದಿಂದ ಮೆರವಣಿಗೆ ಮೂಲಕ ಫ್ರೀಡಂಪಾರ್ಕ್‌ಗೆ ಬಂದು ಅನಿರ್ಧಿಷ್ಟಾವಧಿ ಹೋರಾಟವನ್ನು ನಡೆಸಲು ಉದ್ದೇಶಿಸಿರುವುದಾಗಿ ತಿಳಿಸಿ, ಸಂಘದ ವತಿಯಿಂದ ಅನುಮತಿಯನ್ನು ಕೋರಿರುತ್ತಾರೆ.

ಬೆಂಗಳೂರು ನಗರ ಕಮೀಷನರೇಟ್ ವ್ಯಾಪ್ತಿಯ ಪಶ್ಚಿಮ ವಿಭಾಗ ಉಪ ಪೊಲೀಸ್ ಆಯುಕ್ತರು ಈ ಕೆಳಕಂಡ ಕಾರಣಗಳಗಾಗಿ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಸದರಿ ಸಂಘದಿಂದ ನಡೆಸಲು ಉದ್ದೇಶಿಸಿರುವ ಪ್ರತಿಭಟನೆಗೆ ಅನುಮತಿಯನ್ನು ನಿರಾಕರಿಸಿರುತ್ತಾರೆ.

1. ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ವತಿಯಿಂದ ಶ್ರೀಮತಿ ಎಸ್.ವರಲಕ್ಷ್ಮೀ ರವರ ನೇತೃತ್ವದಲ್ಲಿ ದಿನಾಂಕ: 21-01-2013 ರಂದು ಬೆಳಗ್ಗೆ 11-00 ಗಂಟೆಗೆ ಸುಮಾರು 1000 ಜನ ಅಕ್ಷರ ದಾಸೋಹ ನೌಕರರು ತಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಸಿಟಿ ರೈಲ್ವೇ ನಿಲ್ದಾಣದಿಂದ ಫ್ರೀಡಂಪಾರ್ಕ್ ವರೆಗೆ ಕಾಲ್ನಡಿಗೆ ಮೂಲಕ ಬಂದು, ಫ್ರೀಡಂಪಾರ್ಕ್ ಮುಂಭಾಗ ಕಾಳಿದಾಸ ರಸ್ತೆಯಲ್ಲಿ ಕುಳಿತು ಪ್ರತಿಭಟನೆ ನಡೆಸಿ ಸಂಜೆ 6-00 ಗಂಟೆಗೆ ಮುಕ್ತಾಯಗೊಳಿಸಿರುತ್ತಾರೆ.
2. ದಿನಾಂಕ 02.09.2016 ರಂದು ನಡೆಸಿದ ಪ್ರತಿಭಟನೆಯ ಸಮಯದಲ್ಲಿ ಬೆಂಗಳೂರು ನಗರ ವ್ಯಾಪ್ತಿಯ ಪ್ರಮುಖ ರಸ್ತೆಗಳಲ್ಲಿಯೇ ಪ್ರತಿಭಟನೆ ಕುಳಿತು ಸಾರ್ವಜನಿಕರ ಓಡಾಟಕ್ಕೆ ಹಾಗೂ ವಾಹನಗಳ ಸಂಚಾರಕ್ಕೆ ತೀವ್ರತರದ ತೊಂದರೆಯನ್ನುಂಟು ಮಾಡಿ, ಸಾರ್ವಜನಿಕ ದೈನಂದಿನ ಕೆಲಸ

ಕಾರ್ಯಗಳಿಗೆ ತೊಂದರೆಯನ್ನುಂಟು ಮಾಡಿರುತ್ತಾರೆ. ಆ ದಿನವೂ ಸಹ ಅಧ್ಯಕ್ಷರಾದ ಶ್ರೀಮತಿ. ಎಸ್.ವರಲಕ್ಷ್ಮಿ ಹಾಗೂ ಅವರ ಸಹಚರರ ವಿರುದ್ಧ ಉಪ್ಪಾರಪೇಟೆ ಪೊಲೀಸ್ ಠಾಣೆ ಮೊ.ಸಂ.214/2016 ಕಲಂ 341, 143, 188 ರೆ/ವಿ 149 ಐಪಿಸಿ ರೀತ್ಯಾ ಪ್ರಕರಣ ದಾಖಲಾಗಿ ವಿಚಾರಣೆಯಲ್ಲಿರುತ್ತದೆ.

3. ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಶ್ರೀಮತಿ ಎಸ್.ವರಲಕ್ಷ್ಮಿ ರವರ ನೇತೃತ್ವದಲ್ಲಿ ದಿನಾಂಕ: 20-03-2017 ರಂದು ನಡೆಸಿದ ಪ್ರತಿಭಟನೆಯಲ್ಲಿ ದಿನಾಂಕ: 22-03-2017 ರವರೆಗೆ ಮೂರು ದಿನಗಳ ಕಾಲ ಶೇಷಾದ್ರಿ ರಸ್ತೆಯನ್ನು ಸಂಪೂರ್ಣವಾಗಿ ಆವರಿಸಿ ಕುಳಿತುಕೊಂಡು ಪ್ರತಿಭಟನೆ ನಡೆಸಿದ ಪರಿಣಾಮ ನಗರದ ವಿವಿಧ ಕಡೆಗಳಿಗೆ ಹೋಗುವ ಬಹುತೇಕ ವಾಹನಗಳ ಸಂಚಾರಕ್ಕೆ ಅಡಚಣೆ ಉಂಟಾಗಿ ಸಾರ್ವಜನಿಕರಿಗೆ ಹಾಗೂ ಪ್ರಮುಖ ಆಸ್ಪತ್ರೆಗಳಿಗೆ ಸೇರಿದ ಆಂಬುಲೆನ್ಸ್‌ಗಳ ಓಡಾಟಕ್ಕೆ ಅಡಚಣೆಯಾಗಿ ತುಂಬಾ ಅನಾನುಕೂಲವಾಗಿರುತ್ತದೆ. ಈ ಬಗ್ಗೆ ಸಂಘದ ಗೌರವಾಧ್ಯಕ್ಷರಾದ ಶ್ರೀಮತಿ.ಎಸ್.ವರಲಕ್ಷ್ಮಿ, ಶಾಂತ ಎನ್. ಘಂಟಿ, ಸುನಂದ, ಕಮಲಾ ಹಾಗೂ ಇತರರ ವಿರುದ್ಧ ಉಪ್ಪಾರಪೇಟೆ ಪೊಲೀಸ್ ಠಾಣೆಯಲ್ಲಿ ಮೊ.ಸಂ.74/2017 ಕಲಂ 341, 143, 188 ರೆ/ವಿ 149 ಐಪಿಸಿ ರೀತ್ಯಾ ಪ್ರಕರಣ ದಾಖಲಾಗಿ, ಹಾಲಿ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುತ್ತದೆ.

4. ದಿನಾಂಕ: 14-09-2017 ರಂದು ನಡೆಸಿದ ಪ್ರತಿಭಟನೆಯಲ್ಲಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಸಂಪೂರ್ಣವಾಗಿ ಶೇಷಾದ್ರಿ ರಸ್ತೆಯನ್ನು ಆವರಿಸಿ ರಸ್ತೆಯ ಮಧ್ಯದಲ್ಲಿಯೇ ಕುಳಿತುಕೊಂಡು ಸಾರ್ವಜನಿಕರ ಓಡಾಟಕ್ಕೆ ತೊಂದರೆ ಉಂಟು ಮಾಡಿರುತ್ತಾರೆ. ಈ ಬಗ್ಗೆ ಗೌರವಾಧ್ಯಕ್ಷರಾದ ಶ್ರೀಮತಿ ಎಸ್.ವರಲಕ್ಷ್ಮಿ ಹಾಗೂ ಸಂಘದ ಇತರೆ ಸದಸ್ಯರುಗಳ ವಿರುದ್ಧ ಉಪ್ಪಾರಪೇಟೆ ಪೊಲೀಸ್ ಠಾಣಾ ಮೊ.ಸಂ.193/2017 ಕಲಂ 341, 143, 188 ರೆ/ವಿ 149 ಐಪಿಸಿ ರೀತ್ಯಾ ಪ್ರಕರಣ ದಾಖಲಾಗಿದ್ದು, ಘನ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುತ್ತದೆ.

5. ದಿನಾಂಕ:08-02-2018 ರಂದು ಬೆಳಗ್ಗೆ 11-00 ಗಂಟೆಗೆ ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ಗೌರವಾಧ್ಯಕ್ಷರಾದ ಶ್ರೀಮತಿ.ವರಲಕ್ಷ್ಮೀ ರವರ ನೇತೃತ್ವದಲ್ಲಿ ಸುಮಾರು 10000-12000 ಜನ ಬಿಸಿಯೂಟ ನೌಕರರು ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ 2017ನೇ ಸಾಲಿನಲ್ಲಿ 2 ಬಾರಿ ಪ್ರತಿಭಟನೆ ಮಾಡಿ ಸರ್ಕಾರಕ್ಕೆ ಮನವಿ ಮಾಡಿಕೊಂಡಿದ್ದರು ಸಹ ಸರ್ಕಾರ ಯಾವುದೇ ಬೇಡಿಕೆಗಳನ್ನು ಈಡೇರಿಸದೆ ಇರುವುದನ್ನು ಖಂಡಿಸಿ ಸಿಟಿ ರೈಲ್ವೇ ನಿಲ್ದಾಣದಿಂದ ಫ್ರೀಡಂಪಾರ್ಕ್ ವರೆಗೆ ಕಾಲ್ನಡಿಗೆ ಜಾಥಾ ನಡೆಸಿ ನಂತರ ಫ್ರೀಡಂಪಾರ್ಕ್ ಮುಂಭಾಗ ಕಾಳಿದಾಸ ರಸ್ತೆಯಲ್ಲಿ ಕುಳಿತುಕೊಂಡು ರಾತ್ರಿಯೂ ಸಹ ಪ್ರತಿಭಟನೆ ಮುಂದುವರೆಸಿ ದಿನಾಂಕ: 09-02-2018 ರಂದು ಸಹ ಪ್ರತಿಭಟನೆಯನ್ನು ಮುಂದುವರೆಸಿದ್ದು, ಪ್ರತಿಭಟನಾ ಸ್ಥಳಕ್ಕೆ ಆಗಿನ ಶಿಕ್ಷಣ ಸಚಿವರಾದ ಶ್ರೀ.ತನ್ವೀರ್ ಸೇಠ್ ರವರು ಅಗಮಿಸಿ ಬೇಡಿಕೆಗಳನ್ನು ಈಡೇರಿಸುವುದಾಗಿ ಭರವಸೆ ನೀಡಿದ ನಂತರ ತಮ್ಮ ಪ್ರತಿಭಟನೆಯನ್ನು ಮುಕ್ತಾಯಗೊಳಿಸಿರುತ್ತಾರೆ.

6. ದಿನಾಂಕ: 02-09-2016 ರಂದು ಶ್ರೀಮತಿ ಎಸ್.ವರಲಕ್ಷ್ಮೀ ರವರ ನೇತೃತ್ವದಲ್ಲಿ ಕೇಂದ್ರ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ (ಜೆ.ಸಿ.ಟಿ.ಯು) ವತಿಯಿಂದ ಕೇಂದ್ರ ಸರ್ಕಾರದ ವಿರುದ್ಧ ಅಖಿಲ ಭಾರತ ಸಾರ್ವತ್ರಿಕ ಮುಷ್ಕರದ ಅಂಗವಾಗಿ ಮಧ್ಯಾಹ್ನ 12-00 ಗಂಟೆಗೆ ಟೌನ್‌ಹಾಲ್‌ನಿಂದ ಫ್ರೀಡಂಪಾರ್ಕ್ ವರೆಗೂ ಪ್ರತಿಭಟನಾ ರ್‍ಯಾಲಿಗೆ ಅನುಮತಿ ಪಡೆದುಕೊಂಡಿದ್ದು, ಆ ದಿನಯು ಸಹ ಉಪ್ಪಾರಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯ ಮೈಸೂರು ಬ್ಯಾಂಕ್ ಸರ್ಕಲ್ ಮೂಲಕ ಶೇಷಾದ್ರಿ ಜಂಕ್ಷನ್‌ಗೆ ಬಂದು ಅನುಮತಿ ಪಡೆದುಕೊಂಡಿದ್ದ ಫ್ರೀಡಂಪಾರ್ಕ್‌ನ ಪ್ರತಿಭಟನಾ ಸ್ಥಳಕ್ಕೆ ಬಾರದೇ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ರಸ್ತೆಯನ್ನು ಸಂಪೂರ್ಣವಾಗಿ ಆವರಿಸಿ ಕುಳಿತುಕೊಂಡು ಪ್ರತಿಭಟನೆ ನಡೆಸಿದ ಪರಿಣಾಮ ಬೆಂಗಳೂರು ನಗರದ ವಿಧಾನಸೌಧ, ಹೈಕೋರ್ಟ್ ಮತ್ತು ಇನ್ನಿತರ ಸರ್ಕಾರಿ ಮುಖ್ಯ ಕಛೇರಿಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಯಾಗಿರುವುದರಿಂದ ಹಾಗೂ ನಗರದ ವಿವಿಧ ಕಡೆಗಳಿಗೆ ಹೋಗುವ ಬಹುತೇಕ ವಾಹನಗಳ ಸಂಚಾರಕ್ಕೆ ಅಡಚಣೆ ಉಂಟಾಗಿ ಸಾರ್ವಜನಿಕರಿಗೆ ಹಾಗೂ ಆಸ್ಪತ್ರೆಗಳಿಗೆ ಸೇರಿದ ಆಂಬುಲೆನ್ಸ್‌ಗಳ ಓಡಾಟಕ್ಕೆ ಅಡಚಣೆಯಾಗಿ ತುಂಬಾ ಅನಾನುಕೂಲವಾಗಿರುತ್ತದೆ.

ಈ ಸಂಬಂಧ ಅಧ್ಯಕ್ಷರಾದ ಶ್ರೀಮತಿ ಎಸ್.ವರಲಕ್ಷ್ಮೀ, ಶ್ರೀ.ಮಾಂತೇಶ್, ಶ್ರೀ.ಶಾಂತಕುಮಾರ್, ಶ್ರೀ.ಉಮೇಶ್ ಮತ್ತು ಇನ್ನಿತರರ ವಿರುದ್ಧ ಉಪ್ಪಾರಪೇಟೆ ಪೋಲೀಸ್ ಠಾಣಾ ವ್ಯಾಪ್ತಿಯ ಮೊ.ಸಂ.214/2016 ಕಲಂ 341, 143, 188 ರೆ/ವಿ 149 ಐಪಿಸಿ ರೀತ್ಯಾ ಪ್ರಕರಣ ದಾಖಲಾಗಿದ್ದು, ಹಾಲಿ 5ನೇ ಎ.ಸಿ.ಎಂ.ಎಂ. ಘನ ನ್ಯಾಯಾಲಯದ ಸಿ.ಸಿ.ನಂ.2217/2017ರಲ್ಲಿ ವಿಚಾರಣೆಯಲ್ಲಿರುತ್ತದೆ.

7. ದಿನಾಂಕ: 10-12-2019 ರಂದು ಸದರಿ ಸಂಘಟನೆಯ ವತಿಯಿಂದ ಸುಮಾರು 15000-20000 ಜನ ಮಹಿಳೆಯರು ತುಮಕೂರಿನಿಂದ ಬೆಂಗಳೂರು ಫ್ರೀಡಂಪಾರ್ಕ್‌ಗೆ ಪಾದಯಾತ್ರೆ ಮೂಲಕ ಬರುವ ಪ್ರತಿಭಟನೆ ಹಮ್ಮಿಕೊಂಡಿದ್ದು, ಬೆಂಗಳೂರಿನ ಸಂಚಾರ ದಟ್ಟಣೆ, ಕಾನೂನು ಸುವ್ಯವಸ್ಥೆ ದೃಷ್ಟಿಯಿಂದ ಪಾದಯಾತ್ರೆಗೆ ಅನುಮತಿ ನಿರಾಕರಿಸಿ ಮಾನ್ಯ ಪೋಲೀಸ್ ಆಯುಕ್ತರ ಆದೇಶ ಅನುಸಾರ ಪ್ರತಿಭಂಧಕಾಜ್ಞೆಯನ್ನು ಜಾರಿಗೊಳಿಸಿ ಕಾನೂನು ಸುವ್ಯವಸ್ಥೆ ಕಾಪಾಡಲಾಗಿರುತ್ತದೆ.

**ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಘಟಕಾಧಿಕಾರಿಗಳು ಈ ಕೆಳಕಂಡ ಕಾರಣಗಳ ಮೇಲೆ ಸದರಿ ಸಂಘಟನೆಯ ಪ್ರತಿಭಟನಾ ಮೆರವಣಿಗೆ ಕೋರಲಾದ ಅನುಮತಿ ನಿರಾಕರಿಸಿ, ಪ್ರತಿಭಟನಾಕಾರರು ಬೆಂಗಳೂರು ನಗರ ರೈಲ್ವೇ ನಿಲ್ದಾಣದಿಂದ ಫ್ರೀಡಂಪಾರ್ಕ್‌ಗೆ ಕಾಲ್ನಡಿಗೆ ಮೂಲಕ ಮೆರವಣಿಗೆ ಮಾಡುವುದನ್ನು ಪ್ರತಿಬಂಧಿಸಲು ಕೋರಿರುತ್ತಾರೆ**.

1. ದಿನಾಂಕ: 30-01-2020 ರಂದು ಪ್ರತಿಭಟನಾಕಾರರ ನಾಯಕರೊಂದಿಗೆ ಪ್ರತಿಭಟನೆಯ ರೂಪು ರೇಷೆ ಮತ್ತು ಆಗಮಿಸುವ ನೌಕರರ ಸಂಖ್ಯೆಯ ಬಗ್ಗೆ ಚರ್ಚೆ ನಡೆಸುವ ಸಮಯದಲ್ಲಿ ಈ ಪ್ರತಿಭಟನೆಯಲ್ಲಿ 15000-20000 ಜನರು ಭಾಗವಹಿಸುವ ಬಗ್ಗೆ ಮಾಹಿತಿ ನೀಡಿರುತ್ತಾರೆ ಆದರೆ ಸದರಿ ಫ್ರೀಡಂಪಾರ್ಕ್ ಮೈದಾನದಲ್ಲಿ 2000-2500 ಜನರು ಕುಳಿತುಕೊಳ್ಳವಷ್ಟೆ ಸ್ಥಳಾವಕಾಶವಿದ್ದು, ಹೆಚ್ಚಿನ ಜನರು ಆಗಮಿಸುವುದರಿಂದ ಸ್ಥಳಾವಕಾಶದ ಕೊರತೆ ಇರುತ್ತದೆ.
2. ಸದರಿ ಸಂಘಟನೆಯವರು ಪ್ರತಿಭಟನಾ ಅರ್ಜಿ ಪತ್ರದಲ್ಲಿ ಫೆಬ್ರವರಿ 03 ರಂದು ಪ್ರತಿಭಟನೆ ನಡೆಸುವುದಾಗಿ ನಮೂದಿಸಿದ್ದು ಆದರೆ ಕರಪತ್ರದಲ್ಲಿ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸುವುದಾಗಿ ನಮೂದಿಸಿರುತ್ತಾರೆ. ಈ ಹಿಂದೆ ನಡೆದ ಪ್ರತಿಭಟನೆ ಸಂದರ್ಭದಲ್ಲಿ ಪೋಲೀಸರು ನೀಡುವ ಸೂಚನೆಗಳನ್ನು ಪಾಲಿಸದೇ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಿದ್ದು, ನಂತರದ ದಿನಗಳಲ್ಲಿ ಬೇರೆ ಸಂಘಟನೆಗಳ ಪ್ರತಿಭಟನೆಗಳಿಗೆ ಅನುಮತಿ ನೀಡಿದ್ದು ಸ್ಥಳಾವಕಾಶದ ಕೊರತೆಯುಂಟಾಗಿತ್ತದೆ.
3. ಹಿಂದಿನ ದಿನಗಳಲ್ಲಿ ಪ್ರತಿಭಟನೆ ನಡೆಸಿದ ಸಮಯದಲ್ಲಿ ಪೋಲೀಸರು ಸೂಚಿಸಿದ ನಿಬಂಧನೆಗಳು ಹಾಗೂ ಸೂಚನೆಗಳನ್ನು ಪಾಲಿಸದೆ ಸಂಘಟನೆಯ ಮುಖಂಡರ ವಿರುದ್ಧ ಅಪರಾಧ ಪ್ರಕರಣಗಳು ದಾಖಲಾಗಿರುತ್ತವೆ.
4. ಸುಮಾರು 20000 ಮಹಿಳೆಯರು ಒಂದೇ ಬಾರಿ ಬೆಂಗಳೂರು ನಗರ ರೈಲ್ವೆ ನಿಲ್ದಾಣ ಪ್ರವೇಶಿಸಿ, ರಸ್ತೆಯಲ್ಲಿ ಕುಳಿತು ಪ್ರತಿಭಟನೆ ನಡೆಸಿದರೆ, ಸ್ಥಳವಕಾಶದ ತೊಂದರೆ, ಶೌಚಾಲಯದ ತೊಂದರೆವುಂಟಾಗಿ ಸಾರ್ವಜನಿಕರಿಗೆ ಹಾಗೂ ವಾಹನಗಳ ಸುಗಮ ಸಂಚಾರಕ್ಕೆ ತೊಂದರೆ ಉಂಟಾಗಿ ಸಾರ್ವಜನಿಕ ಆಸ್ತಿ-ಪಾಸ್ತಿಗಳಿಗೆ ಹಾನಿವುಂಟಾಗುವ ಸಾಧ್ಯತೆ ಹೆಚ್ಚು ಇರುತ್ತದೆ.
5. ಪ್ರತಿಭಟನೆ ಮಾಡಲು ಉದ್ದೇಶಿಸಿರುವ ಫ್ರೀಡಂ ಪಾರ್ಕ್‌ನ ಪಕ್ಕದಲ್ಲಿಯೇ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಹಾಸ್ಟೆಲ್ ಹಾಗೂ ಶ್ರೀಮತಿ ಪಿ.ಹೆಚ್.ಡಿ ಹೋಮ್‌ಸೈನ್ಸ್ ಕಾಲೇಜುಗಳಿದ್ದು, ಸಾವಿರಾರು ವಿದ್ಯಾರ್ಥಿನಿಯರು ವ್ಯಾಸಂಗ ಮಾಡುತ್ತಿದ್ದು, ಜನಸಂದಣಿಯಾಗಿ ಘೋಷಣೆಗಳನ್ನು ಕೂಗುವುದರಿಂದ ವಿದ್ಯಾಭ್ಯಾಸಕ್ಕೆ ತೊಂದರೆಯಾಗುವುದಲ್ಲದೆ ಪ್ರಮುಖ ಸರ್ಕಾರಿ ಕಛೇರಿಗಳು ಇದೇ ರಸ್ತೆಯಲ್ಲಿದ್ದು, ಸಾರ್ವಜನಿಕ ಕೆಲಸ-ಕಾರ್ಯಗಳಿಗೆ ತೊಂದರೆ ಉಂಟಾಗುವ ಸಾಧ್ಯತೆ ಇರುತ್ತದೆ.
6. ಈ ರೀತಿಯಾಗಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರತಿಭಟನಾಕಾರರು ಆಗಮಿಸಿ ಶೇಷಾದ್ರಿ ರಸ್ತೆಯಲ್ಲಿಯೇ ಕುಳಿತು ಘೋಷಣೆಗಳನ್ನು ಕೂಗಿ ಸಾರ್ವಜನಿಕ ಸಂಚಾರಕ್ಕೆ ಅಡಚಣೆಯಾಗಿರುವುದರಿಂದ, ಈ ಬಗ್ಗೆ

ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಹಲವಾರು ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ಸಲ್ಲಿಕೆಯಾಗಿರುತ್ತದೆ.

7. ಸದರಿ ಸಂಘಟನೆಯವರು 2-3 ಬಾರಿ ಶೇಷಾದ್ರಿ ರಸ್ತೆಯಲ್ಲಿ ಕುಳಿತುಕೊಂಡು ಪ್ರತಿಭಟನೆ ನಡೆಸಿರುವುದರಿಂದ ಇನ್ನಿತರೆ ಸಂಘಟನೆಗಳಿಗೆ ಪ್ರೇರಣೆಯಾಗಿ ಫ್ರೀಡಂಪಾರ್ಕಗೆ ಬಂದು ಕುಳಿತುಕೊಂಡರೆ ಸಮಸ್ಯೆ ಬಗೆಹರಿಯುವುದಿಲ್ಲ ಶೇಷಾದ್ರಿರಸ್ತೆಯಲ್ಲಿ ಕುಳಿತು ಸಾರ್ವಜನಿಕರಿಗೆ ತೊಂದರೆಯಾದರೆ ಮಾತ್ರ ಸರ್ಕಾರ ಸ್ಪಂದಿಸುತ್ತದೆ ಎಂಬ ತಪ್ಪು ಅಭಿಪ್ರಾಯ ಮೂಡುವಂತಾಗಿದೆ. ಈ ಸಂಬಂಧ ಪ್ರತಿನಿತ್ಯ ಒಂದಲ್ಲ ಒಂದು ಹೋರಾಟಗಳು ಇರುವುದರಿಂದ ಸಾರ್ವಜನಿಕರ ದಿನನಿತ್ಯದ ಕೆಲಸ-ಕಾರ್ಯಗಳಿಗೆ ತೊಂದರೆ ಉಂಟಾಗುತ್ತದೆ. ಇದಲ್ಲದೆ ಸದರಿ ಸಂಘಟನೆಯವರು ಪ್ರತಿಭಟನಾ ಸ್ಥಳದಲ್ಲಿ ಪೊಲೀಸರು ನೀಡುವ ಸೂಚನೆಗಳನ್ನು ದಿಕ್ಕರಿಸುವ ಪ್ರವೃತ್ತಿಯುಳ್ಳವರಾಗಿರುತ್ತಾರೆ.

ಮೇಲ್ಕಂಡ ಎಲ್ಲಾ ಕಾರಣಗಳಿಂದ ಸದರಿ ಸಂಘವು ಗೌರವಾಧ್ಯಕ್ಷರಾದ ಶ್ರೀಮತಿ ವರಲಕ್ಷ್ಮಿ ಅವರ ನೇತೃತ್ವದಲ್ಲಿ ಹಮ್ಮಿಕೊಂಡಿರುವ ಪ್ರತಿಭಟನಾ ಮೆರವಣಿಗೆಯಲ್ಲಿ ಸುಮಾರು 15000-20000 ಮಹಿಳಾ ಕಾರ್ಯಕರ್ತೆಯವರು ಸೇರುವ ಸಂಭವವಿರುವುದರಿಂದ, ಸಾರ್ವಜನಿಕರು ಉದ್ವೇಗಕ್ಕೆ ಒಳಗಾಗುವ ರೀತಿಯ ಹೇಳಿಕೆಗಳನ್ನು ನೀಡುವುದು ಸಾರ್ವಜನಿಕರ ಕೆಲಸ-ಕಾರ್ಯಗಳಿಗೆ ಅಡ್ಡಿಪಡಿಸುವುದು ಮತ್ತು ಘೋಷಣೆಗಳನ್ನು ಕೂಗಿ ಪದೇ ಪದೇ ಶಾಂತಿಭಂಗ ಮಾಡುವ ಸಾಧ್ಯತೆಗಳಿರುವುದರಿಂದ, ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘ (ಸಿ.ಐ.ಟಿ.ಯು) ಗೌರವಾಧ್ಯಕ್ಷೆಯಾದ ಶ್ರೀಮತಿ ಎಸ್.ವರಲಕ್ಷ್ಮಿ ಹಾಗೂ ಅವರ ಸಹಚರರು ಬೆಂಗಳೂರು ನಗರ ಕಮೀಷನರೇಟ್ ಸರಹದ್ದಿನ ಒಳಗೆ ಪ್ರತಿಭಟನೆ ನಡೆಸದಂತೆ ನಿಷೇಧಾಜ್ಞೆಯನ್ನು ಹೊರಡಿಸಬೇಕೆಂದು ಉಪ ಪೊಲೀಸ್ ಆಯುಕ್ತರು, ಪಶ್ಚಿಮ ವಿಭಾಗ ರವರ ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ.

ಸದರಿ ನಿವೇದನಾ ಪತ್ರದಲ್ಲಿನ ಸಂಗತಿಗಳನ್ನು ಪರಿಶೀಲಿಸಲಾಯಿತು. ಈ ಕೆಳಕಂಡಂತೆ ಪರಿಗಣಿಸಬಹುದಾದ ಅಂಶವನ್ನು ರಚಿಸಿದೆ.

1) ಘಟಕಾಧಿಕಾರಿಗಳು ತಮ್ಮ ಮನವಿಯಲ್ಲಿ ಕೋರಿರುವಂತೆ ಈ ಹಿಂದೆ ದಿನಾಂಕ 23.03.2017, ದಿನಾಂಕ 02.09.2017 ಹಾಗೂ ದಿನಾಂಕ 14.09.2017 ರಂದು ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ ರಾಜ್ಯಾಧ್ಯಕ್ಷರು ಹಾಗೂ ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ಅಧ್ಯಕ್ಷರೂ ಆದ ಶ್ರೀಮತಿ ಎಸ್.ವರಲಕ್ಷ್ಮಿ ಅವರ ಅಧ್ಯಕ್ಷತೆಯಲ್ಲಿ ಅವರ ಇತರೆ ಸಹಚರರೊಂದಿಗೆ ಬೆಂಗಳೂರು ನಗರ ಸಿಟಿ ರೈಲ್ವೆ ನಿಲ್ದಾಣ ಪ್ರವೇಶಿಸಿ ಅಲ್ಲಿಂದ ಪ್ರತಿಭಟನಾ ಮೆರವಣಿಗೆ ಮೂಲಕ ಫ್ರೀಡಂಪಾರ್ಕ್‌ಗೆ ಬಂದು, ಅವರ ಅಹವಾಲುಗಳನ್ನು ಈಡೇರಿಸಿಕೊಳ್ಳಲು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಶಾಂತಿ ಭಂಗವುಂಟು ಮಾಡಿ, ಸಾರ್ವಜನಿಕ ಸ್ಥಳಗಳಲ್ಲಿ ಅಶಾಂತಿಯ ವಾತಾವರಣವನ್ನು ಉಂಟುಮಾಡಿರುತ್ತಾರೆಂದು ಮೇಲ್ನೋಟಕ್ಕೆ ಸಾಬೀತುಪಡಿಸುತ್ತಾರೆಯೇ?
2) ಘಟಕಾಧಿಕಾರಿಗಳು ಹೇಳುವಂತೆ ಮುಂದಿನ ದಿನಗಳಲ್ಲಿ, ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ಗೌರವಾಧ್ಯಕ್ಷರಾದ ಶ್ರೀಮತಿ ಎಸ್.ವರಲಕ್ಷ್ಮಿ ಅವರ ಅಧ್ಯಕ್ಷತೆಯಲ್ಲಿ ಬೆಂಗಳೂರು ನಗರ ರೈಲ್ವೇ ನಿಲ್ದಾಣಕ್ಕೆ ಪ್ರವೇಶಿಸಿ ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡುವುದು, ಕರ್ತವ್ಯಗಳಿಗೆ ಅಡ್ಡಿಪಡಿಸುವುದು ಮತ್ತು ಘೋಷಣೆಗಳನ್ನು ಕೂಗಿ ಪದೇ ಪದೇ ಶಾಂತಿಭಂಗ ಮಾಡುವ ಸಾಧ್ಯತೆಗಳಿವೆಯೇ?
3) ಅರ್ಜಿದಾರರು ದಂಡ ಪ್ರಕ್ರಿಯಾ ಸಂಹಿತೆಯ ಕಲಂ 144(2) ರಲ್ಲಿ ಏಕತರ್ಫಿ (Ex parte) ಆದೇಶ ಮಾಡಲು ಮೇಲ್ನೋಟಕ್ಕೆ ಗಂಭೀರವಾದ ಹಾಗೂ ತುರ್ತು ಕ್ರಮ ಬಯಸುವ ಪ್ರಕರಣವೆಂದು ಸಾಬೀತುಪಡಿಸುವಿರಾ?
4) ಒಂದು ವೇಳೆ ಆದೇಶ ಮಾಡಿದಿದ್ದರೆ ಕಾನೂನು ಸುವ್ಯವಸ್ಥೆ ಹಾಗೂ ಸಾರ್ವಜನಿಕ ಶಾಂತಿ ಪರಿಪಾಲನೆಗೆ ತೊಂದರೆಯಾಗುವ ಸಾಧ್ಯತೆಯಿದೆಯೇ?
5) ಯಾವ ಆದೇಶ ?

ಮೇಲೆ ಹೇಳಿದ ಪರಿಗಣಿಸಬಹುದಾದ ಅಂಶಗಳಿಗೆ ಈ ಕೆಳಗಿನಂತೆ ಉತ್ತರಿಸಿದೆ –

1) ಸಕಾರಾತಕವಾಗಿ
2) ಸಕಾರಾತ್ಮಕವಾಗಿ
3) ಸಕಾರಾತ್ಮಕವಾಗಿ
4) ಸಕಾರಾತ್ಮಕವಾಗಿ
5) ಆದೇಶದಂತೆ

**ಕಾರಣಗಳು :**

ಮೇಲೆ ಹೇಳಿದ ಪರಿಗಣಿಸಬಹುದಾದ 1 ರಿಂದ 4ರವರೆಗೆ ಅಂಶಗಳು ಪರಸ್ಪರ ಹೊಂದಿರುವುದರಿಂದ ಒಟ್ಟಾರೆ ಅವುಗಳಿಗೆ ಈ ಕೆಳಗಿನಂತೆ ಉತ್ತರಿಸಿದೆ.

ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ಅಧ್ಯಕ್ಷರಾದ ಶ್ರೀಮತಿ ಎಸ್.ವರಲಕ್ಷ್ಮಿ ರವರ ನೇತೃತ್ವದಲ್ಲಿ ದಿನಾಂಕ: 23-03-2017 ರಂದು ನಡೆಸಿದ ಪ್ರತಿಭಟನೆಯಲ್ಲಿ ಮೂರು ದಿನಗಳ ಕಾಲ ರಸ್ತೆಯಲ್ಲೇ ಕುಳಿತುಕೊಂಡು ಪ್ರತಿಭಟನೆ ನಡೆಸಿದ ಪರಿಣಾಮ ನಗರದ ವಿವಿಧ ಕಡೆಗಳಿಗೆ ಹೋಗುವ ಬಹುತೇಕ ವಾಹನಗಳ ಸಂಚಾರಕ್ಕೆ ಅಡಚಣೆ ಉಂಟಾಗಿ ಸಾರ್ವಜನಿಕರಿಗೆ ಹಾಗೂ ಪ್ರಮುಖ ಆಸ್ಪತ್ರೆಗಳಿಗೆ ಸೇರಿದ ಆಂಬುಲೆನ್ಸ್‌ಗಳ ಓಡಾಟಕ್ಕೆ ಅಡಚಣೆಯಾಗಿ ತುಂಬಾ ಅನಾನುಕೂಲವಾಗಿರುತ್ತದೆ. ಈ ಬಗ್ಗೆ ಸಂಘದ ಅಧ್ಯಕ್ಷರಾದ ಶ್ರೀಮತಿ.ಎಸ್.ವರಲಕ್ಷ್ಮಿ, ಶಾಂತ ಎನ್. ಘಂಟಿ, ಸುನಂದ, ಕಮಲಾ ಹಾಗೂ ಇತರರ ವಿರುದ್ಧ ಉಪ್ಪಾರಪೇಟೆ ಪೊಲೀಸ್ ಠಾಣೆಯಲ್ಲಿ ಮೊ.ಸಂ.74/2017 ಕಲಂ 341, 143, 188 ರೆ/ವಿ 149 ಐಪಿಸಿ ರೀತ್ಯಾ ಪ್ರಕರಣ ದಾಖಲಾಗಿ, ಹಾಲಿ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುತ್ತದೆ.

ದಿನಾಂಕ: 14-09-2017 ರಂದು ನಡೆಸಿದ ಪ್ರತಿಭಟನೆಯಲ್ಲಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಸಂಪೂರ್ಣವಾಗಿ ಶೇಷಾದ್ರಿ ರಸ್ತೆಯನ್ನು ಆವರಿಸಿ ರಸ್ತೆಯ ಮಧ್ಯೆದಲ್ಲಿಯೇ ಕುಳಿತುಕೊಂಡು ಸಾರ್ವಜನಿಕರ ಓಡಾಟಕ್ಕೆ ತೊಂದರೆ ಉಂಟು ಮಾಡಿರುತ್ತಾರೆ. ಈ ಬಗ್ಗೆ ಅಧ್ಯಕ್ಷರಾದ ಶ್ರೀಮತಿ ಎಸ್.ವರಲಕ್ಷ್ಮಿ ಹಾಗೂ ಸಂಘದ ಇತರೆ ಸದಸ್ಯರುಗಳ ವಿರುದ್ಧ ಉಪ್ಪಾರಪೇಟೆ ಪೊಲೀಸ್ ಠಾಣಾ ಮೊ.ಸಂ.193/2017 ಕಲಂ 341, 143, 188 ರೆ/ವಿ 149 ಐಪಿಸಿ ರೀತ್ಯಾ ಪ್ರಕರಣ ದಾಖಲಾಗಿದ್ದು, ಘನ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುತ್ತದೆ.

ಮತ್ತೊಮ್ಮೆ ದಿನಾಂಕ 02.09.2016 ರಂದು ನಡೆಸಿದ ಪ್ರತಿಭಟನೆಯ ಸಮಯದಲ್ಲಿ ಬೆಂಗಳೂರು ನಗರ ವ್ಯಾಪ್ತಿಯ ಪ್ರಮುಖ ರಸ್ತೆಗಳಲ್ಲಿಯೇ ಪ್ರತಿಭಟನೆ ಕುಳಿತು ಸಾರ್ವಜನಿಕರ ಓಡಾಟಕ್ಕೆ ಹಾಗೂ ವಾಹನಗಳ ಸಂಚಾರಕ್ಕೆ ತೀವ್ರತರದ ತೊಂದರೆಯನ್ನುಂಟು ಮಾಡಿ, ಸಾರ್ವಜನಿಕ ದೈನಂದಿನ ಕೆಲಸ ಕಾರ್ಯಗಳಿಗೆ ತೊಂದರೆಯನ್ನುಂಟು ಮಾಡಿರುತ್ತಾರೆ. ಈ ದಿನವೂ ಸಹ ಅಧ್ಯಕ್ಷರಾದ ಶ್ರೀಮತಿ. ಎಸ್.ವರಲಕ್ಷ್ಮಿ ಹಾಗೂ ಅವರ ಸಹಚರರ ವಿರುದ್ಧ ಉಪ್ಪಾರಪೇಟೆ ಪೊಲೀಸ್ ಠಾಣೆ ಮೊ.ಸಂ.214/2016 ಕಲಂ 341, 143, 188 ರೆ/ವಿ 149 ಐಪಿಸಿ ರೀತ್ಯಾ ಪ್ರಕರಣ ದಾಖಲಾಗಿ ವಿಚಾರಣೆಯಲ್ಲಿರುತ್ತದೆ.

ನಾನು ಸದರಿ ಮೇಲ್ಕಂಡ ಪ್ರಥಮ ವರ್ತಮಾನ ವರದಿಗಳು ಹಾಗೂ ದೂರುಗಳನ್ನು ಗಮನಿಸಿದ್ದು, ದೂರಿನ ಆಪಾದನಾ ಅಂಶಗಳು ಹಾಗೂ ಮನವಿಗಳಲ್ಲಿನ ಸಂಗತಿಗಳು ಪೂರಕವಾಗಿದ್ದು ಇದರಿಂದ 1 ಮತ್ತು 2ನೇ ಅಂಶವು ಸಾಬೀತಾಗುತ್ತಿದೆ.

ಈ ಪ್ರಕರಣದಲ್ಲಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಹಾಗೂ ದಿನನಿತ್ಯದ ಕೆಲಸ-ಕಾರ್ಯಗಳಿಗೆ ಉಂಟಾಗಬಹುದಾದ ಅನಾನುಕೂಲತೆ ತಡೆಗಟ್ಟುವುದಲ್ಲದೇ, ಪ್ರತಿಭಟನೆಯ ಹೆಸರಿನಲ್ಲಿ ಕಾನೂನನ್ನು ಕೈಗೆತ್ತಿಕೊಳ್ಳಲು ಹುನ್ನಾರ ನಡೆಸುವ ವ್ಯಕ್ತಿಗಳನ್ನು ಹಾಗೂ ಅಂಥ ವ್ಯಕ್ತಿಗಳ ಗುಂಪನ್ನು ನಿರ್ಭಂದಿಸುವುದರಿಂದ ಸಾರ್ವಜನಿಕರ ಸಂವಿಧಾನಾತ್ಮಕ ಹಕ್ಕುಗಳಿಗೆ ಧಕ್ಕೆಯಾಗುವುದಿಲ್ಲ ಹಾಗೂ ಕಾನೂನು ಮತ್ತು ಸುವ್ಯವ್ಯಸ್ಥೆಗೆ ಸಹಕಾರಿಯಾಗಿದ್ದು ಬೆಂಗಳೂರು ನಗರ ಪ್ರದೇಶಗಳಲ್ಲಿ ಇರುವ ನಾಗರಿಕರಿಗೆ ತಮ್ಮ ಸಂವಿಧಾನಾತ್ಮಕ ಹಕ್ಕುಗಳನ್ನು ತೊಂದರೆಯಿಲ್ಲದೇ ಚಲಾಯಿಸಲು ಅನುಕೂಲವಾಗುತ್ತದೆ. ಒಂದು ವೇಳೆ ಇದೇ ರೀತಿಯ ಪ್ರತಿಭಟನೆ ಹಕ್ಕನ್ನು ಚಲಾಯಿಸಲು ಅವಕಾಶ ಮಾಡಿಕೊಟ್ಟಲ್ಲಿ ಸಾರ್ವಜನಿಕರಿಗೆ ಮತ್ತು ಬೆಂಗಳೂರಿನ ನಾಗರೀಕರ ಸಂವಿಧಾನಾತ್ಮಕ ಹಕ್ಕುಗಳಿಗೆ ತೀವ್ರವಾದ ಧಕ್ಕೆ ಉಂಟಾಗುವ ಸಾಧ್ಯತೆಯಿರುವ ಕಾರಣ ಈ ಪ್ರಕರಣವು ಗಂಭೀರವಾದ ಹಾಗು ತುರ್ತು ಕ್ರಮ ಬಯಸುವ ಪ್ರಕರಣವೆಂದು ಸಾಬೀತಾಗುತ್ತದೆ. ಆದ್ದರಿಂದ 1 ರಿಂದ 4 ರವರೆಗಿನ ಅಂಶಗಳನ್ನು ಸಕಾರಾತ್ಮಕವೆಂದು ಮೇಲೆ ಹೇಳಿದ ಕಾರಣಗಳಿಗೆ ಉತ್ತರಿಸಿರುತ್ತೇನೆ ಹಾಗೂ ಈ ಕೆಳಗಿನಂತೆ ಆದೇಶ ಮಾಡಿರುತ್ತೇನೆ.

**ಆದೇಶ ಸಂಖ್ಯೆ ಎಸ್.ಬಿ/ಗು.ವಾ/ನಿಷೇಧಾಜ್ಞೆ/೦೫/2020 ದಿನಾಂಕ : 02/02/2020**

ಅರ್ಜಿದಾರರ ಅರ್ಜಿಯನ್ನು ಪುರಸ್ಕರಿಸಿದೆ. ಈ ದಿಸೆಯಲ್ಲಿ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ನನಗೆ ದಂಡ ಪ್ರಕ್ರಿಯಾ ಸಂಹಿತೆಯ ಕಲಂ 144 (3) ನೇ ಪ್ರಕರಣದ ಅನ್ವಯ ಪ್ರದತ್ತವಾದ ಅಧಿಕಾರವನ್ನು ಉಪಯೋಗಿಸಿ ಭಾಸ್ಕರ್ ರಾವ್, ಐ.ಪಿ.ಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಆದ ನಾನು ದಿನಾಂಕ: 03-02-2020 ರಿಂದ ಮುಂದಿನ 20 ದಿನಗಳವರೆಗೆ ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ಗೌರವಾಧ್ಯಕ್ಷರಾದ ಶ್ರೀಮತಿ ಎಸ್.ವರಲಕ್ಷ್ಮೀ, ಅಧ್ಯಕ್ಷರಾದ ಲಕ್ಷ್ಮೀದೇವಿ, ಪ್ರಧಾನ ಕಾರ್ಯದರ್ಶಿ ಮಾಲಿನಿ ಮೇಸ್ತ, ಉಪಾಧ್ಯಕ್ಷರಾದ ಸಿದ್ದಮ್ಮ ಹಾಗೂ ಖಜಾಂಚಿ ಮಹಾದೇವಮ್ಮ ಇವರ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲು ಉದ್ಧೇಶಿರುವ ಕಾರ್ಯಕರ್ತರುಗಳು ಹಾಗೂ ಇತರೆ ಅಕ್ಷರ ದಾಸೋಹ ನೌಕರರುಗಳಿಗೆ ಬೆಂಗಳೂರು ನಗರ ಕಮೀಷನರೇಟ್ ವ್ಯಾಪ್ತಿಯ ಸರಹದ್ದಿನಲ್ಲಿ ಪ್ರತಿಭಟನೆ ನಿರ್ಬಂಧಿಸಿ ಈ ಕೆಳಕಂಡ ನಿಬಂಧನೆಗಳಿಗೆ ಒಳಪಡುವಂತೆ ನಿಷೇದಾಜ್ಞೆಯನ್ನು ವಿಧಿಸಿರುತ್ತೇನೆ.

1. ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ಗೌರವಾಧ್ಯಕ್ಷರಾದ ಶ್ರೀಮತಿ ಎಸ್ವರಲಕ್ಷ್ಮಿ, ಹಾಗೂ ಇತರೆ ಯಾವುದೇ ಅಕ್ಷರ ದಾಸೋಹ ಸಂಘಟನೆಯ ನೌಕರರುಗಳು ನಡೆಸುವ ಪ್ರತಿಭಟನೆ ಸಂಬಂಧ 5 ಅಥವಾ ಅದಕ್ಕಿಂತ ಹೆಚ್ಚು ಜನರ ಗುಂಪು ಸೇರುವುದನ್ನು,
2. ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ಗೌರವಾಧ್ಯಕ್ಷರಾದ ಶ್ರೀಮತಿ ಎಸ್.ವರಲಕ್ಷ್ಮಿ, ಹಾಗೂ ಇತರೆ ಯಾವುದೇ ಅಕ್ಷರ ದಾಸೋಹ ಸಂಘಟನೆಯ ಕಾರ್ಯಕರ್ತರ ನೇತೃತ್ವದಲ್ಲಿ ಯಾವುದೇ ಮೆರವಣಿಗೆ ಮತ್ತು ಸಭೆಗಳನ್ನು ನಡೆಸುವುದನ್ನು,
3. ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ಗೌರವಾಧ್ಯಕ್ಷರಾದ ಶ್ರೀಮತಿ ಎಸ್.ವರಲಕ್ಷ್ಮಿ, ಹಾಗೂ ಇತರೆ ಯಾವುದೇ ಅಕ್ಷರ ದಾಸೋಹ ಸಂಘಟನೆಯ ನೌಕರರು ಯಾವುದೇ ಶಸ್ತ್ರಗಳನ್ನು, ದೊಣ್ಣೆಗಳನ್ನು, ಕತ್ತಿಗಳು, ಈಟಿಗಳು, ಗದೆಗಳು, ಕಲ್ಲು, ಇಟ್ಟಿಗೆ, ಚಾಕು ಇನ್ನೂ ಮುಂತಾದ ಮಾರಕಾಸ್ತ್ರಗಳನ್ನು ಅಥವಾ ದೈಹಿಕ ಹಿಂಸೆಯನ್ನುಂಟು ಮಾಡುವ ಯಾವುದೇ ವಸ್ತುಗಳನ್ನು ಒಯ್ಯುವುದನ್ನು,
4. ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ಗೌರವಾಧ್ಯಕ್ಷರಾದ ಶ್ರೀಮತಿ ಎಸ್.ವರಲಕ್ಷ್ಮಿ, ಹಾಗೂ ಇತರೆ ಯಾವುದೇ ಅಕ್ಷರ ದಾಸೋಹ ಸಂಘಟನೆಯ ನೌಕರರು ಯಾವುದೇ ಸ್ಫೋಟಕ ವಸ್ತುಗಳನ್ನು ಸಿಡಿಸುವುದು, ಕಲ್ಲುಗಳನ್ನು, ಕ್ಷಿಪಣಿಗಳನ್ನು ಎಸೆಯುವ ಸಾಧನಗಳ ಅಥವಾ ಉಪಕರಣಗಳ ಒಯ್ಯುವಿಕೆಯನ್ನು ಮತ್ತು ಶೇಖರಿಸುವುದನ್ನು,

5. ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ಗೌರವಾಧ್ಯಕ್ಷರಾದ ಶ್ರೀಮತಿ ಎಸ್.ವರಲಕ್ಷ್ಮಿ ಹಾಗೂ ಅವರ ನೇತೃತ್ವದಲ್ಲಿ ವ್ಯಕ್ತಿಗಳ ಅಥವಾ ಅವರ ಶವಗಳ ಪ್ರತಿಕೃತಿಗಳ ಪ್ರದರ್ಶನ ಮಾಡುವುದನ್ನು, ಪ್ರಚೋದಿಸಬಹುದಾದ ಬಹಿರಂಗ ಘೋಷಣೆಗಳನ್ನು ಕೂಗುವುದು, ಸಂಜ್ಞೆ ಮಾಡುವುದು, ಹಾಡುವುದು, ಸಂಗೀತ ನುಡಿಸುವುದು, ಚಿತ್ರಗಳನ್ನು ಸಂಕೇತಗಳನ್ನು, ಭಿತ್ತಿ ಪತ್ರ ಅಥವಾ ಇತರೆ ಯಾವುದೇ ವಸ್ತುಗಳನ್ನು ಅಥವಾ ಪದಾರ್ಥಗಳನ್ನು ಪ್ರದರ್ಶಿಸುವುದನ್ನು ನಿಷೇಧಿಸಲಾಗಿದೆ.
6. ಈ ಆದೇಶದಿಂದ ಯಾವುದೇ ವ್ಯಕ್ತಿ ಬಾಧಿತನಾಗಿದ್ದರೆ ಸದರಿಯವರು ದಂಡ ಪ್ರಕ್ರಿಯಾ ಸಂಹಿತೆಯ ಕಲಂ 144(5) ರಡಿ ಈ ಆದೇಶವನ್ನು ರದ್ದುಗೊಳಿಸಲು ಅಥವಾ ಮಾರ್ಪಡಿಸಲು ಅರ್ಜಿ ಸಲ್ಲಿಸಬಹುದು.

(ಈ ಆದೇಶವನ್ನು ನನ್ನ ಆಪ್ತ ಸಹಾಯಕರಿಗೆ ಉಕ್ತಲೇಖನ ನೀಡಿದ್ದು, ಗಣಕೀಕೃತ ಬೆರಳಚ್ಚು ಪ್ರತಿಯನ್ನು ಪರಿಶೀಲಿಸಿ ಈ ದಿನ ಸಹಿ ಮಾಡಿ ನನ್ನ ಕಛೇರಿಯಲ್ಲಿ ಉದ್ಘೋಷಿಸಿದೆ)

SEAL OF THE COMMISSIONER OF POLICE AND DISTRICT MAGISTRATE BANGALORE CITY.

( ಭಾಸ್ಕರ್ ರಾವ್ )
ಪೊಲೀಸ್ ಆಯುಕ್ತರು ಹಾಗೂ
ಅಪರ ಜಿಲ್ಲಾ ದಂಡಾಧಿಕಾರಿಗಳು
ಬೆಂಗಳೂರು ನಗರ.

ಗೆ,

1. ಸಂಕಲನಕಾರರು (Compiler) ಕರ್ನಾಟಕ ರಾಜ್ಯ ಪ್ರಪತ್ರ, ಬೆಂಗಳೂರು ರವರು ಈ ಆದೇಶವನ್ನು ವಿಶೇಷ ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಕೋರಲಾಗಿದೆ.
2. ಶ್ರೀಮತಿ ಎಸ್. ವರಲಕ್ಷ್ಮಿ. ಗೌರವಾಧ್ಯಕ್ಷರು, ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ.
3. ಶ್ರೀಮತಿ ಲಕ್ಷ್ಮೀದೇವಿ, ಅಧ್ಯಕ್ಷರು, ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ.
4. ಶ್ರೀಮತಿ ಮಾಲಿನಿ ಮೇಸ್ತ, ಪ್ರಧಾನ ಕಾರ್ಯದರ್ಶಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ.
5. ಶ್ರೀಮತಿ ಸಿದ್ದಮ್ಮ, ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ.
6. ಶ್ರೀಮತಿ ಮಹಾದೇವಮ್ಮ, ಖಜಾಂಚಿ, ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ.

**ಪ್ರತಿಯನ್ನು:**

1. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಹೆಚ್ಚುವರಿ ಪೊಲೀಸ್ ಆಯುಕ್ತರುಗಳು
2. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಜಂಟಿ ಪೊಲೀಸ್ ಆಯುಕ್ತರುಗಳು
3. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಉಪ ಪೊಲೀಸ್ ಆಯುಕ್ತರುಗಳು

**ಪ್ರತಿಯನ್ನು ಅಭಿನಂದನೆಗಳೊಂದಿಗೆ:**

1. ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ಕರ್ನಾಟಕ ರಾಜ್ಯ, ಬೆಂಗಳೂರು.
2. ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.
3. ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ರಾಜ್ಯ ಗುಪ್ತವಾರ್ತೆ, ಕರ್ನಾಟಕ ರಾಜ್ಯ, ಬೆಂಗಳೂರು.
4. ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಕಾನೂನು ಮತ್ತು ಸುವ್ಯವಸ್ಥೆ, ಬೆಂಗಳೂರು.
5. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.

**ಕರ್ನಾಟಕ ಸರ್ಕಾರ**
**(ಪೊಲೀಸ್ ಇಲಾಖೆ)**
**ಪೊಲೀಸ್ ಆಯುಕ್ತರು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ರವರ ನಡವಳಿಗಳು**

**ಉಪಸ್ಥಿತರು:** ಭಾಸ್ಕರ್ ರಾವ್, ಐ.ಪಿ.ಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ.

**ವಿಷಯ** : ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಆಗ್ನೇಯ ವಿಭಾಗದ ಆಡುಗೋಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ರಥಸಪ್ತಮಿ ಪ್ರಯುಕ್ತ ಊರಹಬ್ಬ ಹಾಗೂ ಜಾತ್ರೆ ಪಲ್ಲಕ್ಕಿಗಳ ಉತ್ಸವ ನಡೆಯುವ ಪ್ರಯುಕ್ತ ಮದ್ಯ ಮಾರಾಟ ನಿಷೇಧಿಸುವ ಬಗ್ಗೆ.

**ಉಲ್ಲೇಖ** : ಉಪ ಪೊಲೀಸ್ ಆಯುಕ್ತರು, ಆಗ್ನೇಯ ವಿಭಾಗ ರವರ ಕಛೇರಿಯ ಪತ್ರ ಸಂಖ್ಯೆ:ಸಿಆರ್‌ಎಂ/ಉಲ್ಲೇಖ/21/ಡಿಸಿಪಿ(ಆಗ್ನೇಯ)/2020, ದಿನಾಂಕ: 16.01.2020.

-----

**ಪ್ರಸ್ತಾವನೆ:**

ದಿನಾಂಕ: 01.02.2020 ರಂದು ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಆಗ್ನೇಯ ವಿಭಾಗದ ಆಡುಗೋಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ರಥಸಪ್ತಮಿ ಪ್ರಯುಕ್ತ ಊರ ಹಬ್ಬ ಹಾಗೂ ಜಾತ್ರೆ ಪಲ್ಲಕ್ಕಿಗಳ ಉತ್ಸವ ನಡೆಯಲಿದೆ. ಈ ಉತ್ಸವದಲ್ಲಿ ನಗರದ ನಾನಾ ಕಡೆಗಳಿಂದ ಲಕ್ಷಾಂತರ ಭಕ್ತಾದಿಗಳು ಸೇರುವ ನಿರೀಕ್ಷೆಯಿರುತ್ತದೆ. ದೇವರುಗಳ ರಥೋತ್ಸವ ಮತ್ತು ಪಲ್ಲಕ್ಕಿ ಉತ್ಸವಗಳು ನಡೆಯುವ ಸಮಯದಲ್ಲಿ ಕೆಲವು ಕಿಡಿಗೇಡಿಗಳು ಮದ್ಯಪಾನದ ಅಮಲಿನಲ್ಲಿ ಕಾನೂನು ಮತ್ತು ಸುವ್ಯವಸ್ಥೆಗೆ ತೊಂದರೆ ಮಾಡಬಹುದಾದ ಸಾಧ್ಯತೆಗಳಿರುತ್ತವೆ. ಈ ನಿಟ್ಟಿನಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ ಮುನ್ನೆಚ್ಚರಿಕಾ ಕ್ರಮವಾಗಿ ಆಗ್ನೇಯ ವಿಭಾಗದ ಆಡುಗೋಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮದ್ಯದಂಗಡಿ, ಬಾರ್ & ರೆಸ್ಟೋರೆಂಟ್‌ಗಳಲ್ಲಿ ಹಾಗೂ ಆಡುಗೋಡಿಗೆ ಹೊಂದಿಕೊಂಡಂತೆ ಇರುವ ಕೋರಮಂಗಲ ಪೊಲೀಸ್ ಠಾಣಾ ಸರಹದ್ದಿನ ರೆಡ್ಡಿ ವೈನ್ಸ್, ಮೂಕಾಂಬಿಕ ಬಾರ್ & ರೆಸ್ಟೋರೆಂಟ್ ಹಾಗೂ ಮಂಜುನಾಥ ಬಾರ್ & ರೆಸ್ಟೋರೆಂಟ್‌ಗಳಲ್ಲಿ ಮದ್ಯ ಮಾರಾಟವನ್ನು ನಿಷೇದಿಸುವಂತೆ ಉಪ ಪೊಲೀಸ್ ಆಯುಕ್ತರು, ಆಗ್ನೇಯ ವಿಭಾಗ ರವರು ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ.

ಮೇಲ್ಕಂಡ ವಿಷಯದ ಬಗ್ಗೆ ನಾನು ಸ್ವತಃ ಪರಿಶೀಲಿಸಲಾಗಿ ಹಾಗೂ ಸಂಗ್ರಹಿಸಿದ ಮಾಹಿತಿಯಿಂದ ಸಾಕಷ್ಟು ಸತ್ಯಾಂಶವಿದೆ ಎಂದು ತಿಳಿದುಬಂದಿರುತ್ತದೆ. ರಥಸಪ್ತಮಿ ಪ್ರಯುಕ್ತ ಜಾತ್ರೆ/ಪಲ್ಲಕ್ಕಿ ಉತ್ಸವ ನಡೆಯುವ ಸಮಯದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಹಾಗೂ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗವುಂಟಾಗದಂತೆ ಅಹಿತಕರ ಘಟನೆಗಳನ್ನು ತಡೆಯುವ ಅವಶ್ಯಕತೆ ಇರುವುದರಿಂದ ಆಡುಗೋಡಿ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಹಾಗೂ ಕೋರಮಂಗಲ ಪೊಲೀಸ್ ಠಾಣಾ ಸರಹದ್ದಿನ ರೆಡ್ಡಿ ವೈನ್ಸ್, ಮೂಕಾಂಬಿಕ ಬಾರ್ & ರೆಸ್ಟೋರೆಂಟ್ ಹಾಗೂ ಮಂಜುನಾಥ ಬಾರ್ & ರೆಸ್ಟೋರೆಂಟ್‌ಗಳಲ್ಲಿ ಮದ್ಯ ಮಾರಾಟವನ್ನು ನಿಷೇದಿಸುವುದು ಸೂಕ್ತವೆಂದು ಮನಗಂಡಿರುತ್ತೇನೆ. ಆದ್ದರಿಂದ ಈ ಆದೇಶ–

**ಆದೇಶ ಸಂಖ್ಯೆ : ಎಸ್.ಬಿ./ಗು.ವಾ/ಮದ್ಯ ಮಾರಾಟ ನಿಷೇದಾಜ್ಞೆ/04/2020, ದಿನಾಂಕ: 30.01.2020**

ಈ ದಿಸೆಯಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ಭಾರತೀಯ ದಂಡ ಪ್ರಕ್ರಿಯ ಸಂಹಿತೆಯ ಕಲಂ.144 ರ ಉಪ ಕಲಂ.(1) ಮತ್ತು (3) ರ ಅನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭಾಸ್ಕರ್ ರಾವ್, ಭಾ.ಪೊ.ಸೇ. ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಆದ ನಾನು ದಿನಾಂಕ: 01.02.2020 ರಂದು ಬೆಳಿಗ್ಗೆ 06.00 ಗಂಟೆಯಿಂದ ಮಧ್ಯರಾತ್ರಿ 12.00 ಗಂಟೆಯವರೆಗೆ ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಆಗ್ನೇಯ ವಿಭಾಗದ ಆಡುಗೋಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಬಾರ್ ಅಂಡ್ ರೆಸ್ಟೋರೆಂಟ್‌ಗಳು, ವೈನ್ಸ್‌ಷಾಪ್‌ಗಳು ಮತ್ತು ಕೋರಮಂಗಲ ಪೊಲೀಸ್ ಠಾಣಾ ಸರಹದ್ದಿನ ರೆಡ್ಡಿ ವೈನ್ಸ್, ಮೂಕಾಂಬಿಕ ಬಾರ್ & ರೆಸ್ಟೋರೆಂಟ್ ಹಾಗೂ ಮಂಜುನಾಥ ಬಾರ್ & ರೆಸ್ಟೋರೆಂಟ್‌ಗಳಲ್ಲಿ ಮದ್ಯ ಮಾರಾಟವನ್ನು ಮಾಡದಿರಲು ನಿಷೇದಾಜ್ಞೆಯನ್ನು ವಿಧಿಸಿರುತ್ತೇನೆ.

...2]

ಈ ನಡವಳಿಯನ್ನು ನನ್ನ ಸಹಿ ಮತ್ತು ನನ್ನ ಕಛೇರಿಯ ಮೊಹರಿನಲ್ಲಿ 2020 ರ ಜನವರಿ ಮಾಹೆಯ ದಿನಾಂಕ 30 ರಂದು ಹೊರಡಿಸಲಾಗಿದೆ.

( ಭಾಸ್ಕರ್ ರಾವ್ )
ಪೊಲೀಸ್ ಆಯುಕ್ತರು ಹಾಗೂ
ಅಪರ ಜಿಲ್ಲಾ ದಂಡಾಧಿಕಾರಿಗಳು
ಬೆಂಗಳೂರು ನಗರ.

Bhaskar Rao, I.P.S.
Commissioner of Police,
Bengaluru City.

ಗೆ,

1. ಸಂಕಲನಕಾರರು (Compiler), ಕರ್ನಾಟಕ ರಾಜ್ಯ ಪ್ರಪತ್ರ, ಬೆಂಗಳೂರು ರವರು ಈ ಆದೇಶವನ್ನು ವಿಶೇಷ ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಕೋರಲಾಗಿದೆ.
2. ಸಂಬಂಧಪಟ್ಟವರಿಗೆ

<u>ಪ್ರತಿಯನ್ನು:</u>

1. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಹೆಚ್ಚುವರಿ ಪೊಲೀಸ್ ಆಯುಕ್ತರುಗಳು
2. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಉಪ ಪೊಲೀಸ್ ಆಯುಕ್ತರುಗಳು
3. ಸಹಾಯಕ ಪೊಲಿಸ್ ಆಯುಕ್ತರು, ನಗರ ನಿಯಂತ್ರಣ ಕೋಣೆ, ಬೆಂಗಳೂರು ನಗರ.

<u>ಪ್ರತಿಯನ್ನು ಅಭಿನಂದನೆಗಳೊಂದಿಗೆ:</u>

1. ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.
2. ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ರಾಜ್ಯ ಗುಪ್ತವಾರ್ತೆ, ಕರ್ನಾಟಕ ರಾಜ್ಯ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
4. ಅಬಕಾರಿ ಆಯುಕ್ತರು, ಕರ್ನಾಟಕ ರಾಜ್ಯ, ಬೆಂಗಳೂರು.

ಕರ್ನಾಟಕ ಸರ್ಕಾರ
(ಪೊಲೀಸ್ ಇಲಾಖೆ)

**ಪೊಲೀಸ್ ಆಯುಕ್ತರು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ರವರ ನಡವಳಿಗಳು**

ಉಪಸ್ಥಿತರು: ಭಾಸ್ಕರ್ ರಾವ್, ಐ.ಪಿ.ಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ.

ವಿಷಯ : ದಿನಾಂಕ: 02.01.2020 ಮತ್ತು 03.01.2020 ರಂದು ಬೆಂಗಳೂರು ನಗರದಲ್ಲಿ ಡ್ರೋಣ್ ಮತ್ತಿತರ ವಸ್ತುಗಳ ಹಾರಾಟಕ್ಕೆ ವಿಧಿಸಿದ್ದ ಪ್ರತಿಬಂಧಕಾಜ್ಞೆಯನ್ನು ಹಿಂಪಡೆಯುವ ಬಗ್ಗೆ.

ಉಲ್ಲೇಖ : ಈ ಕಛೇರಿಯ ಆದೇಶ ಸಂಖ್ಯೆ ಎಸ್.ಬಿ/ಗು.ವಾ/ನಿಷೇದಾಜ್ಞೆ/01/2020, ದಿ: 01.01.2020

ಪ್ರಸ್ತಾವನೆ :

ದಿನಾಂಕ: 02.01.2020 ಮತ್ತು 03.01.2020 ರಂದು ಮಾನ್ಯ ಪ್ರಧಾನ ಮಂತ್ರಿಗಳು ಬೆಂಗಳೂರು ನಗರಕ್ಕೆ ಭೇಟಿ ನೀಡುವ ಸಂಬಂಧ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ ಉಲ್ಲೇಖಿತ ಆದೇಶದಲ್ಲಿ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಸಲುವಾಗಿ ದಂಡ ಪ್ರಕ್ರಿಯಾ ಸಂಹಿತೆಯ ಕಲಂ 144ನೇ ಪ್ರಕರಣದ ಅನ್ವಯ ಪ್ರದತ್ತವಾದ ಅಧಿಕಾರ ಚಲಾಯಿಸಿ ದಿನಾಂಕ: 02.01.2020 ಮತ್ತು 03.01.2020 ರಂದು Unmanned Aerial objects, Including Drones, Ballons, Unmanned Aerial Vehicles, Unmammed Aicraft Systems ಮುಂತಾದವುಗಳ ಹಾರಾಟವನ್ನು ಬೆಂಗಳೂರು ನಗರದ ಕಮೀಷನರೇಟ್ ವ್ಯಾಪ್ತಿಯಲ್ಲಿ ನಿಬಂಧನೆಗಳಿಗೆ ಒಳಪಡುವಂತೆ ನಿಷೇದಾಜ್ಞೆಯನ್ನು ವಿಧಿಸಲಾಗಿತ್ತು.

ಆದರೆ ದಿನಾಂಕ: 03.01.2020 ರಂದು ಮಾನ್ಯ ಪ್ರಧಾನಮಂತ್ರಿಗಳು ಬೆಂಗಳೂರು ನಗರದಿಂದ ನಿರ್ಗಮಿಸಿರುವುದರಿಂದ ಮೇಲೆ ನಮೂದಿಸಿದಂತೆ ವಿಧಿಸಿರುವ ನಿಷೇದಾಜ್ಞೆಯ ಆದೇಶದ ಜಾರಿಯನ್ನು ಹಿಂಪಡೆಯುವುದು ಸೂಕ್ತವೆಂದು ಭಾವಿಸಿರುತ್ತೇನೆ.

**ಆದೇಶ ಸಂಖ್ಯೆ ಎಸ್.ಬಿ/ಗು.ವಾ/ನಿಷೇದಾಜ್ಞೆ/02/2020 ದಿನಾಂಕ : 03.01.2020**

ಈ ದಿಸೆಯಲ್ಲಿ ನನಗೆ ದಂಡ ಪ್ರಕ್ರಿಯಾ ಸಂಹಿತೆಯ ಕಲಂ 144ನೇ ಪ್ರಕರಣದ ಅನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭಾಸ್ಕರ್‌ರಾವ್, ಐಪಿಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಆದ ನಾನು ಎಸ್.ಬಿ/ಗು.ವಾ/ನಿಷೇದಾಜ್ಞೆ/01/2020 ದಿನಾಂಕ: 01.01.2020 ರಂತೆ ವಿಧಿಸಲಾಗಿದ್ದ Unmanned Aerial objects, Including Drones, Ballons, Unmanned Aerial Vehicles, Unmammed Aicraft Systems ಮುಂತಾದವುಗಳ ಹಾರಾಟದ ಪ್ರತಿಬಂಧಕಾಜ್ಞೆಯನ್ನು ದಿನಾಂಕ: 03.01.2020 ರಂದು ಮಧ್ಯಾಹ್ನ 12.00 ಗಂಟೆಯಿಂದ ಅನ್ವಯವಾಗುವಂತೆ ಹಿಂಪಡೆಯಲಾಗಿದೆ.

ಈ ನಡವಳಿಯನ್ನು ನನ್ನ ಸಹಿ ಮತ್ತು ನನ್ನ ಕಛೇರಿಯ ಮೊಹರಿನಲ್ಲಿ 2020 ರ ಜನವರಿ ಮಾಹೆಯ ದಿನಾಂಕ 03 ರಂದು ಹೊರಡಿಸಲಾಗಿದೆ.

(ಭಾಸ್ಕರ್ ರಾವ್)
ಪೊಲೀಸ್ ಆಯುಕ್ತರು ಹಾಗೂ
ಅಪರ ಜಿಲ್ಲಾ ದಂಡಾಧಿಕಾರಿಗಳು
ಬೆಂಗಳೂರು ನಗರ.

....2

ಗೆ

1. ಸಂಕಲನಕಾರರು (Compiler) ಕರ್ನಾಟಕ ರಾಜ್ಯ ಪ್ರಪತ್ರ, ಬೆಂಗಳೂರು ರವರು ಈ ಆದೇಶವನ್ನು ವಿಶೇಷ ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಕೋರಲಾಗಿದೆ.
2. ಸಂಬಂಧಪಟ್ಟವರಿಗೆ

ಪ್ರತಿಯನ್ನು:

1. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಹೆಚ್ಚುವರಿ ಪೊಲೀಸ್ ಆಯುಕ್ತರುಗಳು
2. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಉಪ ಪೊಲೀಸ್ ಆಯುಕ್ತರುಗಳು

ಪ್ರತಿಯನ್ನು ಅಭಿನಂದನೆಗಳೊಂದಿಗೆ:

1. ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ಕರ್ನಾಟಕ ರಾಜ್ಯ, ಬೆಂಗಳೂರು.
2. ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.
3. ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಕಾನೂನು ಮತ್ತು ಸುವ್ಯವಸ್ಥೆ, ಬೆಂಗಳೂರು.
4. ಪೊಲೀಸ್ ಮಹಾ ನಿರೀಕ್ಷಕರು, ರಾಜ್ಯ ಗುಪ್ತವಾರ್ತೆ, ಕರ್ನಾಟಕ ರಾಜ್ಯ, ಬೆಂಗಳೂರು.
5. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.

ಕರ್ನಾಟಕ ಸರ್ಕಾರ
(ಪೊಲೀಸ್ ಇಲಾಖೆ)

ಪೊಲೀಸ್ ಆಯುಕ್ತರು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ರವರ ನಡವಳಿಗಳು

ಉಪಸ್ಥಿತರು : ಭಾಸ್ಕರ್‌ರಾವ್, ಐ.ಪಿ.ಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ.

ವಿಷಯ : ದಿನಾಂಕ: 18.01.2020 ರಂದು ಬೆಳಿಗ್ಗೆ 06.00 ಗಂಟೆಯಿಂದ ಮಧ್ಯರಾತ್ರಿ 12.00 ಗಂಟೆಯವರೆಗೆ, ಹಲಸೂರುಗೇಟ್ ಪೊಲೀಸ್ ಠಾಣಾ ವ್ಯಾಪ್ತಿಯ ಬಿ.ಬಿ.ಎಂ.ಪಿ. ಕೇಂದ್ರ ಕಛೇರಿಯ ಆವರಣಕ್ಕೆ ಹೊಂದಿಕೊಂಡಂತೆ ಕೇಂದ್ರ ಕಛೇರಿಯ ಸುತ್ತಮುತ್ತ 200 ಮೀ. ವ್ಯಾಪ್ತಿಯಲ್ಲಿ ಪ್ರತಿಬಂಧಕಾಜ್ಞೆ ಜಾರಿ ಮಾಡುವ ಬಗ್ಗೆ.

ಉಲ್ಲೇಖ : ಅಪರ ಆಯುಕ್ತರು (ಆಯುಕ್ತರು), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ನರಸಿಂಹರಾಜ ಚೌಕ, ಬೆಂಗಳೂರು-560002 ರವರ ಕಛೇರಿಯ ಪತ್ರ ಸಂಖ್ಯೆ: ಕೌಕೌ/ಪಿರ್/20/2019-20, ದಿನಾಂಕ: 07.01.2020.

ಪ್ರಸ್ತಾವನೆ:

ದಿನಾಂಕ: 18.01.2020 ರಂದು ಬೆಳಿಗ್ಗೆ 07.00 ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹಾಪೌರರು, ಉಪ ಮಹಾಪೌರರು ಹಾಗೂ ಹನ್ನೆರಡು ಸ್ಥಾಯಿ ಸಮಿತಿಯ ಸ್ಥಾನಗಳ ಚುನಾವಣೆಯು ಪಾಲಿಕೆಯ ಕೇಂದ್ರ ಕಛೇರಿಯ ಆವರಣದಲ್ಲಿರುವ ಕೆಂಪೇಗೌಡ ಪೌರ ಸಭಾಂಗಣದಲ್ಲಿ ಮಾನ್ಯ ಪ್ರಾದೇಶಿಕ ಆಯುಕ್ತರು ಹಾಗೂ ಚುನಾವಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯಲಿರುವುದರಿಂದ ಪಾಲಿಕೆಯ ಕೇಂದ್ರ ಕಛೇರಿ ಆವರಣದಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ದಿನಾಂಕ: 18.01.2020 ರಂದು ಪಾಲಿಕೆಯ ಕೇಂದ್ರ ಕಛೇರಿಯ ಆವರಣಕ್ಕೆ ಹೊಂದಿಕೊಂಡಂತೆ ಕೇಂದ್ರ ಕಛೇರಿಯ ಸುತ್ತಮುತ್ತ 200 ಮೀ. ವ್ಯಾಪ್ತಿಯಲ್ಲಿ ನಿಷೇದಾಜ್ಞೆಯನ್ನು ಘೋಷಿಸುವಂತೆ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ.

ಈ ನಿಟ್ಟಿನಲ್ಲಿ ನಾನು ಈ ಮೇಲ್ಕಂಡ ಮಾಹಿತಿಗಳ ಬಗ್ಗೆ ಖುದ್ದಾಗಿ ಮಾಡಿದ ವಿಚಾರಣೆಯಿಂದ ಮತ್ತು ಗುಪ್ತವಾಗಿ ಸಂಗ್ರಹಿಸಿದ ಮಾಹಿತಿಯಿಂದ ಹಾಗೂ ಗುಪ್ತವಾರ್ತಾ ವಿಭಾಗದ ಮಾಹಿತಿಯಿಂದ ಸಾಕಷ್ಟು ಸತ್ಯಾಂಶವಿದೆಯೆಂದು ತಿಳಿದು ಬಂದಿರುವುದರಿಂದಲೂ, ಸದರಿ ಸ್ಥಳದಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ ಮುಂಜಾಗ್ರತಾ ಕ್ರಮವಾಗಿ ಈ ಕೆಳಕಂಡಂತೆ ಪ್ರತಿಬಂಧಕಾಜ್ಞೆಯನ್ನು ಹೊರಡಿಸಿರುತ್ತೇನೆ.

ಆದೇಶ ಸಂಖ್ಯೆ ಎಸ್.ಬಿ/ಗು.ವಾ/ನಿಷೇದಾಜ್ಞೆ/03/2020 ದಿನಾಂಕ : 13.01.2020

ಈ ದಿಸೆಯಲ್ಲಿ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ನನಗೆ ದಂಡ ಪ್ರಕ್ರಿಯಾ ಸಂಹಿತೆಯ ಕಲಂ 144ನೇ ಪ್ರಕರಣದ ಅನ್ವಯ ಪ್ರದತ್ತವಾದ ಅಧಿಕಾರವನ್ನು ಉಪಯೋಗಿಸಿ ಭಾಸ್ಕರ್ ರಾವ್, ಐಪಿಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಆದ ನಾನು ದಿನಾಂಕ: 18.01.2020 ರಂದು ಬೆಳಿಗ್ಗೆ 06.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೇಂದ್ರ ಕಛೇರಿಯ ಆವರಣಕ್ಕೆ ಹೊಂದಿಕೊಂಡಂತೆ ಬಿಬಿಎಂಪಿ ಕೇಂದ್ರ ಕಛೇರಿಯ ಸುತ್ತಮುತ್ತ 200 ಮೀ. ವ್ಯಾಪ್ತಿಯಲ್ಲಿ ಈ ಕೆಳಕಂಡ ನಿಬಂಧನೆಗಳಿಗೆ ಒಳಪಡುವಂತೆ ನಿಷೇದಾಜ್ಞೆಯನ್ನು ವಿಧಿಸಿರುತ್ತೇನೆ.

1. ಕಾನೂನುಭಂಗ ಉಂಟು ಮಾಡುವ ಉದ್ದೇಶದಿಂದ 5 ಅಥವಾ ಅದಕ್ಕಿಂತ ಹೆಚ್ಚು ಜನರ ಗುಂಪು ಸೇರುವುದನ್ನು
2. ಮೆರವಣಿಗೆ ಮತ್ತು ಸಭೆಗಳನ್ನು ನಡೆಸುವುದನ್ನು

3. ಶಸ್ತ್ರಗಳನ್ನು, ದೊಣ್ಣೆಗಳನ್ನು, ಕತ್ತಿಗಳು, ಈಟಿಗಳು, ಗದೆಗಳು, ಕಲ್ಲು, ಇಟ್ಟಿಗೆ, ಚಾಕು ಇನ್ನೂ ಮುಂತಾದ ಮಾರಕಾಸ್ತ್ರಗಳನ್ನು ಅಥವಾ ದೈಹಿಕ ಹಿಂಸೆಯನ್ನುಂಟು ಮಾಡುವ ಯಾವುದೇ ವಸ್ತುಗಳನ್ನು ಒಯ್ಯುವುದನ್ನು
4. ಯಾವುದೇ ಸ್ಫೋಟಕ ವಸ್ತುಗಳನ್ನು ಸಿಡಿಸುವುದು, ಕಲ್ಲುಗಳನ್ನು, ಕ್ಷಿಪಣಿಗಳನ್ನು ಎಸೆಯುವ ಸಾಧನಗಳ ಅಥವಾ ಉಪಕರಣಗಳ ಒಯ್ಯುವಿಕೆಯನ್ನು ಮತ್ತು ಶೇಖರಿಸುವುದನ್ನು
5. ವ್ಯಕ್ತಿಗಳ ಅಥವಾ ಅವರ ಶವಗಳ ಪ್ರತಿಕೃತಿಗಳ ಪ್ರದರ್ಶನ ಮಾಡುವುದನ್ನು, ಪ್ರಚೋದಿಸಬಹುದಾದ ಬಹಿರಂಗ ಘೋಷಣೆಗಳನ್ನು ಕೂಗುವುದು, ಸಂಜ್ಞೆ ಮಾಡುವುದು, ಹಾಡುವುದು, ಸಂಗೀತ ನುಡಿಸುವುದು, ಚಿತ್ರಗಳನ್ನು, ಸಂಕೇತಗಳನ್ನು, ಭಿತ್ತಿ ಪತ್ರ ಅಥವಾ ಇತರೆ ಯಾವುದೇ ವಸ್ತುಗಳನ್ನು ಅಥವಾ ಪದಾರ್ಥಗಳನ್ನು ಪ್ರದರ್ಶಿಸುವುದನ್ನು ನಿಷೇಧಿಸಲಾಗಿದೆ.

ಈ ನಡವಳಿಯನ್ನು ನನ್ನ ಸಹಿ ಮತ್ತು ನನ್ನ ಕಛೇರಿಯ ಮೊಹರಿನಲ್ಲಿ 2020 ರ ಜನವರಿ ಮಾಹೆಯ ದಿನಾಂಕ 13 ರಂದು ಹೊರಡಿಸಲಾಗಿದೆ.

(ಭಾಸ್ಕರ್ ರಾವ್)
ಪೊಲೀಸ್ ಆಯುಕ್ತರು ಹಾಗೂ
ಅಪರ ಜಿಲ್ಲಾ ದಂಡಾಧಿಕಾರಿಗಳು
ಬೆಂಗಳೂರು ನಗರ

ಭಾಸ್ಕರ್ ರಾವ್, ಭಾ.ಪೊ.ಸೇ.
ಪೊಲೀಸ್ ಆಯುಕ್ತರು
ಬೆಂಗಳೂರು ನಗರ.

ಗೆ

1. ಸಂಕಲನಕಾರರು (Compiler) ಕರ್ನಾಟಕ ರಾಜ್ಯ ಪ್ರಪತ್ರ, ಬೆಂಗಳೂರು ರವರು ಈ ಆದೇಶವನ್ನು ವಿಶೇಷ ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಕೋರಲಾಗಿದೆ.
2. ಸಂಬಂಧಪಟ್ಟವರಿಗೆ

<u>ಪ್ರತಿಯನ್ನು:</u>

1. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಹೆಚ್ಚುವರಿ ಪೊಲೀಸ್ ಆಯುಕ್ತರುಗಳು
2. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಉಪ ಪೊಲೀಸ್ ಆಯುಕ್ತರುಗಳು

<u>ಪ್ರತಿಯನ್ನು ಅಭಿನಂದನೆಗಳೊಂದಿಗೆ:</u>

1. ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ಕರ್ನಾಟಕ ರಾಜ್ಯ, ಬೆಂಗಳೂರು.
2. ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.
3. ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಕಾನೂನು ಮತ್ತು ಸುವ್ಯವಸ್ಥೆ, ಬೆಂಗಳೂರು.
4. ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ರಾಜ್ಯ ಗುಪ್ತವಾರ್ತೆ, ಕರ್ನಾಟಕ ರಾಜ್ಯ, ಬೆಂಗಳೂರು.
5. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
6. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.

ಕರ್ನಾಟಕ ಸರ್ಕಾರ

(ಪೊಲೀಸ್ ಇಲಾಖೆ)

**ಪೊಲೀಸ್ ಆಯುಕ್ತರು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ರವರ ನಡವಳಿಗಳು**

**ಉಪಸ್ಥಿತರು**: ಭಾಸ್ಕರ್ ರಾವ್, ಐ.ಪಿ.ಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ.

ವಿಷಯ : ದಿನಾಂಕ: 27.03.2020 ರಿಂದ ದಿನಾಂಕ: 09.04.2020 ರವರೆಗೆ ನಡೆಯುವ ಎಸ್.ಎಸ್.ಎಲ್.ಸಿ. ಪರೀಕ್ಷೆಯ ಪರೀಕ್ಷಾ ಕೇಂದ್ರಗಳ ಸುತ್ತಲು ಪ್ರತಿಬಂಧಕಾಜ್ಞೆಯನ್ನು ವಿಧಿಸುವ ಬಗ್ಗೆ.

ಉಲ್ಲೇಖ :
1. ಉಪ ನಿರ್ದೇಶಕರು (ಆಡಳತ), ಸಾರ್ವಜನಿಕ ಶಿಕ್ಷಣ ಇಲಾಖೆ, ಉತ್ತರ ಜಿಲ್ಲೆ ರವರ ಕಛೇರಿಯ ಪತ್ರ ಸಂಖ್ಯೆ: ಸಿ೭.ಎಸ್.ಎಸ್.ಎಲ್.ಸಿ.ಪ.ಐ-2020/1/2019-2020, ದಿನಾಂಕ: 11-03-2020
2. ಉಪ ನಿರ್ದೇಶಕರು(ಆಡಳತ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ ರವರ ಕಛೇರಿಯ ಪತ್ರ ಸಂಖ್ಯೆ: ಆ4.ಎಸ್.ಎಸ್.ಎಲ್.ಸಿ/ಮಾ-ಏ/2020/ಪಕೇ.ರ/27/2019-2020, ದಿನಾಂಕ: 02.03.2020

ಪ್ರಸ್ತಾವನೆ:

ದಿನಾಂಕ: 27.03.2020 ರಿಂದ ದಿನಾಂಕ: 09.04.2020 ರವರೆಗೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳ ವತಿಯಿಂದ ಮಾರ್ಚ್/ಏಪ್ರಿಲ್-2020 ರ ಎಸ್.ಎಸ್.ಎಲ್.ಸಿ. ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷೆಗಳನ್ನು ಸುಗಮವಾಗಿ ಹಾಗೂ ಸುವ್ಯವಸ್ಥಿತವಾಗಿ ನಡೆಸುವ ಸಲುವಾಗಿ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯ ಪ್ರದೇಶಕ್ಕೆ ಅನ್ವಯಿಸುವಂತೆ ನಿಷೇದಾಜ್ಞೆ ಹೊರಡಿಸಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಇರುವ ಜೆರಾಕ್ಸ್ ಅಂಗಡಿಗಳನ್ನು ಬೆಳಗ್ಗೆ ನಡೆಯುವ ಪರೀಕ್ಷೆಗಳ ದಿನದಂದು ಬೆಳಗ್ಗೆ 08-30 ಗಂಟೆಯಿಂದ ಮದ್ಯಾಹ್ನ 1-30 ಗಂಟೆಯವರೆಗೆ ಹಾಗೂ ಮಧ್ಯಾಹ್ನ ನಡೆಯುವ ಪರೀಕ್ಷೆಗಳ ದಿನದಂದು ಮಧ್ಯಾಹ್ನ 1-00 ಗಂಟೆಯಿಂದ ಸಂಜೆ 6-00 ಗಂಟೆಯವರೆಗೆ ಮುಚ್ಚುವಂತೆ ಆದೇಶ ಹೊರಡಿಸಲು ಉಲ್ಲೇಖಿತ ಪತ್ರಗಳಲ್ಲಿ ಉಪ ನಿರ್ದೇಶಕರು (ಆಡಳತ), ಬೆಂಗಳೂರು ಉತ್ತರ ಹಾಗೂ ದಕ್ಷಿಣ ಜಿಲ್ಲೆ ರವರು ಕೋರಿರುತ್ತಾರೆ.

ಈ ವಿಷಯದ ಬಗ್ಗೆ ನಾನು ಖುದ್ದಾಗಿ ಮಾಡಿದ ವಿಚಾರಣೆಯಿಂದ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಗಳನ್ನು ಸುಸೂತ್ರವಾಗಿ ಹಾಗೂ ದೋಷರಹಿತವಾಗಿ ನಡೆಸುವ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯ ಪ್ರದೇಶಕ್ಕೆ ಅನ್ವಯಿಸುವಂತೆ ನಿಷೇದಾಜ್ಞೆ ಹೊರಡಿಸುವುದು ಅಗತ್ಯವಿರುವುದನ್ನು ಮನಗಂಡಿರುತ್ತೇನೆ. ಆದ್ದರಿಂದ ಈ ಆದೇಶ-

**ಆದೇಶ ಸಂಖ್ಯೆ : ಎಸ್.ಬಿ/ಗು.ವಾ/ನಿಷೇದಾಜ್ಞೆ-08/2020, ದಿನಾಂಕ: 19.03.2020**

ಈ ದಿಸೆಯಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ಸುಸೂತ್ರವಾಗಿ ಹಾಗೂ ದೋಷರಹಿತವಾಗಿ ನಡೆಸುವ ದೃಷ್ಟಿಯಿಂದ, ನನಗೆ ದಂಡ ಪ್ರಕ್ರಿಯಾ ಸಂಹಿತೆಯ ಕಲಂ 144ನೇ ಪ್ರಕರಣದ ಅನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಭಾಸ್ಕರ್ ರಾವ್, ಐಪಿಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಆದ ನಾನು, ದಿನಾಂಕ: 27.03.2020 ರಿಂದ ದಿನಾಂಕ: 09.04.2020 ರವರೆಗೆ ರವರೆಗೆ ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯು ನಡೆಯುವ ಸಮಯದಲ್ಲಿ ಎಲ್ಲಾ ಪರೀಕ್ಷಾ ಕೇಂದ್ರಗಳ 200 ಮೀಟರ್ ಸುತ್ತಲಿನ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಜೆರಾಕ್ಸ್ ಅಂಗಡಿಗಳನ್ನು ಬೆಳಗ್ಗೆ ನಡೆಯುವ ಪರೀಕ್ಷೆಗಳ ದಿನದಂದು ಬೆಳಗ್ಗೆ 08-30 ಗಂಟೆಯಿಂದ ಮದ್ಯಾಹ್ನ 1-30 ಗಂಟೆಯವರೆಗೆ ಹಾಗೂ ಮಧ್ಯಾಹ್ನ ನಡೆಯುವ ಪರೀಕ್ಷೆಗಳ ದಿನದಂದು ಮಧ್ಯಾಹ್ನ 1-00 ಗಂಟೆಯಿಂದ ಸಂಜೆ 6-00 ಗಂಟೆಯವರೆಗೆಮುಚ್ಚುವಂತೆ ಘೋಷಿಸಿ ಪ್ರತಿಬಂಧಕಾಜ್ಞೆಯನ್ನು ವಿಧಿಸಿ ಆದೇಶ ಹೊರಡಿಸಿರುತ್ತೇನೆ.

.....2]

ಈ ನಡವಳಿಯನ್ನು ನನ್ನ ಸಹಿ ಮತ್ತು ನನ್ನ ಕಛೇರಿಯ ಮೊಹರಿನಲ್ಲಿ 2020 ರ ಮಾರ್ಚ್ ಮಾಹೆಯ ದಿನಾಂಕ 19 ರಂದು ಹೊರಡಿಸಲಾಗಿದೆ.

( ಭಾಸ್ಕರ್ ರಾವ್)
ಪೊಲೀಸ್ ಆಯುಕ್ತರು ಹಾಗೂ
ಅಪರ ಜಿಲ್ಲಾ ದಂಡಾಧಿಕಾರಿಗಳು,
ಬೆಂಗಳೂರು ನಗರ.

ಭಾಸ್ಕರ್ ರಾವ್, ಭಾ.ಪೊ.ಸೇ.
ಪೊಲೀಸ್ ಆಯುಕ್ತರು
ಬೆಂಗಳೂರು ನಗರ.

**ಪ್ರತಿಯನ್ನು:**

1. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಹೆಚ್ಚುವರಿ ಪೊಲೀಸ್ ಆಯುಕ್ತರುಗಳು
2. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಜಂಟಿ ಪೊಲೀಸ್ ಆಯುಕ್ತರುಗಳು,
3. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಉಪ ಪೊಲೀಸ್ ಆಯುಕ್ತರುಗಳು

**ಪ್ರತಿಯನ್ನು ಅಭಿನಂದನೆಗಳೊಂದಿಗೆ:**

1. ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ಕರ್ನಾಟಕ ರಾಜ್ಯ, ವಿಧಾನಸೌಧ, ಬೆಂಗಳೂರು.
2. ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.
3. ಪೊಲೀಸ್ ಮಹಾ ನಿರ್ದೇಶಕರು, ರಾಜ್ಯ ಗುಪ್ತವಾರ್ತೆ, ಕರ್ನಾಟಕ ರಾಜ್ಯ, ಬೆಂಗಳೂರು.
4. ಕಾರ್ಯದರ್ಶಿಗಳು, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳ, ಬೆಂಗಳೂರು.
5. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ, ಕಲಾಸಿಪಾಳ್ಯ, ಬೆಂಗಳೂರು.
7. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಕೆಂಪೇಗೌಡ ರಸ್ತೆ, ಬೆಂಗಳೂರು.

ಕರ್ನಾಟಕ ಸರ್ಕಾರ
(ಪೊಲೀಸ್ ಇಲಾಖೆ)

ಪೊಲೀಸ್ ಆಯುಕ್ತರು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ರವರ ನಡವಳಿಗಳು

ಉಪಸ್ಥಿತರು: ಭಾಸ್ಕರ್ ರಾವ್, ಐ.ಪಿ.ಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ.

ವಿಷಯ : ದಿನಾಂಕ: 02.03.2020 ರಿಂದ 31.03.2020 ರ ವರೆಗೆ ವಿಧಾನಸೌಧದಲ್ಲಿ ನಡೆಯುವ ಬಜೆಟ್ ಅಧಿವೇಶನದ ಸಂಬಂಧ ಅಧಿವೇಶನಗಳು ನಡೆಯುವ ದಿನಗಳಂದು ಪ್ರತಿಬಂಧಕಾಜ್ಞೆ ಜಾರಿ ಮಾಡುವ ಬಗ್ಗೆ.

ಪ್ರಸ್ತಾವನೆ :

ದಿನಾಂಕ: 02.03.2020 ರಿಂದ 31.03.2020 ರವರೆಗೆ ವಿಧಾನಸೌಧದಲ್ಲಿ ಬಜೆಟ್ ಅಧಿವೇಶನಗಳು ನಡೆಯಲಿದ್ದು, ಈ ಸಮಯದಲ್ಲಿ ವಿವಿಧ ರಾಜಕೀಯ ಪಕ್ಷಗಳು, ವಿವಿಧ ಸಂಘಟನೆಗಳು ತಮ್ಮ ಬೇಡಿಕೆಗಳಿಗೆ ಒತ್ತಾಯಿಸಿ ಮೆರವಣಿಗೆ, ಪ್ರತಿಭಟನೆ, ಧರಣಿ ಸತ್ಯಾಗ್ರಹ, ವಿಧಾನಸೌಧ ಮುತ್ತಿಗೆ, ಇತ್ಯಾದಿ ಪ್ರತಿಭಟನಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಸಾಧ್ಯತೆ ಇರುತ್ತವೆ. ಇದರಿಂದ ಅಧಿವೇಶನದ ಕಾರ್ಯಕಲಾಪಗಳಿಗೆ ಅಡಚಣೆ ಉಂಟಾಗುವುದಲ್ಲದೆ ಸಾರ್ವಜನಿಕ ನೆಮ್ಮದಿಗೆ ಭಂಗ ಹಾಗೂ ಸುಗಮ ಸಂಚಾರಕ್ಕೆ ತೊಂದರೆಯುಂಟಾಗುವ ಸಾಧ್ಯತೆಗಳು ಇರುವುದಾಗಿ ಗುಪ್ತವಾರ್ತಾ ಮಾಹಿತಿಯಿಂದ ತಿಳಿದುಬಂದಿರುತ್ತದೆ.

ಈ ನಿಟ್ಟಿನಲ್ಲಿ ನಾನು ಈ ಮೇಲ್ಕಂಡ ಮಾಹಿತಿಗಳ ಬಗ್ಗೆ ಖುದ್ದಾಗಿ ಮಾಡಿದ ವಿಚಾರಣೆಯಿಂದ ಮತ್ತು ಗುಪ್ತವಾಗಿ ಸಂಗ್ರಹಿಸಿದ ಮಾಹಿತಿಯಿಂದ ಹಾಗೂ ಗುಪ್ತವಾರ್ತಾ ವಿಭಾಗದ ಮಾಹಿತಿಯಿಂದ ಸಾಕಷ್ಟು ಸತ್ಯಾಂಶವಿದೆಯೆಂದು ತಿಳಿದು ಬಂದಿರುವುದರಿಂದಲೂ, ಅಧಿವೇಶನದ ಕಲಾಪಗಳು ಸುಗಮವಾಗಿ ನಡೆಯುವ ಹಾಗೂ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ ಈ ಕೆಳಕಂಡಂತೆ ಪ್ರತಿಬಂಧಕಾಜ್ಞೆಯನ್ನು ಹೊರಡಿಸಿರುತ್ತೇನೆ.

ಆದೇಶ ಸಂಖ್ಯೆ ಎಸ್.ಬಿ/ಗು.ವಾ/ನಿಷೇದಾಜ್ಞೆ/07/2020 ದಿನಾಂಕ : 28.02.2020

ಈ ದಿಸೆಯಲ್ಲಿ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ನನಗೆ ದಂಡ ಪ್ರಕ್ರಿಯಾ ಸಂಹಿತೆಯ ಕಲಂ 144ನೇ ಪ್ರಕರಣದ ಅನ್ವಯ ಪ್ರದತ್ತವಾದ ಅಧಿಕಾರವನ್ನು ಉಪಯೋಗಿಸಿ ಭಾಸ್ಕರ್‌ರಾವ್, ಐಪಿಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಆದ ನಾನು ದಿನಾಂಕ:02-03-2020 ರಿಂದ ದಿನಾಂಕ: 31-03-2020 ರವರೆಗೆ **ಅಧಿವೇಶನಗಳು ನಡೆಯುವ ದಿನಗಳಂದು** ಪ್ರತಿದಿನ ಬೆಳಿಗ್ಗೆ 06-00 ಗಂಟೆಯಿಂದ ಮಧ್ಯರಾತ್ರಿ 12-00 ಗಂಟೆಯವರೆಗೆ ಬೆಂಗಳೂರು ನಗರದ ವಿಧಾನಸೌಧ ಕಟ್ಟಡದ ಸುತ್ತಲೂ ಎರಡು ಕಿ.ಮೀ ವ್ಯಾಪ್ತಿಯಲ್ಲಿ ಈ ಕೆಳಕಂಡ ನಿಬಂಧನೆಗಳಿಗೆ ಒಳಪಡುವಂತೆ ನಿಷೇದಾಜ್ಞೆಯನ್ನು ವಿಧಿಸಿರುತ್ತೇನೆ.

1. ಕಾನೂನುಭಂಗ ಉಂಟು ಮಾಡುವ ಉದ್ದೇಶದಿಂದ 5 ಅಥವಾ ಅದಕ್ಕಿಂತ ಹೆಚ್ಚು ಜನರ ಗುಂಪು ಸೇರುವುದನ್ನು,
2. ಮೆರವಣಿಗೆ ಮತ್ತು ಸಭೆಗಳನ್ನು ನಡೆಸುವುದನ್ನು,

...2]

3. ಶಸ್ತ್ರಗಳನ್ನು, ದೊಣ್ಣೆಗಳನ್ನು, ಕತ್ತಿಗಳು, ಈಟಿಗಳು, ಗದೆಗಳು, ಕಲ್ಲು, ಇಟ್ಟಿಗೆ, ಚಾಕು ಇನ್ನೂ ಮುಂತಾದ ಮಾರಕಾಸ್ತ್ರಗಳನ್ನು ಅಥವಾ ದೈಹಿಕ ಹಿಂಸೆಯನ್ನುಂಟು ಮಾಡುವ ಯಾವುದೇ ವಸ್ತುಗಳನ್ನು ಒಯ್ಯುವುದನ್ನು,
4. ಯಾವುದೇ ಸ್ಫೋಟಕ ವಸ್ತುಗಳನ್ನು ಸಿಡಿಸುವುದು, ಕಲ್ಲುಗಳನ್ನು, ಕ್ಷಿಪಣಿಗಳನ್ನು ಎಸೆಯುವ ಸಾಧನಗಳ ಅಥವಾ ಉಪಕರಣಗಳ ಒಯ್ಯುವಿಕೆಯನ್ನು ಮತ್ತು ಶೇಖರಿಸುವುದನ್ನು,
5. ವ್ಯಕ್ತಿಗಳ ಅಥವಾ ಅವರ ಶವಗಳ ಪ್ರತಿಕೃತಿಗಳ ಪ್ರದರ್ಶನ ಮಾಡುವುದನ್ನು, ಪ್ರಚೋದಿಸಬಹುದಾದ ಬಹಿರಂಗ ಘೋಷಣೆಗಳನ್ನು ಕೂಗುವುದು, ಸಂಜ್ಞೆ ಮಾಡುವುದು, ಹಾಡುವುದು, ಸಂಗೀತ ನುಡಿಸುವುದು, ಚಿತ್ರಗಳನ್ನು, ಸಂಕೇತಗಳನ್ನು, ಭಿತ್ತಿ ಪತ್ರ ಅಥವಾ ಇತರೆ ಯಾವುದೇ ವಸ್ತುಗಳನ್ನು ಅಥವಾ ಪದಾರ್ಥಗಳನ್ನು ಪ್ರದರ್ಶಿಸುವುದನ್ನು ನಿಷೇಧಿಸಲಾಗಿದೆ.

ಈ ನಡವಳಿಯನ್ನು ನನ್ನ ಸಹಿ ಮತ್ತು ನನ್ನ ಕಛೇರಿಯ ಮೊಹರಿನಲ್ಲಿ 2020 ರ ಫೆಬ್ರವರಿ ಮಾಹೆಯ ದಿನಾಂಕ 28 ರಂದು ಹೊರಡಿಸಲಾಗಿದೆ.

Commissioner of Police & District Magistrate, Bengaluru City

( ಭಾಸ್ಕರ್ ರಾವ್)
ಪೊಲೀಸ್ ಆಯುಕ್ತರು ಹಾಗೂ
ಅಪರ ಜಿಲ್ಲಾ ದಂಡಾಧಿಕಾರಿಗಳು
ಬೆಂಗಳೂರು ನಗರ.

ಭಾಸ್ಕರ್ ರಾವ್, ಭಾ.ಪೊ.ಸೇ.
ಪೊಲೀಸ್ ಆಯುಕ್ತರು
ಬೆಂಗಳೂರು ನಗರ.

ಗೆ

1. ಸಂಕಲನಕಾರರು (Compiler) ಕರ್ನಾಟಕ ರಾಜ್ಯ ಪ್ರಪತ್ರ, ಬೆಂಗಳೂರು ರವರು ಈ ಆದೇಶವನ್ನು ವಿಶೇಷ ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಕೋರಲಾಗಿದೆ.
2. ಸಂಬಂಧಪಟ್ಟವರಿಗೆ

<u>ಪ್ರತಿಯನ್ನು:</u>
1. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಹೆಚ್ಚುವರಿ ಪೊಲೀಸ್ ಆಯುಕ್ತರುಗಳು
2. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಉಪ ಪೊಲೀಸ್ ಆಯುಕ್ತರುಗಳು

<u>ಪ್ರತಿಯನ್ನು ಅಭಿನಂದನೆಗಳೊಂದಿಗೆ:</u>
1. ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ಕರ್ನಾಟಕ ರಾಜ್ಯ, ಬೆಂಗಳೂರು.
2. ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.
3. ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಕಾನೂನು ಮತ್ತು ಸುವ್ಯವಸ್ಥೆ, ಬೆಂಗಳೂರು.
4. ಪೊಲೀಸ್ ಮಹಾ ನಿರೀಕ್ಷಕರು, ರಾಜ್ಯ ಗುಪ್ತವಾರ್ತೆ, ಕರ್ನಾಟಕ ರಾಜ್ಯ, ಬೆಂಗಳೂರು.
5. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.

ಕರ್ನಾಟಕ ಸರ್ಕಾರ
(ಪೊಲೀಸ್ ಇಲಾಖೆ)

ಪೊಲೀಸ್ ಆಯುಕ್ತರು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ರವರ ನಡವಳಿಗಳು

ಉಪಸ್ಥಿತರು: ಭಾಸ್ಕರ್ ರಾವ್, ಐ.ಪಿ.ಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ.

ವಿಷಯ : ದಿನಾಂಕ: 17.02.2020 ರಿಂದ ದಿನಾಂಕ: 20.02.2020 ರವರೆಗೆ ವಿಧಾನಸೌಧದಲ್ಲಿ ನಡೆಯುವ ವಿಧಾನಮಂಡಲ ಅಧಿವೇಶನದ ಸಂಬಂಧ ಪ್ರತಿಬಂಧಕಾಜ್ಞೆ ಜಾರಿ ಮಾಡುವ ಬಗ್ಗೆ.

ಪ್ರಸ್ತಾವನೆ :

ದಿನಾಂಕ: 17.02.2020 ರಿಂದ ದಿನಾಂಕ: 20.02.2020 ರವರೆಗೆ ವಿಧಾನಸೌಧದಲ್ಲಿ ವಿಧಾನಮಂಡಲ ಅಧಿವೇಶನ ನಡೆಯಲಿದ್ದು, ಈ ಸಮಯದಲ್ಲಿ ವಿವಿಧ ರಾಜಕೀಯ ಪಕ್ಷಗಳು, ವಿವಿಧ ಸಂಘಟನೆಗಳು ತಮ್ಮ ಬೇಡಿಕೆಗಳಿಗೆ ಒತ್ತಾಯಿಸಿ ಮೆರವಣಿಗೆ, ಪ್ರತಿಭಟನೆ, ಧರಣಿ ಸತ್ಯಾಗ್ರಹ, ವಿಧಾನಸೌಧ ಮುತ್ತಿಗೆ, ಇತ್ಯಾದಿ ಪ್ರತಿಭಟನಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಸಾಧ್ಯತೆ ಇರುತ್ತವೆ. ಇದರಿಂದ ಅಧಿವೇಶನದ ಕಾರ್ಯಕಲಾಪಗಳಿಗೆ ಅಡಚಣೆ ಉಂಟಾಗುವುದಲ್ಲದೆ ಸಾರ್ವಜನಿಕ ನೆಮ್ಮದಿಗೆ ಭಂಗ ಹಾಗೂ ಸುಗಮ ಸಂಚಾರಕ್ಕೆ ತೊಂದರೆಯುಂಟಾಗುವ ಸಾಧ್ಯತೆಗಳು ಇರುವುದಾಗಿ ಗುಪ್ತವಾರ್ತಾ ಮಾಹಿತಿಯಿಂದ ತಿಳಿದುಬಂದಿರುತ್ತದೆ.

ಈ ನಿಟ್ಟಿನಲ್ಲಿ ನಾನು ಈ ಮೇಲ್ಕಂಡ ಮಾಹಿತಿಗಳ ಬಗ್ಗೆ ಖುದ್ದಾಗಿ ಮಾಡಿದ ವಿಚಾರಣೆಯಿಂದ ಮತ್ತು ಗುಪ್ತವಾಗಿ ಸಂಗ್ರಹಿಸಿದ ಮಾಹಿತಿಯಿಂದ ಹಾಗೂ ಗುಪ್ತವಾರ್ತಾ ವಿಭಾಗದ ಮಾಹಿತಿಯಿಂದ ಸಾಕಷ್ಟು ಸತ್ಯಾಂಶವಿದೆಯೆಂದು ತಿಳಿದು ಬಂದಿರುವುದರಿಂದಲೂ, ಅಧಿವೇಶನದ ಕಲಾಪಗಳು ಸುಗಮವಾಗಿ ನಡೆಯುವ ಹಾಗೂ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ ಈ ಕೆಳಕಂಡಂತೆ ಪ್ರತಿಬಂಧಕಾಜ್ಞೆಯನ್ನು ಹೊರಡಿಸಿರುತ್ತೇನೆ.

ಆದೇಶ ಸಂಖ್ಯೆ ಎಸ್.ಬಿ/ಗು.ವಾ/ನಿಷೇದಾಜ್ಞೆ/06/2020 ದಿನಾಂಕ : 14.02.2020

ಈ ದಿಸೆಯಲ್ಲಿ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ನನಗೆ ದಂಡ ಪ್ರಕ್ರಿಯಾ ಸಂಹಿತೆಯ ಕಲಂ 144ನೇ ಪ್ರಕರಣದ ಅನ್ವಯ ಪ್ರದತ್ತವಾದ ಅಧಿಕಾರವನ್ನು ಉಪಯೋಗಿಸಿ ಭಾಸ್ಕರ್ ರಾವ್, ಐಪಿಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಆದ ನಾನು ದಿನಾಂಕ: 17.02.2020ರ ಬೆಳಗ್ಗೆ 06-00 ಗಂಟೆಯಿಂದ ದಿನಾಂಕ:20-02-2020 ರಂದು ಮಧ್ಯರಾತ್ರಿ 12-00 ಗಂಟೆಯವರೆಗೆ ಬೆಂಗಳೂರು ನಗರದ ವಿಧಾನಸೌಧ ಕಟ್ಟಡದ ಸುತ್ತಲೂ ಎರಡು ಕಿ.ಮೀ ವ್ಯಾಪ್ತಿಯಲ್ಲಿ ಈ ಕೆಳಕಂಡ ನಿಬಂಧನೆಗಳಿಗೆ ಒಳಪಡುವಂತೆ ನಿಷೇದಾಜ್ಞೆಯನ್ನು ವಿಧಿಸಿರುತ್ತೇನೆ.

1. ಕಾನೂನುಭಂಗ ಉಂಟು ಮಾಡುವ ಉದ್ದೇಶದಿಂದ 5 ಅಥವಾ ಅದಕ್ಕಿಂತ ಹೆಚ್ಚು ಜನರ ಗುಂಪು ಸೇರುವುದನ್ನು,
2. ಮೆರವಣಿಗೆ ಮತ್ತು ಸಭೆಗಳನ್ನು ನಡೆಸುವುದನ್ನು,
3. ಶಸ್ತ್ರಗಳನ್ನು, ದೊಣ್ಣೆಗಳನ್ನು, ಕತ್ತಿಗಳು, ಈಟಿಗಳು, ಗದೆಗಳು, ಕಲ್ಲು, ಇಟ್ಟಿಗೆ, ಚಾಕು ಇನ್ನೂ ಮುಂತಾದ ಮಾರಕಾಸ್ತ್ರಗಳನ್ನು ಅಥವಾ ದೈಹಿಕ ಹಿಂಸೆಯನ್ನುಂಟು ಮಾಡುವ ಯಾವುದೇ ವಸ್ತುಗಳನ್ನು ಒಯ್ಯುವುದನ್ನು,

4. ಯಾವುದೇ ಸ್ಫೋಟಕ ವಸ್ತುಗಳನ್ನು ಸಿಡಿಸುವುದು, ಕಲ್ಲುಗಳನ್ನು, ಕ್ಷಿಪಣಿಗಳನ್ನು ಎಸೆಯುವ ಸಾಧನಗಳ ಅಥವಾ ಉಪಕರಣಗಳ ಒಯ್ಯುವಿಕೆಯನ್ನು ಮತ್ತು ಶೇಖರಿಸುವುದನ್ನು,

5. ವ್ಯಕ್ತಿಗಳ ಅಥವಾ ಅವರ ಶವಗಳ ಪ್ರತಿಕೃತಿಗಳ ಪ್ರದರ್ಶನ ಮಾಡುವುದನ್ನು, ಪ್ರಚೋದಿಸಬಹುದಾದ ಬಹಿರಂಗ ಘೋಷಣೆಗಳನ್ನು ಕೂಗುವುದು, ಸಂಜ್ಞೆ ಮಾಡುವುದು, ಹಾಡುವುದು, ಸಂಗೀತ ನುಡಿಸುವುದು, ಚಿತ್ರಗಳನ್ನು, ಸಂಕೇತಗಳನ್ನು, ಭಿತ್ತಿ ಪತ್ರ ಅಥವಾ ಇತರೆ ಯಾವುದೇ ವಸ್ತುಗಳನ್ನು ಅಥವಾ ಪದಾರ್ಥಗಳನ್ನು ಪ್ರದರ್ಶಿಸುವುದನ್ನು ನಿಷೇಧಿಸಲಾಗಿದೆ.

ಈ ನಡವಳಿಯನ್ನು ನನ್ನ ಸಹಿ ಮತ್ತು ನನ್ನ ಕಛೇರಿಯ ಮೊಹರಿನಲ್ಲಿ 2020 ರ ಫೆಬ್ರವರಿ ಮಾಹೆಯ ದಿನಾಂಕ 14 ರಂದು ಹೊರಡಿಸಲಾಗಿದೆ.

(ಭಾಸ್ಕರ್ ರಾವ್)
ಪೊಲೀಸ್ ಆಯುಕ್ತರು ಹಾಗೂ
ಅಪರ ಜಿಲ್ಲಾ ದಂಡಾಧಿಕಾರಿಗಳು
ಬೆಂಗಳೂರು ನಗರ.

Bhaskar Rao, I.P.S.
Commissioner of Police,
Bengaluru City.

<u>ಪ್ರತಿಯನ್ನು:</u>

1. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಹೆಚ್ಚುವರಿ ಪೊಲೀಸ್ ಆಯುಕ್ತರುಗಳು
2. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಉಪ ಪೊಲೀಸ್ ಆಯುಕ್ತರುಗಳು

<u>ಪ್ರತಿಯನ್ನು ಅಭಿನಂದನೆಗಳೊಂದಿಗೆ:</u>

1. ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ಕರ್ನಾಟಕ ರಾಜ್ಯ, ಬೆಂಗಳೂರು.
2. ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.
3. ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ರಾಜ್ಯ ಗುಪ್ತವಾರ್ತೆ, ಕರ್ನಾಟಕ ರಾಜ್ಯ, ಬೆಂಗಳೂರು.
4. ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಕಾನೂನು ಮತ್ತು ಸುವ್ಯವಸ್ಥೆ, ಬೆಂಗಳೂರು.
5. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.

ಕರ್ನಾಟಕ ಸರ್ಕಾರ

(ಪೋಲೀಸ್ ಇಲಾಖೆ)

**ಪೋಲೀಸ್ ಆಯುಕ್ತರು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ರವರ ನಡವಳಿಗಳು**

**ಉಪಸ್ಥಿತರು:** ಭಾಸ್ಕರ್ ರಾವ್, ಐ.ಪಿ.ಎಸ್, ಪೋಲೀಸ್ ಆಯುಕ್ತರು, ಬೆಂಗಳೂರು ನಗರ.

**ವಿಷಯ** : ಬೆಂಗಳೂರು ನಗರ ಪೋಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಕೊರೋನ ವೈರಸ್ (ಕೋವಿಡ್-19) ಹರಡದಂತೆ ಮುಂಜಾಗೃತ ಕ್ರಮಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ದಿನಾಂಕ: 14.04.2020 ರಂದು ಮಧ್ಯರಾತ್ರಿ 12.00 ಗಂಟೆಯಿಂದ ದಿನಾಂಕ: 20.04.2020 ರ ಮಧ್ಯರಾತ್ರಿ 12.00 ಗಂಟೆಯವರೆಗೆ ನಿಷೇದಾಜ್ಞೆಯನ್ನು ಹೊರಡಿಸಿರುವ ಬಗ್ಗೆ.

**ಉಲ್ಲೇಖ** :
1. ಕೇಂದ್ರ ಗೃಹ ಮಂತ್ರಾಲಯ ಕಛೇರಿಯ ಆದೇಶ ಸಂಖ್ಯೆ: 40-3/2020, ದಿನಾಂಕ: 24.03.2020.
2. ಕೇಂದ್ರ ಗೃಹ ಮಂತ್ರಾಲಯ ಕಛೇರಿಯ ಆದೇಶ ಸಂಖ್ಯೆ: 40-3/2020-DM-I (A), Dated: 25.03.2020.
3. ಕೇಂದ್ರ ಗೃಹ ಮಂತ್ರಾಲಯ ಕಛೇರಿಯ ಆದೇಶ ಸಂಖ್ಯೆ: 40-3/2020-DM-I (A), Dated: 27.03.2020.
4. ರಾಜ್ಯ ಕಾರ್ಯಕಾರಿ ಸಮಿತಿ (ಎಸ್.ಇ.ಸಿ) ಸಭೆಯ ನಡವಳಿಗಳು ದಿನಾಂಕ 25.03.2020.
5. ಕರ್ನಾಟಕ ಸರ್ಕಾರದ ಸಚಿವಾಲಯದ ಸುತ್ತೋಲೆ ಸಂಖ್ಯೆ: CI/06/SPI/2020, Dated: 03.04.2020.
6. ಕರ್ನಾಟಕ ಸರ್ಕಾರದ ಸಚಿವಾಲಯ, ಕೃಷಿ ಇಲಾಖೆ ರವರ ಸುತ್ತೋಲೆ ಸಂಖ್ಯೆ: AGD/2020-2021/ Dated: 06.04.2020.

-----

**ಪ್ರಸ್ತಾವನೆ:**

ಕೋವಿಡ್-19 ವೈರಸ್ (ಸಾಂಕ್ರಾಮಿಕ ರೋಗ) ಹರಡುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಉಲ್ಲೇಖಿತ ಆದೇಶದ ಅನ್ವಯ ಕೇಂದ್ರ ಗೃಹ ಮಂತ್ರಾಲಯವು ಹೊರಡಿಸಿರುವ ಮಾರ್ಗಸೂಚಿಗಳನ್ವಯ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು ಅತ್ಯಗತ್ಯವಾಗಿರುವುದರಿಂದ ಬೆಂಗಳೂರು ನಗರ ಪೋಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಈ ಕೆಳಕಂಡಂತೆ ನಿಷೇದಾಜ್ಞೆಯನ್ನು ಹೊರಡಿಸಲಾಗಿದೆ.

**ಆದೇಶ ಸಂಖ್ಯೆ ಎಸ್.ಬಿ/ಗು.ವಾ/ನಿಷೇದಾಜ್ಞೆ/12/2020 ದಿನಾಂಕ : 14.04.2020**

ಈ ದಿಸೆಯಲ್ಲಿ ಭಾಸ್ಕರ್ ರಾವ್, ಐಪಿಎಸ್, ಪೋಲೀಸ್ ಆಯುಕ್ತರು, ಬೆಂಗಳೂರು ನಗರ ಆದ ನಾನು ದಂಡ ಪ್ರಕ್ರಿಯಾ ಸಂಹಿತೆಯ ಕಲಂ 144(1) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕೊರೋನ ವೈರಸ್ (ಕೋವಿಡ್-19) ಸ್ಫೋಟ ಮತ್ತು ಸೋಂಕು ಹರಡುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಬೆಂಗಳೂರು ನಗರದ ಪೋಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ **ದಿನಾಂಕ: 14.04.2020 ರ ಮಧ್ಯರಾತ್ರಿ 12-00 ಗಂಟೆಯಿಂದ ದಿನಾಂಕ: 20.04.2020 ರಂದು ಮಧ್ಯರಾತ್ರಿ 12-00 ಗಂಟೆಯವರೆಗೆ** ಕೇಂದ್ರ ಗೃಹ ಮಂತ್ರಾಲಯದಿಂದ ಹೊರಡಿಸಿರುವ ಆದೇಶಗಳನ್ವಯ ಈ ಕೆಳಕಂಡ ನಿಬಂಧನೆಗಳಿಗೆ ಒಳಪಡುವಂತೆ ನಿಷೇದಾಜ್ಞೆಯನ್ನು ವಿಧಿಸಿರುತ್ತೇನೆ.

...2]

1) ಕೇಂದ್ರ ಸರ್ಕಾರದಡಿ ಬರುವ ಎಲ್ಲಾ ಕಛೇರಿಗಳು, ಅಧೀನದ ಕಛೇರಿಗಳು, ಸ್ವಾಯತ್ತ ಸಂಸ್ಥೆಗಳನ್ನು ಮುಚ್ಚತಕ್ಕದ್ದು.

**ವಿನಾಯಿತಿಗಳು :**

a) ಮಿಲಿಟರಿ/ಸಿ.ಆರ್.ಪಿ.ಎಫ್/ಖಜಾನೆ, ಸಾರ್ವಜನಿಕ ಉಪಯುಕ್ತ ವಸ್ತುಗಳು (ಇಂಧನ, ಸಿ.ಎನ್.ಜಿ, ಎಲ್.ಪಿ.ಜಿ, ಪಿ.ಎನ್.ಜಿ), ವಿಪತ್ತು ನಿರ್ವಹಣೆ, ವಿದ್ಯುತ್ ಉತ್ಪಾದನೆ ಮತ್ತು ವಿತರಣಾ ಘಟಕ, ಅಂಚೆ ಕಛೇರಿ, ರಾಷ್ಟ್ರೀಯ ಮಾಹಿತಿ ಕೇಂದ್ರ, ಮುಂಗಡ ಮಾಹಿತಿ ಸಂಸ್ಥೆಗಳು.

b) ಖಜಾನೆ, ಪಾವತಿಸುವ ಮತ್ತು ಖಾತೆಗಳ ಕಚೇರಿ, ಹಣಕಾಸು ಸಲಹೆಗಾರರು, ಅಕೌಂಟ್ಸ್ ಜನರಲ್ ಕ್ಷೇತ್ರ ಕಛೇರಿಗಳು (ಕನಿಷ್ಟ ಸಿಬ್ಬಂದಿಗಳೊಂದಿಗೆ)

c) ವಿಮಾನ ನಿಲ್ದಾಣ, ಭೂಗಡಿಗಳಲ್ಲಿ ಕಸ್ಟಮ್ಸ್ ಕ್ಲಿಯರೆನ್ಸ್, ಜಿ.ಎಸ್.ಟಿ.ಎನ್ ಮತ್ತು ಎಂ.ಸಿ.ಎ–21 ನೋಂದಣಿ ಕಛೇರಿಗಳು. (ಕನಿಷ್ಟ ಸಿಬ್ಬಂದಿಗಳೊಂದಿಗೆ)

d) ಆರ್.ಬಿ.ಐ ಮತ್ತು ಆರ್.ಬಿ.ಐ. ನಿಯಂತ್ರಿತ ಮಾರುಕಟ್ಟೆಗಳು, ಎನ್.ಟಿ.ಟಿ.ಸಿಗಳಿಗೆ ಒಳಪಟ್ಟ ಎನ್.ಪಿ.ಸಿ.ಐ, ಸಿ.ಸಿ.ಐ.ಎಲ್. ಪೇಮೆಂಟ್ ಸಿಸ್ಟಂ ಆಪರೇಟರ್ಸ್ ಮತ್ತು ಸ್ಟಾಂಡಲೋನ್ ಪ್ರೈಮರಿ ಡೀಲರ್ಸ್ (ಕನಿಷ್ಟ ಸಿಬ್ಬಂದಿಗಳೊಂದಿಗೆ).

e) ವಿದೇಶಿ ರಾಯಭಾರಿ ಕಛೇರಿಗಳು (Consulate) ಹಾಗೂ ವಿದೇಶಿ ನಿಯೋಗಗಳು.

2) ಎಲ್ಲಾ ರಾಜ್ಯ ಸರ್ಕಾರದ ಕಛೇರಿಗಳು, ಅದರ ಅಧೀನ ಸಂಸ್ಥೆಗಳು/ಸ್ವಾಯತ್ತ ಸಂಸ್ಥೆಗಳನ್ನು ಮುಚ್ಚತಕ್ಕದ್ದು.

**ವಿನಾಯಿತಿಗಳು :**

a) ಪೊಲೀಸ್, ಗೃಹ ರಕ್ಷಕ ದಳ, ನಾಗರಿಕ ರಕ್ಷಣಾ ದಳ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳು, ವಿಪತ್ತು ನಿರ್ವಹಣಾ ದಳ ಮತ್ತು ಕಾರಾಗೃಹಗಳು.

b) ಜಿಲ್ಲಾಡಳಿತಗಳು, ಖಜಾನೆ ಸಂಬಂಧಿ ಕಛೇರಿಗಳು, ಅಕೌಂಟ್ಸ್ ಜನರಲ್ ಕ್ಷೇತ್ರ ಕಛೇರಿಗಳು (ಕನಿಷ್ಟ ಸಿಬ್ಬಂದಿಗಳೊಂದಿಗೆ)

c) ವಿದ್ಯುಚ್ಛಕ್ತಿ, ನೀರು ಮತ್ತು ಒಳಚರಂಡಿ ಮಂಡಳಿ.

d) ಪೌರ ಸಂಸ್ಥೆಗಳು ಒಳಚರಂಡಿ ಸೇವೆಗಳು, ನೀರು ಸರಬರಾಜು ಕಾರ್ಯಗಳಿಗೆ ಅಗತ್ಯವಿರುವ ಸಿಬ್ಬಂದಿಗಳನ್ನು ಮಾತ್ರ ಬಳಸುವುದು.

e) ಕೋವಿಡ್–19 ಸಂಬಂಧ ಕಾರ್ಯಾಚರಣೆಗಳು (ಕನಿಷ್ಟ ಪ್ರಮಾಣದ ಸಿಬ್ಬಂದಿಗಳೊಂದಿಗೆ).

f) ಅರಣ್ಯ ಇಲಾಖೆ ಕಛೇರಿಗೆ ಸಂಬಂಧಿಸಿದ ಮೃಗಾಲಯ, ನರ್ಸರಿಗಳು, ವನ್ಯಜೀವಿಗಳು, ಬೆಂಕಿ ಅವಘಡಗಳು, ನೆಡುತೋಪುಗಳು, ಗಸ್ತು ಮತ್ತು ಅವುಗಳ ಅಗತ್ಯ ಸಾರಿಗೆ ಕೆಲಸಗಳ ನಿರ್ವಹಣೆಗೆ ಸಿಬ್ಬಂದಿಗಳ ಅಗತ್ಯತೆ ಇದೆ ಎಂದು ಅವಶ್ಯಕತೆ ಕಂಡು ಬಂದಲ್ಲಿ.

g) ಸಮಾಜ ಕಲ್ಯಾಣ ಇಲಾಖೆ : ಮಕ್ಕಳು/ವಿಕಲಚೇತನರು/ಹಿರಿಯ ನಾಗರೀಕರು/ ನಿರ್ಗತಿಕರು/ಮಹಿಳೆಯರು/ವಿಧವೆಯರು ಇರುವ ಗೃಹಗಳು, ವೀಕ್ಷಣಾ ಮನೆಗಳು ಮತ್ತು ಪಂಚಣಿ ಕಾರ್ಯಗಳು (ಕನಿಷ್ಟ ಪ್ರಮಾಣದ ಸಿಬ್ಬಂದಿಗಳೊಂದಿಗೆ)

h) ಕೃಷಿ ಉತ್ಪನ್ನಗಳ ಸಂಗ್ರಹದಲ್ಲಿ ತೊಡಗಿರುವ ಏಜೆನ್ಸಿಗಳು, ಎಂ.ಎಸ್.ಪಿ ಕಾರ್ಯಾಚರಣೆಗಳು.

i) ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ನಿರ್ವಹಿಸಲ್ಪಡುವ ಅಥವಾ ರಾಜ್ಯ ಸರ್ಕಾರವು ಸೂಚಿಸಿದ ಮಂಡಿಗಳು.

ಮೇಲ್ಕಂಡ ಕ್ರ.ಸಂ. 1 ಮತ್ತು 2 ರಲ್ಲಿ ಹೇಳಲಾಗಿರುವ ಸರ್ಕಾರಿ ಕಛೇರಿಗಳಲ್ಲಿ ಕನಿಷ್ಟ ಪ್ರಮಾಣದ ಸಿಬ್ಬಂದಿಗಳನ್ನು ಬಳಸಿ ಕೆಲಸ ನಿರ್ವಹಿಸುವುದು. ಇತರೆ ಕಛೇರಿಯ ಕೆಲಸಗಳನ್ನು ಮನೆಯಲ್ಲಿಯೇ ಕುಳಿತು ನಿರ್ವಹಿಸುವುದು.

...3]

3) ಆಸ್ಪತ್ರೆಗಳು ಮತ್ತು ಅದಕ್ಕೆ ಸಂಬಂಧಿಸಿದ ಎಲ್ಲಾ ವೈದ್ಯಕೀಯ ಸಂಸ್ಥೆಗಳು, ತಯಾರಿಕಾ ಮತ್ತು ವಿತರಣಾ ಘಟಕಗಳು, ಖಾಸಗಿ ಮತ್ತು ಸಾರ್ವಜನಿಕ ವಲಯಗಳು, ಔಷಧಾಲಯಗಳು, ಔಷಧಿ ಮತ್ತು ವೈದ್ಯಕೀಯ ಸಲಕರಣೆಗಳನ್ನು ಪೂರೈಸುವ ಮಳಿಗೆಗಳು, ಪ್ರಯೋಗಾಲಯಗಳು ಕ್ಲಿನಿಕ್, ನರ್ಸಿಂಗ್ ಹೋಂ, ಆಂಬುಲೆನ್ಸ್, ಪಶು ಚಿಕಿತ್ಸಾಲಯ, ಜನೌಷಧಿ ಕೇಂದ್ರಗಳು, ಸಂಶೋಧನಾ ಪ್ರಯೋಗಾಲಯಗಳ ಸೇವೆಗಳು ಮುಂದುವರೆಯುತ್ತವೆ.

ವೈದ್ಯಕೀಯ ಕ್ಷೇತ್ರಕ್ಕೆ ಸಂಬಂಧಿಸಿದ ಸಿಬ್ಬಂದಿಗಳು, ನರ್ಸ್‌ಗಳು, ಅರೆ-ವೈದ್ಯಕೀಯ ಸಿಬ್ಬಂದಿ ಸೇರಿದಂತೆ ಸಹಕರಿಸುವ ಇತರೆ ಆಸ್ಪತ್ರೆಗಳಿಗೆ ಸಂಬಂಧಿಸಿದ ಸೇವೆಗಳ ಸಾರಿಗೆ/ಸಾಗಾಣಿಕೆಗೆ ಅನುಮತಿಸಿದೆ.

4) ವಾಣಿಜ್ಯ ಮಳಿಗೆಗಳು ಮತ್ತು ಖಾಸಗಿ ಸಂಸ್ಥೆಗಳನ್ನು ಮುಚ್ಚತಕ್ಕದ್ದು.

<u>ವಿನಾಯಿತಿಗಳು :</u>

a) ಪಿ.ಡಿ.ಎಸ್. (ಸಾರ್ವಜನಿಕ ವಿತರಣಾ ಶಾಪ್) ಅಡಿಯಲ್ಲಿ ಕಾರ್ಯನಿರ್ವಹಿಸುವ ಆಹಾರ ಮಳಿಗೆಗಳು ಸೇರಿದಂತೆ, ದಿನಸಿ ಅಂಗಡಿಗಳು, ಹಣ್ಣು ಮತ್ತು ತರಕಾರಿಗಳು, ಹಾಲು ಮತ್ತು ಡೈರಿ ಉತ್ಪನ್ನಗಳ ಮಾರಾಟ ಮಳಿಗೆಗಳು, ಮಾಂಸ ಮತ್ತು ಮೀನು ಪ್ರಾಣಿಗಳ ಆಹಾರ, ಬಿಸ್ಕತ್ & ಬೇಕರಿ ಉತ್ಪನ್ನಗಳು ಹಾಗೂ ಸಿಹಿ ತಿನಿಸುಗಳ ಮಾರಾಟದ ಚಿಲ್ಲರೆ ಅಂಗಡಿಗಳು. ಆದಾಗ್ಯೂ, ಜಿಲ್ಲಾ ಪ್ರಾಧಿಕಾರವು ತಮ್ಮ ಮನೆಗಳ ಹೊರಗಿನ ವ್ಯಕ್ತಿಗಳ ಓಡಾಟವನ್ನು ಕಡಿಮೆ ಮಾಡಲು ಮನೆಗೆ ವಿತರಣೆ ಮಾಡುವುದನ್ನು ಪ್ರೋತ್ಸಾಹಿಸುವುದು ಮತ್ತು ಸೌಲಭ್ಯ ಒದಗಿಸುವುದು.

b) ಬ್ಯಾಂಕ್, ವಿಮೆ ಕಛೇರಿಗಳು ಮತ್ತು ಎ.ಟಿ.ಎಂ., ಬ್ಯಾಂಕಿಂಗ್ ಕಾರ್ಯಾಚರಣೆಗಳಾದ ಐ.ಟಿ. ವೆಂಡರ್ಸ್ ಮತ್ತು ಎ.ಟಿ.ಎಂ ಕಾರ್ಯಾಚರಣೆಗಳು, ನಗದು ನಿರ್ವಹಣಾ ಏಜನ್ಸಿಗಳು.

c) ಮುದ್ರಣ ಮತ್ತು ಎಲೆಕ್ಟ್ರಾನಿಕ್ ಮಾಧ್ಯಮಗಳು.

d) ಸಂವಹನ ಸಾಧನಗಳಾದ ಅಂತರ್ಜಾಲ ಸೇವೆಗಳು, ಪ್ರಸಾರ ಮತ್ತು ಕೇಬಲ್ ಸೇವೆಗಳು. ಐ.ಟಿ ಮತ್ತು ಐ.ಟಿ. ಸೇವೆಗಳನ್ನು ಸಕ್ರಿಯಗೊಳಿಸುವುದು (ಅಗತ್ಯ ಸೇವೆಗಳು ಮಾತ್ರ). ಸಾಧ್ಯವಾದಷ್ಟು ಕಾರ್ಯಗಳನ್ನು ಮನೆಯಲ್ಲಿ ಕುಳಿತು ನಿರ್ವಹಿಸುವುದು.

e) ಆಹಾರ, ಔಷಧೀಯ ವಸ್ತುಗಳು, ವೈದ್ಯಕೀಯ ಉಪಕರಣಗಳು ಸೇರಿದಂತೆ ಎಲ್ಲಾ ಅಗತ್ಯ ವಸ್ತುಗಳನ್ನು ಇ-ಕಾಮರ್ಸ್ ಮೂಲಕ ತಲುಪಿಸುವುದು.

f) ಪೆಟ್ರೋಲ್ ಬಂಕ್‌ಗಳು, ಎಲ್.ಪಿ.ಜಿ, ಪೆಟ್ರೋಲಿಯಂ ಮತ್ತು ಗ್ಯಾಸ್ ಚಿಲ್ಲರೆ ಮತ್ತು ದಾಸ್ತಾನು ಮಳಿಗೆಗಳು, ಭಿತ್ತನೆ ಬೀಜ, ಕೀಟನಾಶಕ ಮತ್ತು ರಸಗೊಬ್ಬರ ಮಳಿಗೆಗಳು.

g) ವಿದ್ಯುತ್ ಉತ್ಪಾದನೆ, ಪ್ರಸರಣ ಮತ್ತು ವಿತರಣಾ ಘಟಕಗಳು ಹಾಗು ಸೇವೆಗಳು.

h) ರೈತರು ಮತ್ತು ಕೃಷಿ ಕಾರ್ಮಿಕರ ಕೆಲಸ ಕಾರ್ಯಗಳು.

i) ಕೃಷಿ ಯಂತ್ರೋಪಕರಣಗಳಿಗೆ ಸಂಬಂಧಿಸಿದಂತೆ ನಿರ್ವಹಿಸಲಾಗಿರುವ ಕಸ್ಟಮ್ಸ್ ನೇಮಕ ಕೇಂದ್ರಗಳು.

j) ರಸಗೊಬ್ಬರಗಳು, ಕ್ರಿಮಿನಾಶಕಗಳು ಮತ್ತು ಬಿತ್ತನೆ ಬೀಜ ಉತ್ಪಾದನೆ ಮತ್ತು ಪ್ಯಾಕಿಂಗ್ ಘಟಕಗಳು.

k) ಯಂತ್ರೋಪಕರಣಗಳ ಸಹಾಯದಿಂದ ನಡೆಸಲಾಗಿರುವ ಕೃಷಿ ಬೆಳೆಗಳ ಕೊಯ್ಲು ಮತ್ತು ಭಿತ್ತನೆ ಪದಾರ್ಥಗಳ ರಾಜ್ಯ ಮತ್ತು ಅಂತರ್‌ರಾಜ್ಯ ಸಾಗಣೆ.

l) ಭಾರತೀಯ ಭದ್ರತೆ ಮತ್ತು ವಿನಿಮಯ ಮಂಡಳಿ (ಸೆಬಿ) ಯಿಂದ ತಿಳಿಸಿರುವ ಬಂಡವಾಳ ಮತ್ತು ಸಾಲ ಮಾರುಕಟ್ಟೆ ಸೇವೆಗಳು, ಸರ್ಕಾರದ ಚಟುವಟಿಕೆಗಳಿಗೆ ಸಂಬಂಧಿಸಿದ ಡೇಟಾ ಮತ್ತು ಕಾಲ್ ಸೆಂಟರ್‌ಗಳು.

m) ಶೈತ್ಯಗಾರಗಳು ಮತ್ತು ದಸ್ತಾನು ಮಳಿಗೆ ಸೇವೆಗಳು.

n) ಖಾಸಗಿ ಭದ್ರತಾ ಸೇವೆಗಳು.

ಇನ್ನಿತರೆ ಸಂಸ್ಥೆಗಳು ಮನೆಯ ಮೂಲಕ ಕರ್ತವ್ಯ ನಿರ್ವಹಿಸಬಹುದು.

5) ಕೈಗಾರಿಕಾ ಘಟಕಗಳನ್ನು ಮುಚ್ಚುವುದು.

<u>ವಿನಾಯಿತಿಗಳು:</u> .

a) ಅಗತ್ಯ ವಸ್ತುಗಳ ಉತ್ಪಾದನಾ ಘಟಕಗಳು.

b) ರಾಜ್ಯ ಸರ್ಕಾರ ಉತ್ಪಾದನೆ ಪ್ರಕ್ರಿಯೆಯನ್ನು ಮುಂದುವರೆಸುವುದನ್ನು ಅಗತ್ಯಪಡಿಸುವ ಉತ್ಪಾದನಾ ಘಟಕಗಳು.

c) ಅಗತ್ಯ ವಸ್ತುಗಳ ಉತ್ಪಾದನಾ ಘಟಕಗಳಾದ ಔಷಧಗಳು, ವೈದ್ಯಕೀಯ ಸಾಧನಗಳು, ಅವುಗಳಿಗೆ ಸಂಬಂಧಿಸಿದ ಕಚ್ಚಾ ಅಥವಾ ಮಧ್ಯಂತರ ವಸ್ತುಗಳು.

d) ಕಲ್ಲಿದ್ದಲು ಮತ್ತು ಖನಿಜ ಉತ್ಪಾದನಾ ಘಟಕಗಳು, ಸಾಗಾಣಿಕೆ, ಸ್ಫೋಟಕಗಳು ಮತ್ತು ಅದಕ್ಕೆ ಸಂಬಂಧಿಸಿದ ಇತರೆ ಪೂರಕಾ ಸಾಮಾಗ್ರಿಗಳು.

e) ಆಹಾರ ಸಾಮಾಗ್ರಿಗಳು, ಔಷಧಿಗಳು, ಔಷಧಿಗಳ ಇತ್ಯಾದಿ ಸಾಧನಗಳನ್ನು ಪ್ಯಾಕಿಂಗ್ ಮಾಡುವ ಉತ್ಪಾದನಾ ಘಟಕಗಳು.

ಪ್ರಸ್ತುತ ಲಾಕ್‌ಡೌನ್ ಅವಧಿಯಲ್ಲಿ ಅಗತ್ಯ ವಸ್ತುಗಳ ಕಾರ್ಖಾನೆಗಳು ಹಾಗೂ Continuous production process ಕಾರ್ಖಾನೆಗಳಿಗೆ ಆರೋಗ್ಯ ಇಲಾಖೆಯು ನೀಡುವ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸುವುದು.

6) ವಿಮಾನಯಾನ, ರೈಲು ಮತ್ತು ರಸ್ತೆ ಸಾರಿಗೆ ಎಲ್ಲಾ ಸಾರಿಗೆ ಸೇವೆಗಳನ್ನು ನಿರ್ಬಂಧಿಸಿದೆ.

<u>ವಿನಾಯಿತಿಗಳು:</u>

a) ಅಗತ್ಯ ಸರಕುಗಳು ಸಾಗಾಟ.

b) ಅಗತ್ಯ ಸೇವೆಗಳಾದ ಅಗ್ನಿಶಾಮಕ, ಕಾನೂನು ಮತ್ತು ಸುವ್ಯವಸ್ಥೆ ಹಾಗೂ ತುರ್ತು ಸೇವೆಗಳು.

c) ಸರಕು ಸಾಗಾಣೆ, ಪರಿಹಾರ ಮತ್ತು ಸ್ಥಳಾಂತರಿಸುವಿಕೆ, ಅವುಗಳ ಕಾರ್ಯಾಚರಣೆ ಅಂಗವಾಗಿ ಕಾರ್ಯನಿರ್ವಹಿಸುವ, ರೈಲ್ವೆ, ವಿಮಾನ ನಿಲ್ದಾಣಗಳ ಕಾರ್ಯಾಚರಣೆಗಳು.

d) ಪೆಟ್ರೋಲಿಯಂ ಉತ್ಪನ್ನಗಳು, ಎಲ್.ಪಿ.ಜಿ, ಆಹಾರ ಉತ್ಪನ್ನಗಳು, ವೈದ್ಯಕೀಯ ಸೇರಿದಂತೆ ಅಗತ್ಯ ವಸ್ತುಗಳ ಸಂಬಂಧ ಭೂಗಡಿಗಳನ್ನು ದಾಟುವುದು.

7) ಆತಿಥ್ಯ ಸೇವೆಗಳನ್ನು ನಿರ್ಬಂಧಿಸಿದೆ.

**ವಿನಾಯಿತಿಗಳು :**

a) ಲಾಕ್‌ಡೌನ್ ವೈದ್ಯಕೀಯ ಮತ್ತು ತುರ್ತು ಸಿಬ್ಬಂದಿ, ಮತ್ತು ವಾಯು ಸಿಬ್ಬಂದಿಗಳ ಕಾರಣದಿಂದಾಗಿ ಪ್ರವಾಸಿಗರು ಮತ್ತು ವ್ಯಕ್ತಿಗಳನ್ನು ಹೊಂದಿರುವ ಹೊಟೇಲ್‌ಗಳ, ಹೋಂ ಸ್ಟೇಗಳು, ಲಾಡ್ಜ್‌ಗಳು, ಮೋಟಲ್ಸ್‌ಗಳು.

b) ಪ್ರತ್ಯೇಕಿಸಲಾದ (ಕ್ವಾರೆಂಟೇನ್) ವ್ಯಕ್ತಿಗಳಿಗಾಗಿ ಮೀಸಲಿರಿಸಿದ ಕಟ್ಟಡಗಳು.

8) ಎಲ್ಲಾ ಶಿಕ್ಷಣ ಸಂಸ್ಥೆಗಳು, ತರಬೇತಿ, ಸಂಶೋಧನೆ, ಕೋಚಿಂಗ್ ಸೆಂಟರ್ ಇತ್ಯಾದಿಗಳನ್ನು ಮುಚ್ಚುವುದು.

9) ಎಲ್ಲಾ ಪೂಜಾ ಸ್ಥಳಗಳಲ್ಲಿ ಸಾರ್ವಜನಿಕರಿಗೆ ನಿರ್ಬಂಧಿಸಿದೆ. ವಿನಾಯಿತಿ ಪಡೆಯದ ಯಾವುದೇ ಧಾರ್ಮಿಕ ಸಭೆಗಳಿಗೆ ಅನುಮತಿಸಲಾಗುವುದಿಲ್ಲ.

10) ಎಲ್ಲಾ ರೀತಿಯ ಸಾಮಾಜಿಕ/ ರಾಜಕೀಯ/ ಕ್ರೀಡೆ/ ಮನರಂಜನೆ/ ಶೈಕ್ಷಣಿಕ/ ಸಾಂಸ್ಕೃತಿಕ/ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಗುಂಪು ಸೇರುವುದನ್ನು ನಿರ್ಬಂಧಿಸಿದೆ.

11) ಅಂತ್ಯಕ್ರಿಯೆಯ ಕಾರ್ಯಕ್ರಮದಲ್ಲಿ 20 ಕ್ಕಿಂತ ಹೆಚ್ಚು ವ್ಯಕ್ತಿಗಳು ಸೇರತಕ್ಕದ್ದಲ್ಲ.

ದಿನಾಂಕ 15.02.2020 ನಂತರ ಭಾರತಕ್ಕೆ ಆಗಮಿಸಿದ ಹಾಗೂ ಆರೋಗ್ಯ ರಕ್ಷಣಾ ಸಿಬ್ಬಂದಿಗಳು ಕಟ್ಟುನಿಟ್ಟಾಗಿ ಮನೆ ಅಥವಾ ಸಂಪರ್ಕ ತಡೆಯನ್ನು ಒಂದು ಅವಧಿಯವರೆಗೆ ಉಳಿಯುವಂತೆ ನಿರ್ಬಂಧಿಸಿದ ಎಲ್ಲಾ ವ್ಯಕ್ತಿಗಳು, ಸ್ಥಳೀಯ ಆರೋಗ್ಯ ಪ್ರಾಧಿಕಾರಿಯವರು ತೀರ್ಮಾನಿಸುವ ಅವಧಿಯವರೆಗೆ ನಿರ್ಬಂಧಿಸಿದ ಸ್ಥಳದಲ್ಲಿಯೇ ಇರಬೇಕು. ತಪ್ಪಿದಲ್ಲಿ, ಅಂತಹ ವ್ಯಕ್ತಿಗಳು ಕಲಂ 188 ಐ.ಪಿ.ಸಿ ರೀತ್ಯಾ ಕಾನೂನು ಕ್ರಮಕ್ಕೆ ಹೊಣೆಗಾರರಾಗುತ್ತಾರೆ.

ಎಲ್ಲೆಲ್ಲಿ ಧಾರಕ ಕ್ರಮಗಳಿಗೆ ವಿನಾಯಿತಿ ನೀಡಲಾಗಿದೆಯೋ ಅಂತಹ ಸಂಸ್ಥೆಗಳು/ಸಿಬ್ಬಂದಿಗಳು ಕೋವಿಡ್-19 ವೈರಾಣು ಸೋಂಕು ಹರಡದಂತೆ ಮುನ್ನೆಚರಿಕೆ ಕ್ರಮಗಳನ್ನು ವಹಿಸಬೇಕು ಹಾಗೂ ಆರೋಗ್ಯ ಇಲಾಖೆ ಕಾಲಕಾಲಕ್ಕೆ ನೀಡುವ ಸಲಹೆಯಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ವಹಿಸುವುದು ಹಾಗೂ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವುದು.

ಮೇಲ್ಕಂಡಂತೆ ತೆಗೆದುಕೊಳ್ಳಲಾಗಿರುವ ಎಲ್ಲಾ ಕಟ್ಟುನಿಟ್ಟಾದ ನಿರ್ಬಂಧಗಳು ಜನರ ಚಲನ-ವಲನಗಳಿಗೆ ಸಂಬಂಧಿಸಿದವುಗಳಾಗಿದ್ದು, ಅಗತ್ಯ ಸರಕುಗಳಿಗೆ ಸಂಬಂಧಿಸಿರುವುದಿಲ್ಲ.

ಯಾವುದೇ ವ್ಯಕ್ತಿ ಈ ಮೇಲಿನ ನಿಯಂತ್ರಣ ಕ್ರಮಗಳನ್ನು ಉಲ್ಲಂಘಿಸಿದಲ್ಲಿ, ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ-2005ರ ಕಲಂ 51 ರಿಂದ 60 ಜೊತೆಗೆ ಭಾರತೀಯ ದಂಡ ಸಂಹಿತೆ ಕಲಂ 188 ರೀತ್ಯಾ ಕಾನೂನು ಕ್ರಮ ಜರುಗಿಸಲಾಗುವುದು.

ಮೇಲ್ಕಂಡ ನಿಯಂತ್ರಣ ಕ್ರಮಗಳು ದಿನಾಂಕ 14.04.2020 ರಂದು ಮದ್ಯರಾತ್ರಿ 12.00 ಗಂಟೆಯಿಂದ ದಿನಾಂಕ: 20.04.2020 ರ ಮದ್ಯರಾತ್ರಿ 12.00 ಗಂಟೆಯವರೆಗೆ ಜಾರಿಯಲ್ಲಿರುತ್ತವೆ.

ಈ ನಿರ್ಬಂಧಗಳು ಹಾಗೂ ವಿನಾಯಿತಿಗಳು ಸೇರಿದಂತೆ, ಈ ಸಂಬಂಧ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಆಗಾಗ್ಗೆ ಹೊರಡಿಸುವ ಆದೇಶಗಳು ಹಾಗೂ ವಿನಾಯಿತಿಗಳು ಈ ಪ್ರತಿಬಂಧಕಾಜ್ಞೆಗೆ ಒಳಪಡುತ್ತವೆ.

....6]

ಈ ಆದೇಶದಿಂದ ಯಾವುದೇ ವ್ಯಕ್ತಿ ಬಾಧಿತನಾಗಿದ್ದರೆ, ಈ ಆದೇಶದ ಬದಲಾವಣೆ/ಮಾರ್ಪಾಡಿಗೆ ಈ ಕಛೇರಿಯೆದರು ದಂಡ ಪ್ರಕ್ರಿಯ ಸಂಹಿತೆ ಕಲಂ 144(5) ರಡಿ ಅಥವಾ ದಂಡ ಪ್ರಕ್ರೀಯ ಸಂಹಿತೆ ಕಲಂ 144(6) ಮಾನ್ಯ ಘನ ಕರ್ನಾಟಕ ಸರ್ಕಾರದೆದುರು ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

ಈ ಆದೇಶದ ನಡವಳಿಯನ್ನು ನನ್ನ ಸಹಿ ಮತ್ತು ನನ್ನ ಕಛೇರಿಯ ಮೊಹರಿನಲ್ಲಿ 2020 ರ ಏಪ್ರಿಲ್ ಮಾಹೆಯ ದಿನಾಂಕ 14 ರಂದು ಹೊರಡಿಸಲಾಗಿದೆ.

ಈ ಆದೇಶವನ್ನು ಕರ್ನಾಟಕ ಘನ ಸರ್ಕಾರದ ಸನ್ನಿಧಿಗೆ ಸಲ್ಲಿಸಲಾಗಿದೆ.

Seal of the Commissioner of Police & District Magistrate, Bengaluru City

( ಭಾಸ್ಕರ್ ರಾವ್ )
ಪೊಲೀಸ್ ಆಯುಕ್ತರು ಹಾಗೂ
ಅಪರ ಜಿಲ್ಲಾ ದಂಡಾಧಿಕಾರಿಗಳು
ಬೆಂಗಳೂರು ನಗರ

ಭಾಸ್ಕರ್ ರಾವ್, ಭಾ.ಪೊ.ಸೇ.
ಪೊಲೀಸ್ ಆಯುಕ್ತರು
ಬೆಂಗಳೂರು ನಗರ.

ಗೆ,

1. ಸಂಕಲನಕಾರರು (Compiler), ಕರ್ನಾಟಕ ರಾಜ್ಯ ಪ್ರಪತ್ರ, ಬೆಂಗಳೂರು ರವರು ಈ ಆದೇಶವನ್ನು ವಿಶೇಷ ಕರ್ನಾಟಕ ರಾಜ್ಯ ಪತ್ರದಲ್ಲ ಕೂಡಲೇ ಪ್ರಕಟಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಕೋರಲಾಗಿದೆ.
2. ಸಂಬಂಧಪಟ್ಟವರಿಗೆ

<u>ಪ್ರತಿಯನ್ನು:</u>

1. ಬೆಂಗಳೂರು ನಗರ ಪೋಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಹೆಚ್ಚುವರಿ ಪೋಲೀಸ್ ಆಯುಕ್ತರುಗಳು
2. ಬೆಂಗಳೂರು ನಗರ ಪೋಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಜಂಟಿ ಪೋಲೀಸ್ ಆಯುಕ್ತರುಗಳು
3. ಬೆಂಗಳೂರು ನಗರ ಪೋಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಉಪ ಪೋಲೀಸ್ ಆಯುಕ್ತರುಗಳು
4. ಸಹಾಯಕ ಪೊಲಿಸ್ ಆಯುಕ್ತರು, ನಗರ ನಿಯಂತ್ರಣ ಕೋಣೆ, ಬೆಂಗಳೂರು ನಗರ.

<u>ಪ್ರತಿಯನ್ನು ಅಭಿನಂದನೆಗಳೊಂದಿಗೆ:</u>

1. ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.
2. ಹೆಚ್ಚುವರಿ ಪೋಲೀಸ್ ಮಹಾ ನಿರ್ದೇಶಕರು, ರಾಜ್ಯ ಗುಪ್ತವಾರ್ತೆ, ಕರ್ನಾಟಕ ರಾಜ್ಯ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
4. ಅಬಕಾರಿ ಆಯುಕ್ತರು, ಕರ್ನಾಟಕ ರಾಜ್ಯ, ಬೆಂಗಳೂರು.

**ಕರ್ನಾಟಕ ಸರ್ಕಾರ**
**(ಪೊಲೀಸ್ ಇಲಾಖೆ)**

**ಪೊಲೀಸ್ ಆಯುಕ್ತರು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ರವರ ನಡವಳಿಗಳು**

**ಉಪಸ್ಥಿತರು**: ಭಾಸ್ಕರ್ ರಾವ್, ಐ.ಪಿ.ಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ.

**ವಿಷಯ** : ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಕೊರೋನ ವೈರಸ್ (ಕೋವಿಡ್-19) ಹರಡದಂತೆ ಮುಂಜಾಗೃತ ಕ್ರಮಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ದಿನಾಂಕ: 20.04.2020 ರಂದು ಮಧ್ಯರಾತ್ರಿ 12.00 ಗಂಟೆಯಿಂದ ದಿನಾಂಕ: 03.05.2020 ರ ಮಧ್ಯರಾತ್ರಿ 12.00 ಗಂಟೆಯವರೆಗೆ ನಿಷೇದಾಜ್ಞೆಯನ್ನು ಹೊರಡಿಸಿರುವ ಬಗ್ಗೆ.

**ಉಲ್ಲೇಖ** :
1. ಕೇಂದ್ರ ಗೃಹ ಮಂತ್ರಾಲಯ ಕಛೇರಿಯ ಆದೇಶ ಸಂಖ್ಯೆ: 40-3/2020-DM-I (A), Dated: 14.04.2020.
2. ಮಾನ್ಯ ಮುಖ್ಯ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು ಅವರ ಆದೇಶ ಸಂಖ್ಯೆ: ಕಂಇ/158/ಟಿಎನ್ಆರ್/ 2020, ದಿನಾಂಕ: 19.04.2020.

-----

**ಪ್ರಸ್ತಾವನೆ:**

ಕೋವಿಡ್-19 ವೈರಸ್ (ಸಾಂಕ್ರಾಮಿಕ ರೋಗ) ಹರಡುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಕೇಂದ್ರ ಗೃಹ ಮಂತ್ರಾಲಯದ ಉಲ್ಲೇಖ-1 ರ ದಿನಾಂಕ: 14.04.2020 ರ ಮಾರ್ಗಸೂಚಿಗಳನುಸಾರ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು ಅತ್ಯಗತ್ಯವಾಗಿರುವುದರಿಂದ ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಈ ಕೆಳಕಂಡಂತೆ ನಿಷೇದಾಜ್ಞೆಯನ್ನು ಹೊರಡಿಸಲಾಗಿದೆ.

**ಆದೇಶ ಸಂಖ್ಯೆ ಎಸ್.ಬಿ/ಗು.ವಾ/ನಿಷೇದಾಜ್ಞೆ/13/2020 ದಿನಾಂಕ : 20.04.2020**

ಈ ದಿಸೆಯಲ್ಲಿ ಭಾಸ್ಕರ್ ರಾವ್, ಐಪಿಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಆದ ನಾನು ದಂಡ ಪ್ರಕ್ರಿಯಾ ಸಂಹಿತೆಯ ಕಲಂ 144(1) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕೊರೋನ ವೈರಸ್ (ಕೋವಿಡ್-19) ಸ್ಫೋಟ ಮತ್ತು ಸೋಂಕು ಹರಡುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಬೆಂಗಳೂರು ನಗರದ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ **ದಿನಾಂಕ: 20.04.2020 ರ ಮಧ್ಯರಾತ್ರಿ 12-00 ಗಂಟೆಯಿಂದ ದಿನಾಂಕ: 03.05.2020 ರಂದು ಮಧ್ಯರಾತ್ರಿ 12-00 ಗಂಟೆಯವರೆಗೆ** ಕೇಂದ್ರ ಗೃಹ ಮಂತ್ರಾಲಯದಿಂದ ಹೊರಡಿಸಿರುವ ಆದೇಶಗಳನ್ವಯ ಈ ಕೆಳಕಂಡ ನಿಬಂಧನೆಗಳಿಗೆ ಒಳಪಡುವಂತೆ ನಿಷೇದಾಜ್ಞೆಯನ್ನು ವಿಧಿಸಿರುತ್ತೇನೆ.

...2]

1) ಕೇಂದ್ರ ಸರ್ಕಾರದಡಿ ಬರುವ ಎಲ್ಲಾ ಕಛೇರಿಗಳು, ಅಧೀನದ ಕಛೇರಿಗಳು, ಸ್ವಾಯತ್ತ ಸಂಸ್ಥೆಗಳನ್ನು ಮುಚ್ಚತಕ್ಕದ್ದು.

**ವಿನಾಯಿತಿಗಳು :**

a) ಮಿಲಿಟರಿ/ಸಿ.ಆರ್.ಪಿ.ಎಫ್/ಖಜಾನೆ, ಸಾರ್ವಜನಿಕ ಉಪಯುಕ್ತ ವಸ್ತುಗಳು (ಇಂಧನ, ಸಿ.ಎನ್.ಜಿ, ಎಲ್.ಪಿ.ಜಿ, ಪಿ.ಎನ್.ಜಿ), ವಿಪತ್ತು ನಿರ್ವಹಣೆ, ವಿದ್ಯುತ್ ಉತ್ಪಾದನೆ ಮತ್ತು ವಿತರಣಾ ಘಟಕ, ಅಂಚೆ ಕಛೇರಿ, ರಾಷ್ಟ್ರೀಯ ಮಾಹಿತಿ ಕೇಂದ್ರ, ಮುಂಗಡ ಮಾಹಿತಿ ಸಂಸ್ಥೆಗಳು.

b) ಖಜಾನೆ, ಪಾವತಿಸುವ ಮತ್ತು ಖಾತೆಗಳ ಕಚೇರಿ, ಹಣಕಾಸು ಸಲಹೆಗಾರರು, ಅಕೌಂಟ್ಸ್ ಜನರಲ್ ಕ್ಷೇತ್ರ ಕಛೇರಿಗಳು (ಕನಿಷ್ಟ ಸಿಬ್ಬಂದಿಗಳೊಂದಿಗೆ)

c) ವಿಮಾನ ನಿಲ್ದಾಣ, ಭೂಗಡಿಗಳಲ್ಲಿ ಕಸ್ಟಮ್ಸ್ ಕ್ಲಿಯರೆನ್ಸ್, ಜಿ.ಎಸ್.ಟಿ.ಎನ್ ಮತ್ತು ಎಂ.ಸಿ.ಎ–21 ನೋಂದಣಿ ಕಛೇರಿಗಳು. (ಕನಿಷ್ಟ ಸಿಬ್ಬಂದಿಗಳೊಂದಿಗೆ)

d) ಆರ್.ಬಿ.ಐ ಮತ್ತು ಆರ್.ಬಿ.ಐ. ನಿಯಂತ್ರಿತ ಮಾರುಕಟ್ಟೆಗಳು, ಎನ್.ಟಿ.ಟಿ.ಸಿಗಳಿಗೆ ಒಳಪಟ್ಟ ಎನ್.ಪಿ.ಸಿ.ಐ, ಸಿ.ಸಿ.ಐ.ಎಲ್. ಪೇಮೆಂಟ್ ಸಿಸ್ಟಂ ಆಪರೇಟರ್ಸ್ ಮತ್ತು .ಸ್ಟಾಂಡಲೋನ್ ಪ್ರೈಮರಿ ಡೀಲರ್ಸ್ (ಕನಿಷ್ಟ ಸಿಬ್ಬಂದಿಗಳೊಂದಿಗೆ).

e) ವಿದೇಶಿ ರಾಯಭಾರಿ ಕಛೇರಿಗಳು (Consulate) ಹಾಗೂ ವಿದೇಶಿ ನಿಯೋಗಗಳು.

2) ಎಲ್ಲಾ ರಾಜ್ಯ ಸರ್ಕಾರದ ಕಛೇರಿಗಳು, ಅದರ ಅಧೀನ ಸಂಸ್ಥೆಗಳು/ಸ್ವಾಯತ್ತ ಸಂಸ್ಥೆಗಳನ್ನು ಮುಚ್ಚತಕ್ಕದ್ದು.

**ವಿನಾಯಿತಿಗಳು :**

a) ಪೋಲೀಸ್, ಗೃಹ ರಕ್ಷಕ ದಳ, ನಾಗರಿಕ ರಕ್ಷಣಾ ದಳ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳು, ವಿಪತ್ತು ನಿರ್ವಹಣಾ ದಳ ಮತ್ತು ಕಾರಾಗೃಹಗಳು.

b) ಜಿಲ್ಲಾಡಳಿತಗಳು, ಖಜಾನೆ ಸಂಬಂಧಿ ಕಛೇರಿಗಳು, ಅಕೌಂಟ್ಸ್ ಜನರಲ್ ಕ್ಷೇತ್ರ ಕಛೇರಿಗಳು (ಕನಿಷ್ಟ ಸಿಬ್ಬಂದಿಗಳೊಂದಿಗೆ)

c) ವಿದ್ಯುಚ್ಛಕ್ತಿ, ನೀರು ಮತ್ತು ಒಳಚರಂಡಿ ಮಂಡಳಿ.

d) ಪೌರ ಸಂಸ್ಥೆಗಳು ಒಳಚರಂಡಿ ಸೇವೆಗಳು, ನೀರು ಸರಬರಾಜು ಕಾರ್ಯಗಳಿಗೆ ಅಗತ್ಯವಿರುವ ಸಿಬ್ಬಂದಿಗಳನ್ನು ಮಾತ್ರ ಬಳಸುವುದು.

e) ಕೋವಿಡ್–19 ಸಂಬಂಧ ಕಾರ್ಯಾಚರಣೆಗಳು (ಕನಿಷ್ಟ ಪ್ರಮಾಣದ ಸಿಬ್ಬಂದಿಗಳೊಂದಿಗೆ).

f) ಅರಣ್ಯ ಇಲಾಖೆ ಕಛೇರಿಗೆ ಸಂಬಂಧಿಸಿದ ಮೃಗಾಲಯ, ನರ್ಸರಿಗಳು, ವನ್ಯಜೀವಿಗಳು, ಬೆಂಕಿ ಅವಘಡಗಳು, ನೆಡುತೋಪುಗಳು, ಗಸ್ತು ಮತ್ತು ಅವುಗಳ ಅಗತ್ಯ ಸಾರಿಗೆ ಕೆಲಸಗಳ ನಿರ್ವಹಣೆಗೆ ಸಿಬ್ಬಂದಿಗಳ ಅಗತ್ಯತೆ ಇದೆ ಎಂದು ಅವಶ್ಯಕತೆ ಕಂಡು ಬಂದಲ್ಲಿ.

g) ಸಮಾಜ ಕಲ್ಯಾಣ ಇಲಾಖೆ : ಮಕ್ಕಳು/ವಿಕಲಚೇತನರು/ಹಿರಿಯ ನಾಗರೀಕರು/ ನಿರ್ಗತಿಕರು/ಮಹಿಳೆಯರು/ವಿಧವೆಯರು ಇರುವ ಗೃಹಗಳು, ವೀಕ್ಷಣಾ ಮನೆಗಳು ಮತ್ತು ಪಂಚಣಿ ಕಾರ್ಯಗಳು (ಕನಿಷ್ಟ ಪ್ರಮಾಣದ ಸಿಬ್ಬಂದಿಗಳೊಂದಿಗೆ)

h) ಕೃಷಿ ಉತ್ಪನ್ನಗಳ ಸಂಗ್ರಹದಲ್ಲಿ ತೊಡಗಿರುವ ಏಜೆನ್ಸಿಗಳು, ಎಂ.ಎಸ್.ಪಿ ಕಾರ್ಯಾಚರಣೆಗಳು.

i) ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ನಿರ್ವಹಿಸಲ್ಪಡುವ ಅಥವಾ ರಾಜ್ಯ ಸರ್ಕಾರವು ಸೂಚಿಸಿದ ಮಂಡಿಗಳು.

ಮೇಲ್ಕಂಡ ಕ್ರ.ಸಂ. 1 ಮತ್ತು 2 ರಲ್ಲಿ ಹೇಳಲಾಗಿರುವ ಸರ್ಕಾರಿ ಕಛೇರಿಗಳಲ್ಲಿ ಕನಿಷ್ಟ ಪ್ರಮಾಣದ ಸಿಬ್ಬಂದಿಗಳನ್ನು ಬಳಸಿ ಕೆಲಸ ನಿರ್ವಹಿಸುವುದು. ಇತರೆ ಕಛೇರಿಯ ಕೆಲಸಗಳನ್ನು ಮನೆಯಲ್ಲಿಯೇ ಕುರಿತು ನಿರ್ವಹಿಸುವುದು.

3) ಆಸ್ಪತ್ರೆಗಳು ಮತ್ತು ಅದಕ್ಕೆ ಸಂಬಂಧಿಸಿದ ಎಲ್ಲಾ ವೈದ್ಯಕೀಯ ಸಂಸ್ಥೆಗಳು, ತಯಾರಿಕಾ ಮತ್ತು ವಿತರಣಾ ಘಟಕಗಳು, ಖಾಸಗಿ ಮತ್ತು ಸಾರ್ವಜನಿಕ ವಲಯಗಳು, ಔಷಧಾಲಯಗಳು, ಔಷಧಿ ಮತ್ತು ವೈದ್ಯಕೀಯ ಸಲಕರಣೆಗಳನ್ನು ಪೂರೈಸುವ ಮಳಿಗೆಗಳು, ಪ್ರಯೋಗಾಲಯಗಳು ಕ್ಲಿನಿಕ್, ನರ್ಸಿಂಗ್ ಹೋಂ, ಆಂಬುಲೆನ್ಸ್, ಪಶು ಚಿಕಿತ್ಸಾಲಯ, ಜನೌಷಧಿ ಕೇಂದ್ರಗಳು, ಸಂಶೋಧನಾ ಪ್ರಯೋಗಾಲಯಗಳ ಸೇವೆಗಳು ಮುಂದುವರೆಯುತ್ತವೆ.

ವೈದ್ಯಕೀಯ ಕ್ಷೇತ್ರಕ್ಕೆ ಸಂಬಂಧಿಸಿದ ಸಿಬ್ಬಂದಿಗಳು, ನರ್ಸ್‌ಗಳು, ಅರೆ-ವೈದ್ಯಕೀಯ ಸಿಬ್ಬಂದಿ ಸೇರಿದಂತೆ ಸಹಕರಿಸುವ ಇತರೆ ಆಸ್ಪತ್ರೆಗಳಿಗೆ ಸಂಬಂಧಿಸಿದ ಸೇವೆಗಳ ಸಾರಿಗೆ/ಸಾಗಾಣಿಕೆಗೆ ಅನುಮತಿಸಿದೆ.

4) ವಾಣಿಜ್ಯ ಮಳಿಗೆಗಳು ಮತ್ತು ಖಾಸಗಿ ಸಂಸ್ಥೆಗಳನ್ನು ಮುಚ್ಚತಕ್ಕದ್ದು.

**<u>ವಿನಾಯಿತಿಗಳು :</u>**

a) ಪಿ.ಡಿ.ಎಸ್. (ಸಾರ್ವಜನಿಕ ವಿತರಣಾ ಶಾಪ್) ಅಡಿಯಲ್ಲಿ ಕಾರ್ಯನಿರ್ವಹಿಸುವ ಆಹಾರ ಮಳಿಗೆಗಳು ಸೇರಿದಂತೆ, ದಿನಸಿ ಅಂಗಡಿಗಳು, ಹಣ್ಣು ಮತ್ತು ತರಕಾರಿಗಳು, ಹಾಲು ಮತ್ತು ಡೈರಿ ಉತ್ಪನ್ನಗಳ ಮಾರಾಟ ಮಳಿಗೆಗಳು, ಮಾಂಸ ಮತ್ತು ಮೀನು ಪ್ರಾಣಿಗಳ ಆಹಾರ, ಬಿಸ್ಕತ್ & ಬೇಕರಿ ಉತ್ಪನ್ನಗಳು ಹಾಗೂ ಸಹಿ ತಿನಿಸುಗಳ ಮಾರಾಟದ ಚಿಲ್ಲರೆ ಅಂಗಡಿಗಳು. ಆದಾಗ್ಯೂ, ಜಿಲ್ಲಾ ಪ್ರಾಧಿಕಾರವು ತಮ್ಮ ಮನೆಗಳ ಹೊರಗಿನ ವ್ಯಕ್ತಿಗಳ ಓಡಾಟವನ್ನು ಕಡಿಮೆ ಮಾಡಲು ಮನೆಗೆ ವಿತರಣೆ ಮಾಡುವುದನ್ನು ಪ್ರೋತ್ಸಾಹಿಸುವುದು ಮತ್ತು ಸೌಲಭ್ಯ ಒದಗಿಸುವುದು.

b) ಬ್ಯಾಂಕ್, ವಿಮೆ ಕಛೇರಿಗಳು ಮತ್ತು ಎ.ಟಿ.ಎಂ., ಬ್ಯಾಂಕಿಂಗ್ ಕಾರ್ಯಾಚರಣೆಗಳಾದ ಐ.ಟಿ. ವೆಂಡರ್ಸ್ ಮತ್ತು ಎ.ಟಿ.ಎಂ ಕಾರ್ಯಾಚರಣೆಗಳು, ನಗದು ನಿರ್ವಹಣಾ ಏಜನ್ಸಿಗಳು.

c) ಮುದ್ರಣ ಮತ್ತು ಎಲೆಕ್ಟ್ರಾನಿಕ್ ಮಾಧ್ಯಮಗಳು.

d) ಸಂವಹನ ಸಾಧನಗಳಾದ ಅಂತರ್ಜಾಲ ಸೇವೆಗಳು, ಪ್ರಸಾರ ಮತ್ತು ಕೇಬಲ್ ಸೇವೆಗಳು. ಐ.ಟಿ ಮತ್ತು ಐ.ಟಿ. ಸೇವೆಗಳನ್ನು ಸಕ್ರಿಯಗೊಳಿಸುವುದು (ಅಗತ್ಯ ಸೇವೆಗಳು ಮಾತ್ರ). ಸಾಧ್ಯವಾದಷ್ಟು ಕಾರ್ಯಗಳನ್ನು ಮನೆಯಲ್ಲಿ ಕುಳಿತು ನಿರ್ವಹಿಸುವುದು.

e) ಆಹಾರ, ಔಷಧೀಯ ವಸ್ತುಗಳು, ವೈದ್ಯಕೀಯ ಉಪಕರಣಗಳು ಸೇರಿದಂತೆ ಎಲ್ಲಾ ಅಗತ್ಯ ವಸ್ತುಗಳನ್ನು ಇ-ಕಾಮರ್ಸ್ ಮೂಲಕ ತಲುಪಿಸುವುದು.

f) ಪೆಟ್ರೋಲ್ ಬಂಕ್‌ಗಳು, ಎಲ್.ಪಿ.ಜಿ, ಪೆಟ್ರೋಲಿಯಂ ಮತ್ತು ಗ್ಯಾಸ್ ಚಿಲ್ಲರೆ ಮತ್ತು ದಾಸ್ತಾನು ಮಳಿಗೆಗಳು, ಬಿತ್ತನೆ ಬೀಜ, ಕೀಟನಾಶಕ ಮತ್ತು ರಸಗೊಬ್ಬರ ಮಳಿಗೆಗಳು.

g) ವಿದ್ಯುತ್ ಉತ್ಪಾದನೆ, ಪ್ರಸರಣ ಮತ್ತು ವಿತರಣಾ ಘಟಕಗಳು ಹಾಗು ಸೇವೆಗಳು.

h) ರೈತರು ಮತ್ತು ಕೃಷಿ ಕಾರ್ಮಿಕರ ಕೆಲಸ ಕಾರ್ಯಗಳು.

i) ಕೃಷಿ ಯಂತ್ರೋಪಕರಣಗಳಿಗೆ ಸಂಬಂಧಿಸಿದಂತೆ ನಿರ್ವಹಿಸಲಾಗಿರುವ ಕಸ್ಟಮ್ಸ್ ನೇಮಕ ಕೇಂದ್ರಗಳು.

j) ರಸಗೊಬ್ಬರಗಳು, ಕ್ರಿಮಿನಾಶಕಗಳು ಮತ್ತು ಬಿತ್ತನೆ ಬೀಜ ಉತ್ಪಾದನೆ ಮತ್ತು ಪ್ಯಾಕಿಂಗ್ ಘಟಕಗಳು.

k) ಯಂತ್ರೋಪಕರಣಗಳ ಸಹಾಯದಿಂದ ನಡೆಸಲಾಗಿರುವ ಕೃಷಿ ಬೆಳೆಗಳ ಕೊಯ್ಲು ಮತ್ತು ಬಿತ್ತನೆ ಪದಾರ್ಥಗಳ ರಾಜ್ಯ ಮತ್ತು ಅಂತರ್‌ರಾಜ್ಯ ಸಾಗಣೆ.

...4]

l) ಭಾರತೀಯ ಭದ್ರತೆ ಮತ್ತು ವಿನಿಮಯ ಮಂಡಳಿ (ಸೆಬಿ) ಯಿಂದ ತಿಳಿಸಿರುವ ಬಂಡವಾಳ ಮತ್ತು ಸಾಲ ಮಾರುಕಟ್ಟೆ ಸೇವೆಗಳು, ಸರ್ಕಾರದ ಚಟುವಟಿಕೆಗಳಿಗೆ ಸಂಬಂಧಿಸಿದ ಡೇಟಾ ಮತ್ತು ಕಾಲ್ ಸೆಂಟರ್‌ಗಳು.

m) ಶೈತ್ಯಗಾರಗಳು ಮತ್ತು ದಸ್ತಾನು ಮಳಿಗೆ ಸೇವೆಗಳು.

n) ಖಾಸಗಿ ಭದ್ರತಾ ಸೇವೆಗಳು.

ಇನ್ನಿತರೆ ಸಂಸ್ಥೆಗಳು ಮನೆಯ ಮೂಲಕ ಕರ್ತವ್ಯ ನಿರ್ವಹಿಸಬಹುದು.

5) ಕೈಗಾರಿಕಾ ಘಟಕಗಳನ್ನು ಮುಚ್ಚುವುದು.

<u>ವಿನಾಯಿತಿಗಳು:</u> .

a) ಅಗತ್ಯ ವಸ್ತುಗಳ ಉತ್ಪಾದನಾ ಘಟಕಗಳು.

b) ರಾಜ್ಯ ಸರ್ಕಾರ ಉತ್ಪಾದನೆ ಪ್ರಕ್ರಿಯೆಯನ್ನು ಮುಂದುವರೆಸುವುದನ್ನು ಅಗತ್ಯಪಡಿಸುವ ಉತ್ಪಾದನಾ ಘಟಕಗಳು.

c) ಅಗತ್ಯ ವಸ್ತುಗಳ ಉತ್ಪಾದನಾ ಘಟಕಗಳಾದ ಔಷಧಗಳು, ವೈದ್ಯಕೀಯ ಸಾಧನಗಳು, ಅವುಗಳಿಗೆ ಸಂಬಂಧಿಸಿದ ಕಚ್ಚಾ ಅಥವಾ ಮಧ್ಯಂತರ ವಸ್ತುಗಳು.

d) ಕಲ್ಲಿದ್ದಲು ಮತ್ತು ಖನಿಜ ಉತ್ಪಾದನಾ ಘಟಕಗಳು, ಸಾಗಾಣಿಕೆ, ಸ್ಫೋಟಕಗಳು ಮತ್ತು ಅದಕ್ಕೆ ಸಂಬಂಧಿಸಿದ ಇತರೆ ಪೂರಕಾ ಸಾಮಾಗ್ರಿಗಳು.

e) ಆಹಾರ ಸಾಮಾಗ್ರಿಗಳು, ಔಷಧಿಗಳು, ಔಷಧಿಗಳ ಇತ್ಯಾದಿ ಸಾಧನಗಳನ್ನು ಪ್ಯಾಕಿಂಗ್ ಮಾಡುವ ಉತ್ಪಾದನಾ ಘಟಕಗಳು.

ಪ್ರಸ್ತುತ ಲಾಕ್‌ಡೌನ್ ಅವಧಿಯಲ್ಲಿ ಅಗತ್ಯ ವಸ್ತುಗಳ ಕಾರ್ಖಾನೆಗಳು ಹಾಗೂ Continuous production process ಕಾರ್ಖಾನೆಗಳಿಗೆ ಆರೋಗ್ಯ ಇಲಾಖೆಯು ನೀಡುವ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸುವುದು.

6) ವಿಮಾನಯಾನ, ರೈಲು ಮತ್ತು ರಸ್ತೆ ಸಾರಿಗೆ ಎಲ್ಲಾ ಸಾರಿಗೆ ಸೇವೆಗಳನ್ನು ನಿರ್ಬಂಧಿಸಿದೆ.

<u>ವಿನಾಯಿತಿಗಳು:</u>

a) ಅಗತ್ಯ ಸರಕುಗಳು ಸಾಗಾಟ.

b) ಅಗತ್ಯ ಸೇವೆಗಳಾದ ಅಗ್ನಿಶಾಮಕ, ಕಾನೂನು ಮತ್ತು ಸುವ್ಯವಸ್ಥೆ ಹಾಗೂ ತುರ್ತು ಸೇವೆಗಳು.

c) ಸರಕು ಸಾಗಾಣೆ, ಪರಿಹಾರ ಮತ್ತು ಸ್ಥಳಾಂತರಿಸುವಿಕೆ, ಅವುಗಳ ಕಾರ್ಯಾಚರಣೆ ಅಂಗವಾಗಿ ಕಾರ್ಯನಿರ್ವಹಿಸುವ, ರೈಲ್ವೆ, ವಿಮಾನ ನಿಲ್ದಾಣಗಳ ಕಾರ್ಯಾಚರಣೆಗಳು.

d) ಪೆಟ್ರೋಲಿಯಂ ಉತ್ಪನ್ನಗಳು, ಎಲ್.ಪಿ.ಜಿ, ಆಹಾರ ಉತ್ಪನ್ನಗಳು, ವೈದ್ಯಕೀಯ ಸೇರಿದಂತೆ ಅಗತ್ಯ ವಸ್ತುಗಳ ಸಂಬಂಧ ಭೂಗಡಿಗಳನ್ನು ದಾಟುವುದು.

...5]

7) ಆತಿಥ್ಯ ಸೇವೆಗಳನ್ನು ನಿರ್ಬಂಧಿಸಿದೆ.

**ವಿನಾಯಿತಿಗಳು :**

a) ಲಾಕ್‌ಡೌನ್ ವೈದ್ಯಕೀಯ ಮತ್ತು ತುರ್ತು ಸಿಬ್ಬಂದಿ, ಮತ್ತು ವಾಯು ಸಿಬ್ಬಂದಿಗಳ ಕಾರಣದಿಂದಾಗಿ ಪ್ರವಾಸಿಗರು ಮತ್ತು ವ್ಯಕ್ತಿಗಳನ್ನು ಹೊಂದಿರುವ ಹೊಟೇಲ್‌ಗಳ, ಹೋಂ ಸ್ಟೇಗಳು, ಲಾಡ್ಜ್‌ಗಳು, ಮೋಟಲ್ಸ್‌ಗಳು.

b) ಪ್ರತ್ಯೇಕಿಸಲಾದ (ಕ್ವಾರೆಂಟೇನ್) ವ್ಯಕ್ತಿಗಳಿಗಾಗಿ ಮೀಸಲಿರಿಸಿದ ಕಟ್ಟಡಗಳು.

8) ಎಲ್ಲಾ ಶಿಕ್ಷಣ ಸಂಸ್ಥೆಗಳು, ತರಬೇತಿ, ಸಂಶೋಧನೆ, ಕೋಚಿಂಗ್ ಸೆಂಟರ್ ಇತ್ಯಾದಿಗಳನ್ನು ಮುಚ್ಚುವುದು.

9) ಎಲ್ಲಾ ಪೂಜಾ ಸ್ಥಳಗಳಲ್ಲಿ ಸಾರ್ವಜನಿಕರಿಗೆ ನಿರ್ಬಂಧಿಸಿದೆ. ವಿನಾಯಿತಿ ಪಡೆಯದ ಯಾವುದೇ ಧಾರ್ಮಿಕ ಸಭೆಗಳಿಗೆ ಅನುಮತಿಸಲಾಗುವುದಿಲ್ಲ.

10) ಎಲ್ಲಾ ರೀತಿಯ ಸಾಮಾಜಿಕ/ ರಾಜಕೀಯ/ ಕ್ರೀಡೆ/ ಮನರಂಜನೆ/ ಶೈಕ್ಷಣಿಕ/ ಸಾಂಸ್ಕೃತಿಕ/ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಗುಂಪು ಸೇರುವುದನ್ನು ನಿರ್ಬಂಧಿಸಿದೆ.

11) ಅಂತ್ಯಕ್ರಿಯೆಯ ಕಾರ್ಯಕ್ರಮದಲ್ಲಿ 20 ಕ್ಕಿಂತ ಹೆಚ್ಚು ವ್ಯಕ್ತಿಗಳು ಸೇರತಕ್ಕದ್ದಲ್ಲ.

ದಿನಾಂಕ 15.02.2020 ನಂತರ ಭಾರತಕ್ಕೆ ಆಗಮಿಸಿದ ಹಾಗೂ ಆರೋಗ್ಯ ರಕ್ಷಣಾ ಸಿಬ್ಬಂದಿಗಳು ಕಟ್ಟುನಿಟ್ಟಾಗಿ ಮನೆ ಅಥವಾ ಸಂಪರ್ಕ ತಡೆಯನ್ನು ಒಂದು ಅವಧಿಯವರೆಗೆ ಉಳಿಯುವಂತೆ ನಿರ್ಬಂಧಿಸಿದ ಎಲ್ಲಾ ವ್ಯಕ್ತಿಗಳು, ಸ್ಥಳೀಯ ಆರೋಗ್ಯ ಪ್ರಾಧಿಕಾರಿಯವರು ತೀರ್ಮಾನಿಸುವ ಅವಧಿಯವರೆಗೆ ನಿರ್ಬಂಧಿಸಿದ ಸ್ಥಳದಲ್ಲಿಯೇ ಇರಬೇಕು. ತಪ್ಪಿದಲ್ಲಿ, ಅಂತಹ ವ್ಯಕ್ತಿಗಳು ಕಲಂ 188 ಐ.ಪಿ.ಸಿ ರೀತ್ಯಾ ಕಾನೂನು ಕ್ರಮಕ್ಕೆ ಹೊಣೆಗಾರರಾಗುತ್ತಾರೆ.

ಎಲ್ಲೆಲ್ಲಿ ಧಾರಕ ಕ್ರಮಗಳಿಗೆ ವಿನಾಯಿತಿ ನೀಡಲಾಗಿದೆಯೋ ಅಂತಹ ಸಂಸ್ಥೆಗಳು/ಸಿಬ್ಬಂದಿಗಳು ಕೋವಿಡ್-19 ವೈರಾಣು ಸೋಂಕು ಹರಡದಂತೆ ಮುನ್ನೆಚರಿಕೆ ಕ್ರಮಗಳನ್ನು ವಹಿಸಬೇಕು ಹಾಗೂ ಆರೋಗ್ಯ ಇಲಾಖೆ ಕಾಲಕಾಲಕ್ಕೆ ನೀಡುವ ಸಲಹೆಯಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ವಹಿಸುವುದು ಹಾಗೂ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವುದು.

ಮೇಲ್ಕಂಡಂತೆ ತೆಗೆದುಕೊಳ್ಳಲಾಗಿರುವ ಎಲ್ಲಾ ಕಟ್ಟುನಿಟ್ಟಾದ ನಿರ್ಬಂಧಗಳು ಜನರ ಚಲನ-ವಲನಗಳಿಗೆ ಸಂಬಂಧಿಸಿದವುಗಳಾಗಿದ್ದು, ಅಗತ್ಯ ಸರಕುಗಳಿಗೆ ಸಂಬಂಧಿಸಿರುವುದಿಲ್ಲ.

ಯಾವುದೇ ವ್ಯಕ್ತಿ ಈ ಮೇಲಿನ ನಿಯಂತ್ರಣ ಕ್ರಮಗಳನ್ನು ಉಲ್ಲಂಘಿಸಿದಲ್ಲಿ, ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ-2005ರ ಕಲಂ 51 ರಿಂದ 60 ಜೊತೆಗೆ ಭಾರತೀಯ ದಂಡ ಸಂಹಿತೆ ಕಲಂ 188 ರೀತ್ಯಾ ಕಾನೂನು ಕ್ರಮ ಜರುಗಿಸಲಾಗುವುದು.

ಮೇಲ್ಕಂಡ ನಿಯಂತ್ರಣ ಕ್ರಮಗಳು ದಿನಾಂಕ 20.04.2020 ರಂದು ಮಧ್ಯರಾತ್ರಿ 12.00 ಗಂಟೆಯಿಂದ ದಿನಾಂಕ: 03.05.2020 ರ ಮಧ್ಯರಾತ್ರಿ 12.00 ಗಂಟೆಯವರೆಗೆ ಜಾರಿಯಲ್ಲಿರುತ್ತವೆ.

ಈ ನಿರ್ಬಂಧಗಳು ಹಾಗೂ ವಿನಾಯಿತಿಗಳು ಸೇರಿದಂತೆ, ಈ ಸಂಬಂಧ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಆಗಾಗ್ಗೆ ಹೊರಡಿಸುವ ಆದೇಶಗಳು ಹಾಗೂ ವಿನಾಯಿತಿಗಳು ಈ ಪ್ರತಿಬಂಧಕಾಜ್ಞೆಗೆ ಒಳಪಡುತ್ತವೆ.

....6]

ಈ ಆದೇಶದಿಂದ ಯಾವುದೇ ವ್ಯಕ್ತಿ ಬಾಧಿತನಾಗಿದ್ದರೆ, ಈ ಆದೇಶದ ಬದಲಾವಣೆ/ಮಾರ್ಪಾಡಿಗೆ ಈ ಕಛೇರಿಯೆದರು ದಂಡ ಪ್ರಕ್ರಿಯ ಸಂಹಿತೆ ಕಲಂ 144(5) ರಡಿ ಅಥವಾ ದಂಡ ಪ್ರಕ್ರೀಯ ಸಂಹಿತೆ ಕಲಂ 144(6) ಮಾನ್ಯ ಘನ ಕರ್ನಾಟಕ ಸರ್ಕಾರದೆದುರು ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

ಈ ಆದೇಶದ ನಡವಳಿಯನ್ನು ನನ್ನ ಸಹಿ ಮತ್ತು ನನ್ನ ಕಛೇರಿಯ ಮೊಹರಿನಲ್ಲಿ 2020 ರ ಏಪ್ರಿಲ್ ಮಾಹೆಯ ದಿನಾಂಕ 20 ರಂದು ಹೊರಡಿಸಲಾಗಿದೆ.

ಈ ಆದೇಶವನ್ನು ಕರ್ನಾಟಕ ಘನ ಸರ್ಕಾರದ ಸನ್ನಿಧಿಗೆ ಸಲ್ಲಿಸಲಾಗಿದೆ.

ಪೊಲೀಸ್ ಆಯುಕ್ತರು ಮತ್ತು ದಂಡಾಧಿಕಾರಿ ಬೆಂಗಳೂರು ನಗರ ಜಿಲ್ಲೆ
Seal of the Commissioner of Police & District Magistrate
Bengaluru City

( ಭಾಸ್ಕರ್ ರಾವ್ )
ಪೋಲೀಸ್ ಆಯುಕ್ತರು ಹಾಗೂ
ಅಪರ ಜಿಲ್ಲಾ ದಂಡಾಧಿಕಾರಿಗಳು
ಬೆಂಗಳೂರು ನಗರ.

ಗೆ,

1. ಸಂಕಲನಕಾರರು (Compiler), ಕರ್ನಾಟಕ ರಾಜ್ಯ ಪ್ರಪತ್ರ, ಬೆಂಗಳೂರು ರವರು ಈ ಆದೇಶವನ್ನು ವಿಶೇಷ ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಕೋರಲಾಗಿದೆ.
2. ಸಂಬಂಧಪಟ್ಟವರಿಗೆ

<u>ಪ್ರತಿಯನ್ನು:</u>

1. ಬೆಂಗಳೂರು ನಗರ ಪೋಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಹೆಚ್ಚುವರಿ ಪೋಲೀಸ್ ಆಯುಕ್ತರುಗಳು
2. ಬೆಂಗಳೂರು ನಗರ ಪೋಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಜಂಟಿ ಪೋಲೀಸ್ ಆಯುಕ್ತರುಗಳು
3. ಬೆಂಗಳೂರು ನಗರ ಪೋಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಉಪ ಪೋಲೀಸ್ ಆಯುಕ್ತರುಗಳು
4. ಸಹಾಯಕ ಪೋಲೀಸ್ ಆಯುಕ್ತರು, ನಗರ ನಿಯಂತ್ರಣ ಕೋಣೆ, ಬೆಂಗಳೂರು ನಗರ.

**<u>ಪ್ರತಿಯನ್ನು ಅಭಿನಂದನೆಗಳೊಂದಿಗೆ:</u>**

1. ಮಹಾ ನಿರ್ದೇಶಕರು ಮತ್ತು ಪೋಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.
2. ಹೆಚ್ಚುವರಿ ಪೋಲೀಸ್ ಮಹಾ ನಿರ್ದೇಶಕರು, ರಾಜ್ಯ ಗುಪ್ತವಾರ್ತೆ, ಕರ್ನಾಟಕ ರಾಜ್ಯ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
4. ಅಬಕಾರಿ ಆಯುಕ್ತರು, ಕರ್ನಾಟಕ ರಾಜ್ಯ, ಬೆಂಗಳೂರು.

ಕರ್ನಾಟಕ ಸರ್ಕಾರ

(ಪೊಲೀಸ್ ಇಲಾಖೆ)

# ಪೊಲೀಸ್ ಆಯುಕ್ತರು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ರವರ ನಡವಳಿಗಳು

**ಉಪಸ್ಥಿತರು**: ಭಾಸ್ಕರ್ ರಾವ್, ಐ.ಪಿ.ಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ.

**ವಿಷಯ** : ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಕೊರೋನ ವೈರಸ್ (ಕೋವಿಡ್-19) ಹರಡದಂತೆ ಮುಂಜಾಗೃತ ಕ್ರಮಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ದಿನಾಂಕ: 18.05.2020 ರ ಮಧ್ಯರಾತ್ರಿಯಿಂದ ದಿನಾಂಕ: 31-05-2020 ರ 00.00 ಗಂಟೆವರೆಗೆ ನಿಷೇದಾಜ್ಞೆಯನ್ನು ಹೊರಡಿಸಿರುವ ಬಗ್ಗೆ.

**ಉಲ್ಲೇಖ** : ಮುಖ್ಯ ಕಾರ್ಯದರ್ಶಿಗಳು ಮತ್ತು ಅಧ್ಯಕ್ಷರು, ರಾಜ್ಯ ಕಾರ್ಯಕಾರಿಣಿ ಸಮಿತಿ, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಅವರ ಆದೇಶ ಸಂಖ್ಯೆ: ಆರ್‌ಡಿ/158/ಟಿಎನ್‌ಆರ್/2020, ದಿನಾಂಕ: 18.05.2020

-----

ಪ್ರಸ್ತಾವನೆ:

ಕೋವಿಡ್-19 ವೈರಸ್ (ಸಾಂಕ್ರಾಮಿಕ ರೋಗ) ಹರಡುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಉಲ್ಲೇಖಿತ ಆದೇಶದ ಅನ್ವಯ ಮಾನ್ಯ ಮುಖ್ಯ ಕಾರ್ಯದರ್ಶಿಗಳು ಮತ್ತು ಅಧ್ಯಕ್ಷರು, ರಾಜ್ಯ ಕಾರ್ಯಕಾರಿಣಿ ಸಮಿತಿ, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ರವರು ಹೊರಡಿಸಿರುವ ಮಾರ್ಗಸೂಚಿಗಳನ್ವಯ ಈ ಕೆಳಕಂಡ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು ಅತ್ಯಗತ್ಯವಾಗಿರುತ್ತದೆ.

1. **ದಿನಾಂಕ: 31-05-2020 ರವರಗೆ ಲಾಕ್‌ಡೌನ್‌ರವರೆಗೆ ಜಾರಿಯಲ್ಲಿರುತ್ತದೆ.**

2. **ಬೆಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ ಈ ಕೆಳಕಂಡ ಚಟುವಟಿಕೆಗಳನ್ನು ನಿಷೇಧಿಸಲಾಗಿದೆ.**

   i. ವೈದ್ಯಕೀಯ ಸೇವೆಗಳು, ಏರ್ ಆಂಬುಲೆನ್ಸ್, ಭದ್ರತಾ ಉದ್ದೇಶಗಳು ಹಾಗೂ ಕೇಂದ್ರೀಯ ಗೃಹ ಮಂತ್ರಾಲಯದಿಂದ ಅನುಮತಿಸಲಾದ ಉದ್ದೇಶಗಳನ್ನು ಹೊರತುಪಡಿಸಿ, ಎಲ್ಲಾ ದೇಶಿಯ ಮತ್ತು ಅಂತರಾಷ್ಟ್ರೀಯ ಪ್ರಯಾಣ ವಿಮಾನಯಾನ.

   ii. ಮೆಟ್ರೋ ರೈಲು ಸೇವೆಗಳು.

   iii. ಶಾಲೆಗಳು, ಕಾಲೇಜುಗಳು, ಶೈಕ್ಷಣಿಕ/ತರಬೇತಿ/ಕೋಚಿಂಗ್ ಸಂಸ್ಥೆಗಳು, ಇತ್ಯಾದಿಗಳು ಮುಚ್ಚಲ್ಪಡುತ್ತವೆ. ಆನ್‌ಲೈನ್/ದೂರ ಶಿಕಷಣ ಕಲಿಕೆಗೆ ಅನುಮತಿಸಲಾಗಿದೆ ಮತ್ತು ಪ್ರೋತ್ಸಾಯಿಸುವುದು.

iv. ಆರೋಗ್ಯ/ ಪೋಲೀಸ್ /ಸರ್ಕಾರಿ ಅಧಿಕಾರಿಗಳು/ಆರೋಗ್ಯ ಪಾಲನೆಯ ಕಾರ್ಯಕರ್ತರು, ಪ್ರವಾಸಿಗರನ್ನು ಒಳಗೊಂಡಂತೆ, ಸಿಲುಕಿಕೊಂಡಿರುವ ವ್ಯಕ್ತಿಗಳು ತಂಗಿದ್ದ ಮನೆಗಳನ್ನು ಹೊರತುಪಡಿಸಿ ಮತ್ತು ಕ್ವಾರೆಂಟೇನ್ ಸೌಲಭ್ಯಕ್ಕಾಗಿ ಬಸ್, ಡಿಪೋ, ರೈಲ್ವೆ ಸ್ಟೇಷನ್ ಮತ್ತು ವಿಮಾನ ನಿಲ್ದಾಣಗಳಲ್ಲಿ ನಡೆಸುವ ಕ್ಯಾಂಟೀನ್‌ಗಳು ಹೊರತುಪಡಿಸಿ, ಹೋಟೇಲ್‌ಗಳು/ರೆಸ್ಟೋರೆಂಟ್‌ಗಳು; ಇತರೆ ಆತಿಥ್ಯ ಸೇವೆಗಳನ್ನು ನಿಷೇಧಿಸಿದೆ. ಆಹಾರ ಪದಾರ್ಥಗಳು/ಪಾರ್ಸಲ್ಗಳನ್ನು ಮನೆ ವಿತರಣೆಗಾಗಿ ರೆಸ್ಟೋರೆಂಟ್‌ಗಳ ಅಡಿಗೆ ಮನೆಗಳನ್ನು ನಿರ್ವಹಿಸಲು ಅನುಮತಿ ನಿಡಲಾಗಿದೆ.

v. ಎಲ್ಲಾ ಸಿನಿಮಾ ಮಂದಿರಗಳು, ಶಾಂಪಿಂಗ್ ಮಾಲ್‌ಗಳು, ಜಿಮ್‌ಗಳು, ಈಜು ಕೊಳಗಳು, ಮನರಂಜನಾ ಪಾರ್ಕ್‌ಗಳು, ಬಾರ್‌ಗಳು ಮತ್ತು ಆಡಿಟೋರಿಯಂಗಳು, ಸಮಾವೇಶ ಮಂದಿರಗಳು ಮತ್ತು ಇಂತಹ ಇತರೆ ಸ್ಥಳಗಳು, ಕ್ರೀಡಾ ಸಂಕೀರ್ಣಗಳು ಮತ್ತು ಸ್ಟೇಡಿಯಂಗಳನ್ನು ತೆರೆಯಲು ಅನುಮತಿಸಲಾಗಿದೆ. ಆದರೆ ಪ್ರೇಕ್ಷಕರಿಗೆ ಅನುಮತಿ ಇರುವುದಿಲ್ಲ.

vi. ಎಲ್ಲಾ ಸಾಮಾಜಿಕ /ರಾಜಕೀಯ /ಕ್ರೀಡೆ /ಮನರಂಜನೆ /ಶೈಕ್ಷಣಿಕ/ ಸಾಂಸ್ಕೃತಿಕ/ ಧಾರ್ಮಿಕ ಕಾರ್ಯಕ್ರಮಗಳು/ಇತರೆ ಗುಂಪುಗೂಡುವಿಕೆ/ದೊಡ್ಡ ಸಭೆಗಳು.

vii. ಎಲ್ಲಾ ಧಾರ್ಮಿಕ ಸ್ಥಳಗಳು/ಪೂಜನೀಯ ಸ್ಥಳಗಳು ಸಾರ್ವಜನಿಕರಿಗೆ ಮುಚ್ಚತಕ್ಕದ್ದು. ಧಾರ್ಮಿಕ ಸಭೆಗಳನ್ನು ಕಟ್ಟು ನಿಟ್ಟಾಗಿ ನಿಷೇಧಿಸಿದೆ.

3. **ಈ ಕೆಳಗಿನ ಚಟುವಟಿಕೆಗಳನ್ನು ನಿರ್ಬಂಧಗಳೊಂದಿಗೆ ಕಂಟೈನ್‌ಮೆಂಟ್ ವಲಯಗಳನ್ನು ಹೊರತುಪಡಿಸಿ ಅನುಮತಿಸಲಾಗಿದೆ.**

i. ಪ್ರಯಾಣಿಕರ ವಾಹನಗಳು ಮತ್ತು ಬಸ್ಸುಗಳ ಅಂತರ-ರಾಜ್ಯ ಚಲನೆ, ರಾಜ್ಯ (ಗಳು)/ ಯುಟಿ (ಗಳ) ಪರಸ್ಪರ ಒಪ್ಪಿಗೆಯೊಂದಿಗೆ ಅನುಮತಿಸಿದೆ. ಕೆ.ಎಸ್.ಆರ್.ಟಿ.ಸಿ /ಎನ್‌ಇಕೆಆರ್‌ಟಿಸಿ /ಎನ್‌ಡಬ್ಲ್ಯೂಕೆಎಸ್‌ಆರ್‌ಟಿಸಿ ಬಸ್‌ಗಳ ಅಂತರ್ ರಾಜ್ಯ ಸಂಚಾರಕ್ಕೆ ಮುಂಚಿತವಾಗಿ ಸಂಬಂಧಿಸಿದ ರಾಜ್ಯ(ಗಳ) ಯುಟಿ(ಗಳ) ಒಪ್ಪಿಗೆಯನ್ನು ಮತ್ತು ಕರ್ನಾಟಕ ರಾಜ್ಯ ಸರ್ಕಾರದ ಅನುಮತಿ ಪಡೆಯತಕ್ಕದ್ದು.

ii. ರಾಜ್ಯಾದ್ಯಂತ ಪ್ರವಾಸಿ ವಾಹನಗಳು, ರೈಲುಗಳು ಮತ್ತು ಬಸ್ಸುಗಳು ಒಳಗೊಂಡಂತೆ ಸಾರಿಗೆ ಬಸ್ ಸೇವೆ, ಮಫೋಸಿಲ್ ಬಸ್ ಸರ್ವಿಸ್, ಸಬ್ ಅರ್ಬನ್ ರೈಲು ಸೇವೆಗಳು ಮತ್ತು ಖಾಸಗಿ ಬಸ್ಸುಗಳು ಸಾಮಾಜಿಕ ಅಂತರ ಕ್ರಮಗಳನ್ನು ಕೈಗೊಂಡು ಸಂಚಿರಿಸಲು ಅನುಮತಿಸಿದೆ. ಜನರ ಮತ್ತು ವಾಹನದ ಅಂತರ ಜಿಲ್ಲಾ ಸಂಚಾರಕ್ಕೆ ಯಾವುದೇ ಪಾಸ್ ಅಗತ್ಯವಿಲ್ಲ.

iii. ವ್ಯಕ್ತಿಗಳ ಚಲನೆಗಾಗಿ ಸ್ಟ್ಯಾಂಡರ್ಡ್ ಆಪರೇಟಿಂಗ್ ಪ್ರೋಸೀಜರ್ಸ್ (ಎಸ್‌ಒಪಿ) ಅನುಬಂಧ-1 ರಲ್ಲಿ ಉಲ್ಲೇಖಿಸಿರುವಂತೆ, ಕಾರ್ಯನಿರ್ವಹಿಸುವುದನ್ನು ಮುಂದುವರಿಸಲಾಗಿದೆ.

iv. ಟ್ಯಾಕ್ಸಿಗಳು, (ಚಾಲಕ ಮತ್ತು ಗರಿಷ್ಠ ಇಬ್ಬರು ಪ್ರಯಾಣಿಕರು) ಆಟೋ ರಿಕ್ಷಾಗಳು (ಚಾಲಕ ಮತ್ತು ಗರಿಷ್ಠ ಇಬ್ಬರು ಪ್ರಯಾಣಿಕರು) ಮತ್ತು ಮ್ಯಾಕ್ಸಿ ಕ್ಯಾಬ್‌ಗಳು ಮತ್ತು ಸಂಗ್ರಾಹಕರ (aggregators) ಸೇವೆಗಳನ್ನು ಸಾಮಾಜಿಕ ಅಂತರ ಕ್ರಮಗಳನ್ನು ಕೈಗೊಂಡು ಸಂಚರಿಸಲು ಅನುಮತಿಸಿದೆ.

v. ಕ್ಷೌರ ಅಂಗಡಿಗಳು, ಸ್ಪಾ ಮತ್ತು ಸಲೂನ್‌ಗಳು ಸೇರಿದಂತೆ ಎಲ್ಲಾ ಅಂಗಡಿಗಳು ಕಾರ್ಯನಿರ್ವಹಿಸಲು ಅನುಮತಿಸಿದೆ. ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಹೊರಡಿಸಲಾಗುವ ಪ್ರಮಾಣಿತ ಕಾರ್ಯಾಚರಣಾ ವಿಧಾನದ ಪ್ರಕಾರ ಕ್ಷೌರ ಅಂಗಡಿಗಳು, ಸ್ಪಾಗಳು ಮತ್ತು ಸಲೂನ್‌ಗಳು ಕಾರ್ಯನಿರ್ವಹಿಸಲು ಅನುಮತಿಸಲಾಗಿದೆ.

vi. ಈ ಮಾರ್ಗಸೂಚಿಗಳು ಮತ್ತು ರಾಷ್ಟ್ರೀಯ ನಿರ್ದೇಶನಗಳಿಗೆ (ಅನುಬಂಧ-2) ಒಳಪಟ್ಟ ನಿರ್ದಿಷ್ಟ ಸಮಯಗಳ ನಡುವೆ ಸರ್ಕಾರಿ/ಬಿ.ಬಿ.ಎಂ.ಪಿ ಉದ್ಯಾನಗಳು ಸಾರ್ವಜನಿಕರಿಗಾಗಿ ತೆರೆದಿರುತ್ತವೆ.

4. **<u>ಕೋವಿಡ್-19 ನಿರ್ವಹಣೆ ಸಂಬಂಧ ರಾಷ್ಟ್ರೀಯ ನಿರ್ದೇಶನಗಳು :</u>**

ಕೋವಿಡ್-19 ನಿರ್ವಹಣೆಗೆ ರಾಷ್ಟ್ರೀಯ ನಿರ್ದೇಶನಗಳು, **<u>ಅನುಬಂಧ-II</u>** ರಲ್ಲಿ ನಿರ್ದಿಷ್ಟಪಡಿಸಿದಂತೆ, ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಅನುಸರಿಸುವುದು.

5. **ಕಂಟೈನ್‌ಮೆಂಟ್, <u>ಬಫರ್, ಕೆಂಪು, ಕಿತ್ತಳೆ ಮತ್ತು ಹಸಿರು ವಲಯಗಳು :</u>**

i. ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮಾರ್ಗಸೂಚಿಗಳನ್ನು ಗಣನೆಗೆ ತೆಗೆದುಕೊಂಡು ಕಂಟೈನ್‌ಮೆಂಟ್ ವಲಯಗಳು ಮತ್ತು ಬಫರ್ ವಲಯಗಳನ್ನು ಜಿಲ್ಲೆಯ ಪ್ರಾಧಿಕಾರಿಗಳು ಗುರುತಿಸುವುದು.

ii. ಕಂಟೈನ್‌ಮೆಂಟ್ ವಲಯಗಳಲ್ಲಿ ಅಗತ್ಯ ಚಟುವಟಿಕೆಗಳನ್ನು ಮಾತ್ರ ಅನುಮತಿಸಲಾಗಿದೆ. ವೈದ್ಯಕೀಯ ತುರ್ತುಸ್ಥಿತಿಗಳನ್ನು ಹೊರತುಪಡಿಸಿ ಮತ್ತು ಅಗತ್ಯ ಸರಕು ಮತ್ತು ಸೇವೆಗಳ ಪೂರೈಕೆಯನ್ನು ಕಾಪಾಡಿಕೊಳ್ಳಲು ಈ ವಲಯಗಳಲ್ಲಿ ಅಥವಾ ಹೊರಗೆ ಜನರ ಚಲನೆ ಇಲ್ಲ ಎಂದು ಖಚಿತಪಡಿಸಿಕೊಳ್ಳಲು ಕಟ್ಟುನಿಟ್ಟಾದ ಪರಿಧಿಯ ನಿಯಂತ್ರಣ ಇರುತ್ತದೆ. ಮೇಲಿನ ಉದ್ದೇಶಕ್ಕಾಗಿ ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಹೊರಡಿಸುವ ಮಾರ್ಗಸೂಚಿಗಳನ್ನು ಗಣನೆಗೆ ತೆಗೆದುಕೊಳ್ಳುವುದು.

iii. ಕಂಟೈನ್‌ಮೆಂಟ್ ವಲಯಗಳಲ್ಲಿ, ಅಗತ್ಯವಿರುವಂತೆ ತೀವ್ರವಾದ ಸಂಪರ್ಕ ಪತ್ತೆ ಹಚ್ಚುವಿಕೆ, ಮನೆ-ಮನೆಗೆ ಕಣ್ಗಾವಲು ಮತ್ತು ಇತರೆ ವೈದ್ಯಕೀಯ ಸೇವೆಗಳು ಇರುತ್ತವೆ.

iv. ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಉತ್ತಮ ಮೇಲ್ವಿಚಾರಣೆಗಾಗಿ ಮಾತ್ರ ವಾರ್ಡ್‌ಗಳನ್ನು ಕೆಂಪು, ಕಿತ್ತಳೆ ಮತ್ತು ಹಸಿರು ಬಣ್ಣಗಳಾಗಿ ವರ್ಗೀಕರಿಸುತ್ತದೆ. ಈ ಮಾರ್ಗಸೂಚಿಗಳ ಅಡಿಯಲ್ಲಿ ಅನುಮತಿಸಲಾದ ಚಟುವಟಿಕೆಗಳಿಗೆ ಯಾವುದೇ ಹೆಚ್ಚಿನ ನಿರ್ಬಂಧಗಳನ್ನು ವಿಧಿಸುವ ಉದ್ದೇಶದಿಂದ ಈ ವಲಯಗಳ ವರ್ಗೀಕರಣವನ್ನು ಉಲ್ಲೇಖಿಸುವಂತಿಲ್ಲ.

6. ದುರ್ಬಲ ವ್ಯಕ್ತಿಗಳ ಸುರಕ್ಷತೆ

ಅಗತ್ಯ ಹಾಗೂ ಆರೋಗ್ಯ ಉದ್ದೇಶಗಳನ್ನು ಹೊರತುಪಡಿಸಿ 65 ವರ್ಷ ಮೇಲ್ಪಟ್ಟ ವ್ಯಕ್ತಿಗಳು, ಸಹ-ಅಸ್ವಸ್ಥತೆ ಹೊಂದಿರುವ ವ್ಯಕ್ತಿಗಳು, ಗರ್ಭಿಣಿಯರು, 10 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಮನೆಯಲ್ಲಿಯೇ ಇರತಕ್ಕದ್ದು.

7. **ನಿರ್ದಿಷ್ಟವಾಗಿ ನಿಷೇಧಿಸಲಾಗಿರುವ ಚಟುವಟಿಕೆಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಚಟುವಟಿಕೆಗಳನ್ನು ಅನುಮತಿಸಲಾಗಿದೆ.**

**ಆದಾಗ್ಯೂ, ಕಂಟೈನ್‌ಮೆಂಟ್ ವಲಯಗಳಲ್ಲಿ, ಮೇಲಿನ ಪ್ಯಾರಾ 5(ii) ರಲ್ಲಿ ಅಗತ್ಯಪಡಿಸಿರುವ ಚಟುವಟಿಕೆಗಳನ್ನು ಮಾತ್ರ ಅನುಮತಿಸಲಾಗಿದೆ.**

**ಇದಲ್ಲದೆ, ಕರ್ನಾಟಕ ಸರ್ಕಾರವು ಪರಿಸ್ಥಿಯ ಮೌಲ್ಯಮಾಪನದ ಆಧಾರದ ಮೇಲೆ, ವಿವಿಧ ವಲಯಗಳಲ್ಲಿ ಕೆಲವು ಇತರ ಚಟುವಟಿಕೆಗಳನ್ನು ನಿಷೇಧಿಸಬಹುದು, ಅಥವಾ ಅಗತ್ಯವೆಂದು ಪರಿಗಣಿಸುವಂತಹ ನಿರ್ಬಂಧಗಳನ್ನು ವಿಧಿಸಬಹುದು.**

8. **ಕೆಲವೊಂದು ಸಂದರ್ಭಗಳಲ್ಲಿ ವ್ಯಕ್ತಿಗಳು ಹಾಗೂ ಸರಕುಗಳ ಚಲನೆಯನ್ನು ಖಚಿತಪಡಿಸಿಕೊಳ್ಳಲು ವಿಶೇಷ ನಿರ್ದೇಶನಗಳು**

I. ಬೆಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ ಯಾವುದೇ ನಿರ್ಬಂಧವಿಲ್ಲದೆ ವೈದ್ಯಕೀಯ ವೃತ್ತಿಪರರು, ದಾದಿಯರು ಮತ್ತು ಪ್ಯಾರಾಮೆಡಿಕಲ್ ಸಿಬ್ಬಂದಿಗಳು, ನೈರ್ಮಲ್ಯ ಸಿಬ್ಬಂದಿ ಮತ್ತು ಆಂಬುಲೆನ್ಸ್‌ಗಳ ಅಂತರ್-ರಾಜ್ಯ ಮತ್ತು ರಾಜ್ಯದೊಳಗಿನ ಚಲನೆಯನ್ನು ಅನುಮತಿಸತಕ್ಕದ್ದು.

II. ಖಾಲಿ ಟ್ರಕ್‌ಗಳನ್ನು ಒಳಗೊಂಡಂತೆ ಅಂತರ್-ರಾಜ್ಯ ಸರಕು ಸಾಗಣಿಕೆಗೆ ಅನುಮತಿಸಿದೆ.

III. ನೆರೆಯ ರಾಷ್ಟ್ರಗಳೊಂದಿಗಿನ ಒಪ್ಪಂದಗಳ ಅಡಿಯಲ್ಲಿ ಭೂ-ಗಡಿ ವ್ಯಾಪಾರಕ್ಕಾಗಿ ಸರಕು ಸಾಗಣೆಯನ್ನು ತಡೆಯಬಾರದು.

**ಆದೇಶ ಸಂಖ್ಯೆ ಎಸ್.ಬಿ/ಗು.ವಾ/ನಿಷೇದಾಜ್ಞೆ/17/2020 ದಿನಾಂಕ : 18.05.2020**

ಈ ದಿಸೆಯಲ್ಲಿ ಭಾಸ್ಕರ್ ರಾವ್, ಐಪಿಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಆದ ನಾನು ದಂಡ ಪ್ರಕ್ರಿಯಾ ಸಂಹಿತೆಯ ಕಲಂ 144(1) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಈ ಕೆಳಕಂಡಂತೆ ಪ್ರತಿಬಂಧಕಾಜ್ಞೆಯನ್ನು ಹೊರಡಿಸಿರುತ್ತೇನೆ.

ಯಾವುದೇ ವ್ಯಕ್ತಿ ಈ ಮೇಲಿನ ನಿಯಂತ್ರಣ ಕ್ರಮಗಳನ್ನು ಉಲ್ಲಂಘಿಸಿದಲ್ಲಿ ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ. 51 ರಿಂದ 60 ರ ಜೊತೆಗೆ ಭಾರತೀಯ ದಂಡ ಸಂಹಿತೆ ಕಲಂ. 188 ರೀತ್ಯಾ ಕಾನೂನು ಕ್ರಮ ಜರುಗಿಸಲಾಗುವುದು.

ಈ ಪ್ರತಿಬಂಧಕಾಜ್ಞೆಯು ದಿನಾಂಕ: 18.05.2020ರ 00.00 ಗಂಟೆಯಿಂದ ದಿನಾಂಕ: 31-05-2020 ರ 00.00 ಗಂಟೆಯವರೆಗೆ ಅವಶ್ಯಕವಾದ ಚಟುವಟಿಕೆಗಳನ್ನು ಹೊರತುಪಡಿಸಿ ಪ್ರತಿದಿನ ಸಂಜೆ 07-00 ಗಂಟೆಯಿಂದ ಬೆಳಗ್ಗೆ 07-00 ಗಂಟೆಯವರೆಗೆ ಹಾಗೂ ಭಾನುವಾರದಂದು ಪೂರ್ಣ ದಿನ ಅನ್ವಯವಾಗುವಂತೆ ಲಾಕ್‌ಡೌನ್ ಜಾರಿಯಲ್ಲಿರುತ್ತದೆ.

ದಿನಾಂಕ: 17.05.2020 ರಂದು ಈ ಕಛೇರಿಯಿಂದ ಹೊರಡಿಸಲಾದ ಪ್ರತಿಬಂಧಕಾಜ್ಞೆಯನ್ನು ರದ್ದುಪಡಿಸಲಾಗಿದೆ.

ಈ ನಿರ್ಬಂಧಗಳು ಹಾಗೂ ವಿನಾಯಿತಿಗಳು ಸೇರಿದಂತೆ ಈ ಸಂಬಂಧ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಆಗಾಗ್ಗೆ ಹೊರಡಿಸುವ ಆದೇಶಗಳು ಹಾಗೂ ವಿನಾಯಿತಿಗಳು ಈ ಪ್ರತಿಬಂಧಕಾಜ್ಞೆಗೆ ಒಳಪಡುತ್ತವೆ.

ಈ ಆದೇಶದಿಂದ ಯಾವುದೇ ವ್ಯಕ್ತಿ ಬಾಧಿತನಾಗಿದ್ದರೆ, ಈ ಆದೇಶದ ಬದಲಾವಣೆ/ಮಾರ್ಪಾಡಿಗೆ ಈ ಕಛೇರಿಯೆದರು ದಂಡ ಪ್ರಕ್ರಿಯ ಸಂಹಿತೆ ಕಲಂ 144(5) ರಡಿ ಅಥವಾ ದಂಡ ಪ್ರಕ್ರೀಯ ಸಂಹಿತೆ ಕಲಂ 144(6) ಮಾನ್ಯ ಘನ ಕರ್ನಾಟಕ ಸರ್ಕಾರದೆದುರು ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

ಈ ಆದೇಶದ ನಡವಳಿಯನ್ನು ನನ್ನ ಸಹಿ ಮತ್ತು ನನ್ನ ಕಛೇರಿಯ ಮೊಹರಿನಲ್ಲಿ 2020 ರ ಮೇ ಮಾಹೆಯ ದಿನಾಂಕ 18 ರಂದು ಹೊರಡಿಸಲಾಗಿದೆ.

ಈ ಆದೇಶವನ್ನು ಕರ್ನಾಟಕ ಘನ ಸರ್ಕಾರದ ಸನ್ನಿಧಿಗೆ ಸಲ್ಲಿಸಲಾಗಿದೆ.

SEAL OF THE COMMISSIONER OF POLICE AND DISTRICT MAGISTRATE BANGALORE CITY.

( ಭಾಸ್ಕರ್ ರಾವ್ )
ಪೊಲೀಸ್ ಆಯುಕ್ತರು ಹಾಗೂ
ಅಪರ ಜಿಲ್ಲಾ ದಂಡಾಧಿಕಾರಿಗಳು
ಬೆಂಗಳೂರು ನಗರ.

ಗೆ,

1. ಸಂಕಲನಕಾರರು (Compiler), ಕರ್ನಾಟಕ ರಾಜ್ಯ ಪ್ರಪತ್ರ, ಬೆಂಗಳೂರು ರವರು ಈ ಆದೇಶವನ್ನು ವಿಶೇಷ ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಕೋರಲಾಗಿದೆ.
2. ಸಂಬಂಧಪಟ್ಟವರಿಗೆ

ಕರ್ನಾಟಕ ಸರ್ಕಾರ

(ಪೊಲೀಸ್ ಇಲಾಖೆ)

ಪೊಲೀಸ್ ಆಯುಕ್ತರು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ರವರ ನಡವಳಿಗಳು

**ಉಪಸ್ಥಿತರು**: ಭಾಸ್ಕರ್ ರಾವ್, ಐ.ಪಿ.ಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ.

ವಿಷಯ : ದಿನಾಂಕ: 25.06.2020 ರಿಂದ ದಿನಾಂಕ: 03.07.2020 ರವರೆಗೆ ನಡೆಯುವ ಎಸ್.ಎಸ್.ಎಲ್.ಸಿ. ಪರೀಕ್ಷೆಯ ಪರೀಕ್ಷಾ ಕೇಂದ್ರಗಳ ಸುತ್ತಲು ಪ್ರತಿಬಂಧಕಾಜ್ಞೆಯನ್ನು ವಿಧಿಸುವ ಬಗ್ಗೆ.

ಉಲ್ಲೇಖ :
1. ಉಪ ನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಉತ್ತರ ಜಿಲ್ಲೆ ರವರ ಕಛೇರಿಯ ಪತ್ರ ಸಂಖ್ಯೆ: ಸಿ5.ಎಸ್.ಎಸ್.ಎಲ್.ಸಿ.ಪ-2020/2/2019-2020, ದಿನಾಂಕ: 03-06-2020
2. ಉಪ ನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ ರವರ ಕಛೇರಿಯ ಪತ್ರ ಸಂಖ್ಯೆ: ಆ4.ಎಸ್.ಎಸ್.ಎಲ್.ಸಿ/ಮಾ-ಏ/2020/ಪ.ಕೇ.ರ/27/2019-2020, ದಿನಾಂಕ: 02.06.2020

ಪ್ರಸ್ತಾವನೆ:

ದಿನಾಂಕ: 25.06.2020 ರಿಂದ ದಿನಾಂಕ: 03.07.2020 ರವರೆಗೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ಜೂನ್/ಜುಲೈ-2020 ರ ಎಸ್.ಎಸ್.ಎಲ್.ಸಿ. ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷೆಗಳನ್ನು ಸುಗಮವಾಗಿ ಹಾಗೂ ಸುವ್ಯವಸ್ಥಿತವಾಗಿ ನಡೆಸುವ ಸಲುವಾಗಿ ಪರೀಕ್ಷೆಗಳು ನಡೆಯುವ ದಿನಗಳಂದು ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯ ಪ್ರದೇಶಕ್ಕೆ ಅನ್ವಯಿಸುವಂತೆ ನಿಷೇದಾಜ್ಞೆ ಹೊರಡಿಸಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಇರುವ ಜೆರಾಕ್ಸ್ ಕೇಂದ್ರ ಮತ್ತು ಸೈಬರ್ ಕೇಂದ್ರಗಳನ್ನು ಬೆಳಗ್ಗೆ 09-00 ಗಂಟೆಯಿಂದ ಮದ್ಯಾಹ್ನ 1-30 ಗಂಟೆಯವರೆಗೆ ಮುಚ್ಚುವಂತೆ ಆದೇಶ ಹೊರಡಿಸಲು ಉಲ್ಲೇಖಿತ ಪತ್ರಗಳಲ್ಲಿ ಉಪ ನಿರ್ದೇಶಕರು (ಆಡಳಿತ), ಬೆಂಗಳೂರು ಉತ್ತರ ಜಿಲ್ಲೆ ಹಾಗೂ ದಕ್ಷಿಣ ಜಿಲ್ಲೆ ರವರು ಕೋರಿರುತ್ತಾರೆ.

ಈ ವಿಷಯದ ಬಗ್ಗೆ ನಾನು ಖುದ್ದಾಗಿ ಮಾಡಿದ ವಿಚಾರಣೆಯಿಂದ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಗಳನ್ನು ಸುಸೂತ್ರವಾಗಿ ಹಾಗೂ ದೋಷರಹಿತವಾಗಿ ನಡೆಸುವ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯ ಪ್ರದೇಶಕ್ಕೆ ಅನ್ವಯಿಸುವಂತೆ ನಿಷೇದಾಜ್ಞೆ ಹೊರಡಿಸುವುದು ಅಗತ್ಯವಿರುವುದನ್ನು ಮನಗಂಡಿರುತ್ತೇನೆ. ಆದ್ದರಿಂದ ಈ ಆದೇಶ-

**ಆದೇಶ ಸಂಖ್ಯೆ : ಎಸ್.ಬಿ/ಗು.ವಾ/ನಿಷೇದಾಜ್ಞೆ-20/2020, ದಿನಾಂಕ: 20.06.2020**

ಈ ದಿಸೆಯಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ಸುಸೂತ್ರವಾಗಿ ಹಾಗೂ ದೋಷರಹಿತವಾಗಿ ನಡೆಸುವ ದೃಷ್ಟಿಯಿಂದ, ನನಗೆ ದಂಡ ಪ್ರಕ್ರಿಯಾ ಸಂಹಿತೆಯ ಕಲಂ 144ನೇ ಪ್ರಕರಣದ ಅನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಭಾಸ್ಕರ್ ರಾವ್, ಐಪಿಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಆದ ನಾನು, ದಿನಾಂಕ: 25.06.2020 ರಿಂದ ದಿನಾಂಕ: 03.07.2020 ರವರೆಗೆ ರವರೆಗೆ ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಗಳು ನಡೆಯುವ ಸಮಯದಲ್ಲಿ ಎಲ್ಲಾ ಪರೀಕ್ಷಾ ಕೇಂದ್ರಗಳ 200 ಮೀಟರ್ ಸುತ್ತಲಿನ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಜೆರಾಕ್ಸ್ ಅಂಗಡಿಗಳು ಮತ್ತು ಸೈಬರ್ ಕೇಂದ್ರಗಳನ್ನು ಪರೀಕ್ಷೆ ನಡೆಯುವ ದಿನಗಳಂದು ಬೆಳಗ್ಗೆ 09-00 ಗಂಟೆಯಿಂದ ಮದ್ಯಾಹ್ನ 01-30 ಗಂಟೆಯವರೆಗೆ ಮುಚ್ಚುವಂತೆ ಘೋಷಿಸಿ ಪ್ರತಿಬಂಧಕಾಜ್ಞೆಯನ್ನು ವಿಧಿಸಿ ಆದೇಶ ಹೊರಡಿಸಿರುತ್ತೇನೆ.

.....2]

ಈ ನಡವಳಿಯನ್ನು ನನ್ನ ಸಹಿ ಮತ್ತು ನನ್ನ ಕಛೇರಿಯ ಮೊಹರಿನಲ್ಲಿ 2020 ರ ಜೂನ್ ಮಾಹೆಯ ದಿನಾಂಕ 20 ರಂದು ಹೊರಡಿಸಲಾಗಿದೆ.

( ಭಾಸ್ಕರ್ ರಾವ್)
ಪೊಲೀಸ್ ಆಯುಕ್ತರು ಹಾಗೂ
ಅಪರ ಜಿಲ್ಲಾ ದಂಡಾಧಿಕಾರಿಗಳು,
ಬೆಂಗಳೂರು ನಗರ.

**ಪ್ರತಿಯನ್ನು:**

1. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಹೆಚ್ಚುವರಿ ಪೊಲೀಸ್ ಆಯುಕ್ತರುಗಳು
2. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಜಂಟಿ ಪೊಲೀಸ್ ಆಯುಕ್ತರುಗಳು,
3. ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಉಪ ಪೊಲೀಸ್ ಆಯುಕ್ತರುಗಳು

**ಪ್ರತಿಯನ್ನು ಅಭಿನಂದನೆಗಳೊಂದಿಗೆ:**

1. ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ಕರ್ನಾಟಕ ರಾಜ್ಯ, ವಿಧಾನಸೌಧ, ಬೆಂಗಳೂರು.
2. ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.
3. ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ರಾಜ್ಯ ಗುಪ್ತವಾರ್ತೆ, ಕರ್ನಾಟಕ ರಾಜ್ಯ, ಬೆಂಗಳೂರು.
4. ಕಾರ್ಯದರ್ಶಿಗಳು, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳ, ಬೆಂಗಳೂರು.
5. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ, ಕಲಾಸಿಪಾಳ್ಯ, ಬೆಂಗಳೂರು.
7. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಕೆಂಪೇಗೌಡ ರಸ್ತೆ, ಬೆಂಗಳೂರು.